ಸಂಪುಟ: 14 Volume | ಸಂಚಿಕೆ: 74 Issue | ಪುಟಗಳು 08 Pages | ಬುಧವಾರ 24 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಕಾಲದ ಮರಳಿನಲ್ಲಿ ಹೆಜ್ಜೆ ಗುರುತುಗಳನ್ನು ಬಿಡು. ಕಾಲನ್ನೆಳೆಯುತ್ತಾ ನಡೆಯಬೇಡ.
–ಎ.ಪಿ.ಜೆ.ಅಬ್ದುಲ್ ಕಲಾಂ



ನಿನ್ನೆ ಲಿಂಗೈಕ್ಯರಾದ ಕನಕಪುರ ದೇಗುಲ ಮಠದ ಹಿರಿಯ ಶ್ರೀಗಳು ಹಾಗೂ ತ್ರಿವಿಧ ದಾಸೋಹದ ಮೂಲಕ ಸಮಾಜಕ್ಕೆ ಅಪಾರ ಕೊಡುಗೆ ನೀಡಿದ ಪೂಜ್ಯ ಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳವರ ಅಂತ್ಯಸಂಸ್ಕಾರದ ವೇಳೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷ ಈಶ್ವರ ಬಿ ಖಂಡ್ರೆ ಅಂತಿಮ ನಮನ ಸಲ್ಲಿಸಿ, ಗದ್ದುಗೆಗೆ ವಿಭೂತಿ ಸಮರ್ಪಣೆ ಮಾಡಿದರು.



ನಿನ್ನೆಯ ದಿನ ಶಿವೈಕ್ಯರಾದ ಕನಕಪುರದ ಶ್ರೀ ದೇಗುಲ ಮಠದ ಹಿರಿಯ ಪೂಜ್ಯರಾದ ಶ್ರೀ ಶ್ರೀ ಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮೀಜಿಗಳವರ ಅಂತಿಮ ದರ್ಶನ ಪಡೆದು ನಮನ ಅರ್ಪಿಸಿದ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ವಿಜಯಾನಂದ ಕಾಶಪ್ಪನವರ್.



ಬೆಂಗಳೂರಿನಲ್ಲಿರುವ ರಿಪಬ್ಲಿಕ್ ಆಫ್ ಪೋಲಂಡ್‌ನ ಗೌರವಾನ್ವಿತ ರಾಯಭಾರಿ ರಘು ರಾಜಪ್ಪ ಹಾಗೂ ಜ್ಮಾವ್ (TZmo) ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕಿ ಅಲಿನಾ ಪೋಸ್ಲಸ್ನಿ ಅವರು ಸಿಎಂ ಡಿಕೆ ಶಿವಕುಮಾರ್ ಅವರನ್ನು ವಿಧಾನಸೌಧದಲ್ಲಿ ಮಂಗಳವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿದರು. ಸಿಎಂ ಆರ್ಥಿಕ ಸಲಹೆಗಾರ ಎಲ್ ಕೆ ಅತೀಕ್ ಉಪಸ್ಥಿತರಿದ್ದರು.

## ಅಮೃತ ವನ ಮಾದರಿಯ ಅರಣ್ಯ ನಿರ್ಮಾಣ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ



ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಕುಸಿಯುತ್ತಿರುವ ಅಂತರ್ಜಲ ಮಟ್ಟ, ಮಳೆಯ ಕೊರತೆ ಮತ್ತು ಹೆಚ್ಚುತ್ತಿರುವ ನೀರಿನ ಬವಣೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಅಮೃತ ವನ (ಮಿಯವಾಕಿ) ಮಾದರಿಯ ಅರಣ್ಯ ನಿರ್ಮಾಣದ ಮಹತ್ವಾಕಾಂಕ್ಷಿ ಕಾರ್ಯ ಸಾಧನೆಗೆ ನಿರಂತರವಾಗಿ ಪ್ರಯತ್ನ ಮಾಡಲಾಗುತ್ತಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರನ್ಯಾಯಾಧೀಶ ರಾಮಲಿಂಗೇಗೌಡ ತಿಳಿಸಿದರು.

ನಗರದ ಹೊರವಲಯದ ಕೆ.ವಿ. ಕ್ಯಾಂಪಸ್‌ನಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ದರೆ ಫೌಂಡೇಶನ್, ಬೆಂಗಳೂರು ಹಾಗೂ ಕೆ.ವಿ. ಮತ್ತು ಪಂಚಗಿರಿ ವಿದ್ಯಾಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ ಆಯೋಜಿಸಿದ್ದ ಸ್ವಯಂಪ್ರೇರಿತ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಜಿಲ್ಲೆಯ ಅನೇಕ ಭಾಗಗಳಲ್ಲಿ ಅಂತರ್ಜಲ ಮಟ್ಟ ಸಾವಿರ ಅಡಿಗೆ ಕುಸಿದಿರುವುದು ಕಳವಳಕಾರಿ ಸಂಗತಿಯಾಗಿದೆ. ಇದರಿಂದ ರೈತರು, ಗ್ರಾಮೀಣ ಪ್ರದೇಶದ ನಿವಾಸಿಗಳು ಹಾಗೂ ನಗರ ಪ್ರದೇಶದ ಜನರು ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಪರಿಸರ ಸಂರಕ್ಷಣೆ ಮತ್ತು ಮಳೆ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ವೈಜ್ಞಾನಿಕವಾಗಿ ವೇಗವಾಗಿ ಬೆಳೆಯುವ ಮಿಯವಾಕಿ ಮಾದರಿಯ ಅರಣ್ಯೀಕರಣಕ್ಕೆ ಆದ್ಯತೆ ನೀಡಲಾಗಿದೆ ಎಂದು ಹೇಳಿದರು.

## ವಿದೇಶಿ ಪ್ರವಾಸಕ್ಕೆ ಸಿಎಂ ಶುಭ ಹಾರೈಕೆ



• ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ

ನಗರದ ಎಸ್ ಎಸ್ ಕೆ ಬಸವೇಶ್ವರ ಕಲಾ ವಿಜ್ಞಾನ ವಾಣಿಜ್ಯ ಸ್ನಾತಕ ಮತ್ತು ಸ್ನಾತಕೋತ್ತರ ಮಹಾವಿದ್ಯಾಲಯದಿಂದ ಯು. ಕೆ (ಇಂಗ್ಲೇಂಡ್)ಗೆ ಉನ್ನತ ಶೈಕ್ಷಣಿಕ ಮಾಹಿತಿ ಪಡೆಯಲು ಆಯ್ಕೆಯಾಗಿರುವ ಮಹಾವಿದ್ಯಾಲಯದ ವಿದ್ಯಾರ್ಥಿಗಳಾದ ಕು. ಸ್ವಾತಿ ತಂದೆ ದತ್ತಾತ್ರೇಯ ಬಟಗೇರಾ, ಕು.ಜಕೀಯಾ ಬೆಗಂ ತಂದೆ ಅನ್ಸರ ಅಲಿ ಚಿತ್ತಕೊಟ್ಟಾ ಕೆ, ಮತ್ತು ಕು. ಶಿವಲಿಂಗಪ್ಪಾ ತಂದೆ ಅಂಬಾರಾಯ ಎಕಲೂರ ಆಯ್ಕೆಯಾಗಿರುವ ವಿದ್ಯಾರ್ಥಿಗಳಿಗೆ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ ಅವರು ಬೆಂಗಳೂರಿನಲ್ಲಿ ಸನ್ಮಾನಿಸಿ ಪ್ರವಾಸಕ್ಕೆ ಶುಭ ಹಾರೈಸಿದರು. ವಿದ್ಯಾರ್ಥಿಗಳ ಈ ಸಾಧನೆಗೆ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಮಾತೋಶ್ರೀ ಡಾ. ದಾಕ್ಷಾಯಣಿ ಎಸ್ ಅಪ್ಪ ಅವರು, ಕಾರ್ಯದರ್ಶಿಗಳಾದ ಬಸವರಾಜ ದೇಶಮುಖ್, ಹಾಗೂ ಮಹಾವಿದ್ಯಾಲಯದ ಪ್ರಾಂಶುಪಾಲರು ಮತ್ತು ಬೋಧಕ ಮತ್ತು ಬೋಧೇತರ ಸಿಬ್ಬಂದಿಗಳು ಹರ್ಷ ವ್ಯಕ್ತಪಡಿಸಿದರು.

# ಆಣೆ ಪ್ರಮಾಣಕ್ಕೆ ಹೈ ಬ್ರೇಕ್

### ಅಡ್ಡ ಮತದಾನದ ಪ್ರಕರಣ ದಿನಕ್ಕೊಂದು ತಿರುವು | ದಿಲ್ಲಿಯ ನಾಯಕರಿಗೂ ತಲೆ ಬಿಸಿ ತರಿಸಿದ ರಾಜ್ಕೀಯ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಅಡ್ಡ ಮತದಾನದ ಪ್ರಕರಣ ದಿನಕ್ಕೊಂದು ತಿರುವು ಪಡೆಯತೊಡಗಿದೆ. ಶಾಸಕರ ಬಳಿ ಧರ್ಮಸ್ಥಳ ಆಣೆ ಪ್ರಮಾಣ ಅಂತಾ ಮತ್ತೊಂದು ಅವಾಂತರ ಮಾಡಿ ಪಕ್ಷಕ್ಕೆ ಮುಜುಗರ ತರಬೇಡಿ ಎಂದು ಎಂದು ಕರ್ನಾಟಕ ಬಿಜೆಪಿ ನಾಯಕರಿಗೆ ಹೈಕಮಾಂಡ್ ಕ್ಲಾಸ್ ತೆಗೆದುಕೊಂಡಿರುವುದಾಗಿ ತಿಳಿದು ಬಂದಿದೆ. ನಿಮ್ಮ ನಿರ್ಲಕ್ಷ್ಯದಿಂದಲೇ ಈ ಬೆಳವಣಿಗೆಯಾಗಿದೆ. ಮುಂದಿನದ್ದು ನಾವು ನೋಡಿಕೊಳ್ಳುತ್ತೇವೆ ಎಂದು ತಿಳಿಸಿದೆ.

**ಸಭೆ ನಡೆಸಿ ವಿವರಣೆ:** ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಶಾಸಕರ ಅಡ್ಡಮತದಾನ ಹಿನ್ನೆಲೆ ಹೈಕಮಾಂಡ್ ಕರ್ನಾಟಕ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ವಿಪಕ್ಷ ನಾಯಕ ಆರ್ ಅಶೋಕ ಅವರನ್ನು ದೆಹಲಿಗೆ ಕರೆಸಿಕೊಂಡು ಸಭೆ ನಡೆಸಿ ವಿವರಣೆ ಕೇಳಿತು. ಈ ವೇಳೆ ರಾಜ್ಯ ನಾಯಕರನ್ನು ಅಧ್ಯಕ್ಷ ನಿತಿನ್ ನಬಿನ್ ಸಾಲು ಸಾಲು ಪ್ರಶ್ನೆ ಮಾಡಿ ಬೇಸರ ಹೊರ ಹಾಕಿದ್ದಾರೆ ಎಂದು ಮೂಲ ತಿಳಿಸಿವೆ.

**ಪ್ಲಾನ್ ಬದಲಿಸಿದ ವರಿಷ್ಠರು:** ಅಡ್ಡಮತದಾನದ ಬಗ್ಗೆ ಶಾಸಕರಿಂದ ಸತ್ಯಾಸತ್ಯತೆ ತಿಳಿಯಲು ಧರ್ಮಸ್ಥಳಕ್ಕೆ ಕರೆದೊಯ್ದು ಆಣೆ–ಪ್ರಮಾಣ ಮಾಡಿಸಲು ರಾಜ್ಯ ನಾಯಕರು ಸಿದ್ಧತೆ ನಡೆಸಿದ್ದರು. ಇದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ವರಿಷ್ಠರು, ರಾಜಕೀಯಕ್ಕೆ ಪವಿತ್ರ ಕ್ಷೇತ್ರಗಳನ್ನು ಎಳೆದು ತರಬೇಡಿ. ಆಣೆ–ಪ್ರಮಾಣದಂತಹ ನಾಟಕವಾಡಿ ಪಕ್ಷಕ್ಕೆ ಮತ್ತಷ್ಟು ಮುಜುಗರ ತರಬೇಡಿ ಎಂದು ಕಠಿಣವಾಗಿ ಎಚ್ಚರಿಸಿದೆ ಎಂದು ತಿಳಿದು ಬಂದಿದೆ.



#### ಪಕ್ಷದ್ರೋಹಿಗಳಿಗೆ ಶಿಕ್ಷೆ

ಅಡ್ಡಮತದಾನದ ಬಗ್ಗೆ ರಾಷ್ಟ್ರೀಯ ಅಧ್ಯಕ್ಷರೊಂದಿಗೆ ಸುದೀರ್ಘ ಚರ್ಚೆ ನಡೆಸಲಾಗಿದೆ. ಈ ವಿಷಯವನ್ನು ನಮಗೆ ಬಿಡಿ ಎಂದಿದ್ದು, ಪಕ್ಷಕ್ಕೆ ದ್ರೋಹ ಮಾಡಿದವರ ವಿರುದ್ಧ ಈಗಾಗಲೇ ಕ್ರಮ ಜರುಗಿಸಲಾಗಿದೆ. ಭವಿಷ್ಯದ ನಿರ್ಧಾರವನ್ನು ವರಿಷ್ಠರೇ ತೆಗೆದುಕೊಳ್ಳಲಿದ್ದಾರೆ. ಪಕ್ಷ ಸಂಘಟನೆ ಮತ್ತು ಮುಂದಿನ ದಿನಗಳಲ್ಲಿ ಬಿಜೆಪಿಯನ್ನು ರಾಜ್ಯದಲ್ಲಿ ಮತ್ತೆ ಅಧಿಕಾರಕ್ಕೆ ತರುವ ಬಗ್ಗೆ ಸಮಾಲೋಚನೆ ನಡೆಸಲಾಗಿದೆ ಎಂದಿದ್ದಾರೆ ಆರ್.ಅಶೋಕ್.

#### ಸೆರಗಲ್ಲಿ ಮುಚ್ಚಿದ ಕೆಂಡ..!

ಹೈಕಮಾಂಡ್ ನಿಂದ ಬುಲಾವ್ ಬಂದ ಹಿನ್ನೆಲೆಯಲ್ಲಿ ದೆಹಲಿಗೆ ಬಂದಿದ್ದ ಆರ್ ಅಶೋಕ್ ಮತ್ತು ಬಿ ವೈ ವಿಜಯೇಂದ್ರ ಮಾಧ್ಯಮ ಪ್ರತಿನಿಧಿಗಳಿಗೆ ಪ್ರತಿಕ್ರಿಯೆ ನೀಡಿದ್ದು, ಅಡ್ಡ ಮತದಾನದ ಮೂಲಕ ಪಕ್ಷಕ್ಕೆ ಮೋಸ ಮಾಡಿದವರನ್ನು ಸುಮ್ಮನೆ ಬಿಡಲ್ಲ. ಅದು ಸೆರಗಲ್ಲಿ ಮುಚ್ಚಿಟ್ಟ ಕೆಂಡ. ಸತ್ಯ ಆಚೆ ಬಂದೇ ಬರುತ್ತದೆ. ಪಕ್ಷಕ್ಕೆ ದ್ರೋಹ ಬಗೆದವರಿಗೆ ತಕ್ಕ ಬುದ್ಧಿ ಕಲಿಸುತ್ತೇವೆ. ಇಂತಹ ದುಷ್ಕೃತ್ಯ ಮತ್ತೆ ಮಾಡಬಾರದು ಎಂದಿದ್ದಾರೆ.

#### ಪಕ್ಷದ ಹೊಂದಾಣಿಕೆಯ ಕೊರತೆ

ಈ ವಿದ್ಯಮಾನವು ಪಕ್ಷದ ನಾಯಕತ್ವದ ವಿರುದ್ಧ ಆಂತರಿಕ ಅಸಮಾಧಾನವನ್ನು ಬಹಿರಂಗಗೊಳಿಸಿದೆ. ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಮತ್ತು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ್ ಅವರ ಕಾರ್ಯವೈಖರಿಯ ಬಗ್ಗೆ ತೀವ್ರ ಚರ್ಚೆಗೆ ದಾರಿ ಮಾಡಿಕೊಟ್ಟಿದೆ. ಇದು ಕೇವಲ ಮತದಾನದ ವಿಷಯವಷ್ಟೇ ಅಲ್ಲ, ಪಕ್ಷದೊಳಗಿನ ಹೊಂದಾಣಿಕೆಯ ಕೊರತೆಯನ್ನು ಎತ್ತಿತೋರಿಸಿದೆ ಎಂದು ವಿಶ್ಲೇಷಿಸಲಾಗುತ್ತಿದೆ.

#### ಇಬ್ಬರ ವಿರುದ್ಧವೂ ಮುನಿಸು

ವಿಧಾನಸಭೆಯ ಪ್ರತಿಪಕ್ಷದ ನಾಯಕರಾಗಿ ಸರ್ಕಾರದ ವೈಫಲ್ಯಗಳನ್ನು ಸಮರ್ಥವಾಗಿ ಎತ್ತಿ ಹಿಡಿಯುವಲ್ಲಿ ಅಶೋಕ್ ವಿಫಲರಾಗಿದ್ದಾರೆ. ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಕೂಡ ಪಕ್ಷವನ್ನು ಮುನ್ನಡೆಸುವಲ್ಲಿ ಮತ್ತು ಎಲ್ಲಾ ಗುಂಪುಗಳನ್ನು ಒಟ್ಟಾಗಿ ಕರೆದೊಯ್ಯುವಲ್ಲಿ ವಿಫಲರಾಗಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಪಕ್ಷದ ಹಿರಿಯರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ನಿರ್ಧಾರಗಳನ್ನು ಕೈಗೊಳ್ಳಲಾಗುತ್ತಿದೆ ಎಂಬುದು ಪ್ರಮುಖ ದೂರಾಗಿದೆ.

## ಧಾರ್ಮಿಕ ನಾಯಕ ಮುಸ್ಲಿಯಾರ್ ನಿಧನಕ್ಕೆ ಸಂತಾಪ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ದಕ್ಷಿಣ ಕನ್ನಡ ಜಿಲ್ಲೆಯ ಪ್ರಮುಖ ಖಾಝಿ ಹಾಗೂ ಧಾರ್ಮಿಕ ನಾಯಕ ಅಲ್–ಹಾಜ್ ತ್ವಾಖಾ ಅಹ್ಮದ್ ಮುಸ್ಲಿಯಾರ್ ಅವರ ನಿಧನಕ್ಕೆ ಮಾಜಿ ಸಚಿವ ಜಮೀರ್ ಅಹಮದ್ ಖಾನ್ ತೀವ್ರ ಸಂತಾಪ ವ್ಯಕ್ತ ಪಡಿಸಿದ್ದಾರೆ. ತಮ್ಮ ಇಡೀ ಜೀವನ ಧಾರ್ಮಿಕ ಜಾಗೃತಿ, ಶಿಕ್ಷಣ ಮತ್ತು ಸಮಾಜ ಸೇವೆಗೆ ಸಮರ್ಪಿಸಿಕೊಂಡಿದ್ದ ಅಲ್ –ಹಾಜ್ ತ್ವಾಖಾ ಅಹ್ಮದ್ ಮುಸ್ಲಿ ಯಾರ್ ಅವರು ಸಾವಿರಾರು ಜನರಿಗೆ ಮಾರ್ಗದರ್ಶ ನೀಡುತ್ತಿದ್ದರು. ಅವರ ಅಗಲಿಕೆ ಮುಸ್ಲಿಂ ಸಮುದಾಯಕ್ಕೆ ಮಾತ್ರವಲ್ಲದೆ ಸಮಾಜಕ್ಕೆ ತುಂಬಲಾರದ ನಷ್ಟ. ಅವರ ಕುಟುಂಬ ಹಾಗೂ ಅನುಯಾಯಿಗಳಿಗೆ ದೇವರು ದುಃಖ ಭರಿಸುವ ಶಕ್ತಿ ನೀಡಲಿ, ಮೃತರ ಆತ್ಮಕ್ಕೆ ಶಾಂತಿ ದೊರಕಲಿ ಎಂದು ಜಮೀರ್ ಅಹಮದ್ ಖಾನ್ ಅವರು ಪ್ರಾರ್ಥಿಸಿದ್ದಾರೆ.

## ಆರ್‌ಡಿಪಿಆರ್ ಇಂಜಿನಿಯರ್ ಮನೆ ಮೇಲೆ ದಾಳಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಸಿರುಗುಪ್ಪದ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಂಜಿನಿಯರ್ ತಿಪ್ಪೇಸ್ವಾಮಿ ಅವರ ಮನೆ ಮೇಲೆ ಲೋಕಾಯುಕ್ತ ಅಧಿಕಾರಿಗಳು ಮಂಗಳವಾರ ಬೆಳಿಗ್ಗೆ ದಿಢೀರ್ ದಾಳಿ ನಡೆಸಿ ನಡೆಸಿದ್ದಾರೆ. ಆದಾಯಕ್ಕಿಂತ ಹೆಚ್ಚು ಹಣ, ಆಸ್ತಿ ಸಂಪಾದಿಸಿದ ಆರೋಪ ಹಿನ್ನೆಲೆಯಲ್ಲಿ ಲೋಕಾಯುಕ್ತ ಎಸ್ಪಿ ವಾಸುದೇವ ಅವರ ನೇತೃತ್ವದ ತಂಡದ ಅಧಿಕಾರಿಗಳು, ಅವರ ನಿವಾಸ, ಕಚೇರಿ ಸೇರಿ ನಾನಾ ಕಡೆ 3 ತಂಡಗಳು ದಿಢೀರ್ ದಾಳಿ ನಡೆಸಿದ್ದು, ಅಪಾರ ಪ್ರಮಾಣದ ಚಿನ್ನ, ಬೆಳ್ಳಿ, ನಗದು ಹಾಗೂ ಆಸ್ತಿಗಳ ದಾಖಲೆಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ. ಬಳ್ಳಾರಿಯ ಹನುಮಾನ್ ನಗರದ ತಿಪ್ಪೇಸ್ವಾಮಿ ಅವರ ನಿವಾಸ, ಕುಡುತಿನಿ ಪಟ್ಟಣದಲ್ಲಿರುವ ಅವರ ಮತ್ತೊಂದು ನಿವಾಸ, ಸಿರುಗುಪ್ಪ ಪಟ್ಟಣದ ಇಲಾಖೆ ವಸತಿ ಗೃಹದ ಮೇಲೆ ಅಧಿಕಾರಿಗಳು ದಾಳಿ ನಡೆಸಿದ್ದು ವಶಕ್ಕೆ ಪಡೆದು ವಿಚಾರಣೆ ಮುಂದುವರೆಸಿದ್ದಾರೆ.

# ವಿಶ್ವಪರಂಪರೆಯ ತಾಣ, ಅಕ್ರಮ ಮರಳು ಮಾಫಿಯಾ ಕಣಾ..!

• ರಾಜಶೇಖರ್ ವಿಜಯನಗರ (ಹೊಸಪೇಟೆ)

ವಿಶ್ವಪರಂಪರೆಯ ತಾಣ ಹಾಗೂ ಸುಪ್ರಸಿದ್ಧ ಹಂಪಿ ಸಮೀಪದಲ್ಲೇ ಅಕ್ರಮ ಮಣ್ಣುಗಾಣಿಗಾರಿಕೆಯ ಕರ್ಮಕಾಂಡ ಯಥೇಚ್ಛವಾಗಿ ನಡೆಯತೊಡಗಿದೆ. ಒಂದು ವರ್ಷದ ಹಿಂದೆ ರಾಜ್ಯ ಮಟ್ಟದಲ್ಲಿ ಸುದ್ದಿ ಆಗಿದ ಕಾಳಘಟ್ಟ ಅಕ್ರಮ ಕಲ್ಲು ಗಣಿಗಾರಿಕೆ ಇದೀಗ ಮತ್ತೆ ಅದೇ ವ್ಯಾಪ್ತಿಯ ಸರ್ಕಾರಿ ಜಾಗದಲ್ಲಿ ಅಕ್ರಮ ಮಣ್ಣುಗಾಣಿಗಾರಿಕೆ ನಡೆಯುತ್ತಿದೆ.

**ಇಲ್ಲದ ಕಾನೂನು ಹೆಸರಲ್ಲಿ..!:** ವಿಶೇಷವಾಗಿ ಹಗಲಿನಲ್ಲಿ ರಾಜಾರೋಷವಾಗಿ ನಡೆಯುತ್ತಿರುವುದಕ್ಕೆ ವ್ಯಾಪಕ ವಿರೋಧ ವ್ಯಕ್ತವಾಗಿದೆ. ಆದರೂ ಅಧಿಕಾರಿಗಳು ಇಲ್ಲದ ಕಾನೂನು ನೆಪದಲ್ಲಿ ರಾಜಾರೋಷವಾಗಿ ವಡೆಯು ಅಕ್ರಮ ಮಣ್ಣುಗಣಿಗಾರಿಕೆಗೆ ಕುಮ್ಮಕ್ಕು ನೀಡುತ್ತಿರುವುದು ರಾಜ್ಯಾದ್ಯಂತ ಪರಿಸರ ಪ್ರೇಮಿಗಳ ಕಣ್ಣು ಕೆಂಪಗೆ ಮಾಡಿದೆ.

**ಅಧಿಕಾರಿಯಿಂದ ಪರಿಶೀಲನೆ:** ಗಣಿ ಮತ್ತು ಭೂವಿಜ್ಞಾನ ಇಲಾಖೆ ಉಪನಿರ್ದೇಶ ರಿಯಾಜ್‌ಗೆ ಅವರಿಗೆ ದೂರವಾಣಿ ಮುಖಾಂತರ ಅಕ್ರಮ ಮಣ್ಣುಗಾರಿಗಾರಿಕೆ ಬಗ್ಗೆ ತಿಳಿಸಿದಾಗ ಕೂಡಲೇ ನಮ್ಮ ಸಿಬ್ಬಂದಿಯನ್ನು ಕೂಡಲೇ ಕಳಿಸಿಕೊಡುತ್ತೇವೆ. ಪರಿಶೀಲನೆ ಮಾಡಿ ಕ್ರಮ ತೆಗೆದುಕೊಳ್ಳುತ್ತೇವೆ ಎಂದಿದ್ದಾರೆ.

#### ಸರ್ಕಾರಿ ಜಾಗದಲ್ಲೇ ಅಕ್ರಮ ಮರಳು ದಂಧೆ

**ಪಂಚಾಯಿತಿ ಫಜೀತಿ**

ಬೆಳಗೋಡು, ಕಾಳಘಟ್ಟ ಗ್ರಾಮದ ಬಾರ್ಡರ್‌ನಲ್ಲಿ ಸರ್ವೆ ನಂಬರ್ ಎರಡರಲ್ಲಿ ಸರ್ಕಾರಿ ಗುಡ್ಡದ ಜಾಗದಲ್ಲಿ ಅಕ್ರಮವಾಗಿ ಹಗಲಿನಲ್ಲಿ ರಾಜ ರೋಷವಾಗಿ ಗರಸು ಮಣ್ಣು (ಮುರಂ) ಆಗಿದ್ದು ರಾತ್ರಿವೇಳೆ ಸಾಗಣೆಯಾಗುತ್ತಿದೆ. 'ಅಕ್ರಮ ಮಣ್ಣು ಮಾಫಿಯಾ' ದಂಧೆ ಕೋರರು ಮಾಡುತ್ತಿರುವುದು ಖಚಿತ ಮಾಹಿತಿ ಮೇರೆಗೆ ಸುದ್ದಿ ಮಾಡಲು ತೆರಳಿದ ಪತ್ರಕರ್ತರನು ಕಂಡು ದಂಧೆ ಕೋರರು ಹಿಟಾಚಿಯನ್ನು ಮುಳ್ಳಿನ ಜಾಲಿಯಲ್ಲಿ ಬಿಟ್ಟು ಪರಾರಿಯಾಗಿದ್ದಾರೆ.



**ಮುಖ್ಯಮಂತ್ರಿಗಳೇ ಇತ್ತ ಗಮನ ಹರಿಸಿ..!**



#### ಅಕ್ರಮ ಮರಳು ದಂಧೆಗೆ ಪ್ರತ್ಯಕ್ಷ ಸಾಕ್ಷಿ

ಮಣ್ಣು ಆಗಿದ್ದು ಜಾಗದಲ್ಲಿ ಹಿಟಚಿ ಇರುವುದು ಅಕ್ರಮ ಮಣ್ಣು ದಂಧೆಗೆ ಪ್ರತ್ಯಕ್ಷ ಸಾಕ್ಷಿಯಾಗಿದೆ. ಈ ಬಗ್ಗೆ ಕೂಡಲೇ ತಹಸಿಲ್ದಾರ್ ಶೃತಿ ಮಳ್ಳಪ್ಪ ಗೌಡ ಅವರಿಗೆ ದೂರವಾಣಿ ಮುಖಾಂತರ ಮಾತನಾಡಿದಾಗ ಅವರು ಸ್ಪಾಟ್ ಗೆ ಸಿಬ್ಬಂದಿ ಕಳುಹಿಸಿ ಪರಿಶೀಲನೆ ಮಾಡುತ್ತೇವೆ ಎಂದು ಸಬಬು ಹೇಳಿದ್ದಾರೆ. ವಿಲೇಜ್ ಅಕೌಂಟ್ ಗೀತಾಂಜಲಿ ಹಾಗೂ ರಾಜಭಕ್ಷಿ (ತಳವಾರ) ಸ್ಥಳಕ್ಕೆ ಧಾವಿಸಿ ಪರಿಶೀಲಿಸಿದ್ದಾರೆ. ಈ ಬಗ್ಗೆ ಪ್ರಿತಿಕ್ರಿಯೆ ನೀಡಿದ ಅವರು, ಸರ್ಕಾರಿ ಜಾಗದಲ್ಲಿ ಅಕ್ರಮ ಮಣ್ಣುಗಾರಿಕೆ ಮಾಡುವುದು ನಿಜ. ಹಿಟಾಚಿ ದೊರಕಿದೆ. ಇದನ್ನು ಸೀಸ್ ಮಾಡಿ ಐಬಿಗೆ ಶಿಫ್ಟ್ ಮಾಡುತ್ತೇವೆ ಎಂದು ಸ್ಪಷ್ಟಪಡಿಸಿದ್ದಾರೆ.

#### ಸರ್ಕಾರ ಪರವಾನಗಿ ಕೊಡಲ್ಲ ಆದರೆ..!

ಅಕ್ರಮ ಮರಳು ದಂಧೆಗೆ ಸರ್ಕಾರ ಪರವಾನಗಿ ಕೊಡಲ್ಲ. ಅದನ್ನು ನಿಲ್ಲಿಸಿ ಅದರ ಬದಲಿಗೆ ಎಂಸ್ಯಾಂಡ್ ಮರಳು ಬಳಸಲು ಕಟ್ಟುನಿಟ್ಟಿನ ಸೂಚನೆ ನೀಡಿದೆ ಎನ್ನುತ್ತಾರೆ ಇಲಾಖೆಯ ಹಿರಿಯ ಅಧಿಕಾರಿ. ಆದರೆ ಬೆಳಗೋಡ ಗ್ರಾಮದ ಪಟ್ಟ ಭೂಮಿಯಲ್ಲಿ ಸರ್ವೆ ನಂಬರ್ 1–:10 ಪರವಾನಿಗೆ ಪಡೆದು ಮಣ್ಣು ಗಣಿಗಾರಿಕೆ ಮಾಡಲಾಗುತ್ತಿದೆ..! ಸರ್ವೆ ನಂಬರ್ 2 ಸರ್ಕಾರಿ ಜಾಗದಲ್ಲಿ ಅಕ್ರಮ ಮಣ್ಣು ದಂಧೆ ಕೋರರು ಸರ್ಕಾರಕ್ಕೆ, ಜನರಿಗೆ ಚಳ್ಳೆಹಣ್ಣು ತಿನ್ನಿಸುತ್ತಿದ್ದಾರೆ. ಫಲವತ್ತಾದ ಮಣ್ಣು ಲೂಟಿ ಮಾಡುತ್ತಿದ್ದಾರೆ ಎಂದು ಸಾರ್ವಜನಿಕರು ಆರೋಪ ಮಾಡುತ್ತಿದ್ದಾರೆ.

## RSS ದಾಖಲೆಗಳನ್ನು ಸಲ್ಲಿಸದಿದ್ದರೆ ಕಾನೂನು ಕ್ರಮ: ಗೃಹ ಸಚಿವ ಪ್ರಿಯಾಂಕ್ ಖರ್ಗೆ ಸುಳಿವು

# ರೈತರಿಗೆ ಸರಕಾರಿ ಅಧಿಕಾರಿಗಳು ಗೌರವದಿಂದ ನಡೆದುಕೊಳ್ಳಬೇಕು

ರೈತನು ದೇಶದ ಬೆನ್ನೆಲುಬು. ತನ್ನ ಶ್ರಮ, ಬೆವರು ಮತ್ತು ತ್ಯಾಗದ ಮೂಲಕ ಸಮಾಜದ ಅನ್ನದಾತನಾಗಿ ನಿಂತಿರುವ ರೈತರಿಗೆ ಪ್ರತಿಯೊಬ್ಬರೂ ಗೌರವ ನೀಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ವಿಶೇಷವಾಗಿ ರೈತರ ಸೇವೆಗಾಗಿ ಇರುವ ಸರಕಾರಿ ಇಲಾಖೆಗಳ ಅಧಿಕಾರಿಗಳು ರೈತರೊಂದಿಗೆ ಮಾನವೀಯತೆ ಮತ್ತು ಗೌರವದಿಂದ ವರ್ತಿಸಬೇಕಾದ ಅಗತ್ಯವಿದೆ.

## ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ರೈತರು ಕೃಷಿ, ಬೆಳೆ ಪರಿಹಾರ, ವಿಮೆ, ಸಾಲ ಸೌಲಭ್ಯ, ಭೂ ದಾಖಲೆ ಹಾಗೂ ವಿವಿಧ ಸರಕಾರಿ ಯೋಜನೆಗಳ ಮಾಹಿತಿಗಾಗಿ ಸರ್ಕಾರಿ ಕಚೇರಿಗಳ ಮೆಟ್ಟಿಲು ಏರುತ್ತಾರೆ. ಅಂತಹ ಸಂದರ್ಭಗಳಲ್ಲಿ ಅವರಿಗೆ ಸರಿಯಾದ ಮಾಹಿತಿ, ಸಮಯಕ್ಕೆ ತಕ್ಕ ಸೇವೆ ಹಾಗೂ ಗೌರವಯುತ ವರ್ತನೆ ಸಿಗಬೇಕು. ಅಧಿಕಾರಿಗಳ ನಿರ್ಲಕ್ಷ್ಯ, ವಿಳಂಬ ಮತ್ತು ನಿರಾದರದ ನಡೆ ರೈತರ ಸಮಸ್ಯೆಗಳನ್ನು ಇನ್ನಷ್ಟು ಹೆಚ್ಚಿಸುತ್ತದೆ.

ಸರ್ಕಾರ ರೈತ ಕಲ್ಯಾಣಕ್ಕಾಗಿ ಹಲವು ಯೋಜನೆಗಳನ್ನು ಜಾರಿಗೆ ತರುತ್ತಿದೆ. ಆದರೆ ಆ ಯೋಜನೆಗಳು ನಿಜವಾದ ಫಲಾನುಭವಿಗಳಾದ ರೈತರನ್ನು ತಲುಪಲು ಅಧಿಕಾರಿಗಳ ಪ್ರಾಮಾಣಿಕ ಸೇವೆ ಮತ್ತು ಸಹಾನುಭೂತಿಯ ಮನೋಭಾವ ಅತ್ಯಂತ ಮುಖ್ಯವಾಗಿದೆ.

ರೈತರನ್ನು ಕೇವಲ ಅರ್ಜಿದಾರರಾಗಿ ನೋಡದೆ ದೇಶದ ಆಹಾರ ಭದ್ರತೆಯನ್ನು ಕಾಪಾಡುವ ಅನ್ನದಾತರಾಗಿ ಗೌರವಿಸಬೇಕು. ಸರಕಾರಿ ಕಚೇರಿಗಳಲ್ಲಿ ರೈತ ಸ್ನೇಹಿ ವಾತಾವರಣ ನಿರ್ಮಾಣವಾದಾಗ ಮಾತ್ರ ಸರ್ಕಾರದ ಯೋಜನೆಗಳ ಉದ್ದೇಶ ಸಾರ್ಥಕವಾಗುತ್ತದೆ.

ಆದ್ದರಿಂದ ಎಲ್ಲಾ ಇಲಾಖೆಗಳ ಅಧಿಕಾರಿಗಳು ರೈತರ ನೋವು, ಸಂಕಷ್ಟ ಮತ್ತು ಅಗತ್ಯಗಳನ್ನು ಅರ್ಥ ಮಾಡಿಕೊಂಡು ಗೌರವದಿಂದ ಸೇವೆ ಸಲ್ಲಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ರೈತರ ಗೌರವವೇ ದೇಶದ ಗೌರವ ಎಂಬುದನ್ನು ಪ್ರತಿಯೊಬ್ಬರೂ ಮನಗಾಣಬೇಕು.

# ನಾಲ್ಕನೇ ಪುಸ್ತಕ ಸಂತೆಯ ಅಭೂತಪೂರ್ವ ಯಶಸ್ಸು: 5ನೇ ಆವೃತ್ತಿಗೆ ಆಹ್ವಾನ





**ಬೀದರ್:** ಶರಣರ ನಾಡಾದ ಬೀದರ ಜಿಲ್ಲೆಯಲ್ಲಿ ಇತ್ತೀಚೆಗಷ್ಟೇ ಭಾಲ್ಕಿಯ ಹಿರೇಮಠ, ಜಿಲ್ಲಾ ಕಸಾಪ ಹಾಗೂ ಸಾಂಸ್ಕೃತಿಕ ಸಂಘಟಕ ಗುರುನಾಥ ರಾಜಗೀರಾ ನೇತೃತ್ವದಲ್ಲಿ ವೀರಕಪುತ್ರ ಶ್ರೀನಿವಾಸ ಅವರ ಪರಿಕಲ್ಪನೆಯ ವೀರಲೋಕ ಪುಸ್ತಕ ಸಂತೆ ನಾಲ್ಕನೆಯ ಆವೃತ್ತಿಯು ಅತ್ಯಂತ ಯಶಸ್ವಿಯಾಗಿ ಜರುಗಿತ್ತು.

ಜಿಲ್ಲೆಯ ಸಹಸ್ರಾರು ಓದುಗರು, ಸಾಹಿತ್ಯಾಭಿಮಾನಿಗಳು ಹಾಗೂ ವಿದ್ಯಾರ್ಥಿಗಳು ಈ ಸಂತೆಗೆ ಭೇಟಿ ನೀಡಿ, ಲಕ್ಷಾಂತರ ರೂಪಾಯಿ ಮೌಲ್ಯದ ಪುಸ್ತಕಗಳನ್ನು ಖರೀದಿಸುವ ಮೂಲಕ ಅಕ್ಷರ ಜಾತ್ರೆಯನ್ನು ಸಂಭ್ರಮಿಸಿದ್ದರು. ಬೀದರನ ಸಾಹಿತ್ಯಾಸಕ್ತರು ತೋರಿದ ಈ ಅಪೂರ್ವ ಬೆಂಬಲ ಮತ್ತು ಓದಿನ ಹಸಿವು ಇಡೀ ಕರ್ನಾಟಕದಲ್ಲೇ ಹೊಸದೊಂದು ಸಾಂಸ್ಕೃತಿಕ ಕ್ರಾಂತಿಗೆ ಮುನ್ನುಡಿ ಬರೆದಿತ್ತು.

ಬೀದರ ಜಿಲ್ಲೆಯ ಈ ಅಭೂತಪೂರ್ವ ಯಶಸ್ಸಿನ ಸರಣಿಯ ಮುಂದುವರಿದ ಭಾಗವಾಗಿ, ಇದೀಗ ಕಲ್ಪತರು ನಾಡು ತುಮಕೂರಿನಲ್ಲಿ ಪುಸ್ತಕ ಸಂತೆಯ ಐದನೇ ಆವೃತ್ತಿ ಅತ್ಯಂತ ಸಡಗರದಿಂದ ಆಯೋಜನೆಗೊಂಡಿದ್ದು

ಜಿಲ್ಲಾಡಳಿತ ತುಮಕೂರು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ತುಮಕೂರು ಹಾಗೂ ಸಾಂಸ್ಕೃತಿಕ ಸಂಘಟಕರಾದ ಆರ್. ಕೆ. ಶ್ರೀನಿವಾಸ ಅವರ ನೇತೃತ್ವದಲ್ಲಿ ಈ ಪುಸ್ತಕ ಸಂತೆಯು ಇದೆ ಜೂನ್ 26,27,28 ರಂದು ಮಹಾನಗರದ ಗಾಜಿನ ಮನೆ ಆವರಣದಲ್ಲಿ ಪ್ರತಿದಿನ ಬೆಳಿಗ್ಗೆ 10 ಗಂಟೆಯಿಂದ ರಾತ್ರಿ 9 ಗಂಟೆವರೆಗೆ ನಡೆಯಲಿದ್ದು ಬೀದರ ಜಿಲ್ಲೆಯ ಸಾಹಿತ್ಯಾಸಕ್ತರು ಹಾಗೂ ಓದುಗರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಸಾಂಸ್ಕೃತಿಕ ಸಂಘಟಕ ಗುರುನಾಥ ರಾಜಗೀರಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ತುಮಕೂರಿನಲ್ಲಿ ನಡೆಯಲಿರುವ ಈ ವಿಶಿಷ್ಟ ಪುಸ್ತಕ ಸಂತೆಗೆ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಯ ಸಾಹಿತ್ಯಾಸಕ್ತರು ಭೇಟಿ ನೀಡಿ ತಮ್ಮ ಜ್ಞಾನದ ಹಸಿವನ್ನು ವಿಸ್ತರಿಸಿಕೊಳ್ಳುವ ಮೂಲಕ ಕನ್ನಡ ಸಾಹಿತ್ಯಿಕ ಚಟುವಟಿಕೆಗೆ ಪ್ರೋತ್ಸಾಹ ನೀಡಬೇಕು.**

**–ಗುರುನಾಥ ರಾಜಗೀರಾ**
**ಸಾಹಿತ್ಯ ಚಿಂತಕರು ಹಾಗೂ ಸಾಂಸ್ಕೃತಿಕ ಸಂಘಟಕರು, ಬೀದರ**

**ಬೀದರ ಜಿಲ್ಲೆಯಲ್ಲಿ ನಾಲ್ಕನೇ ಆವೃತ್ತಿಯ ಪುಸ್ತಕ ಸಂತೆಯನ್ನು ಯಶಸ್ವಿಗೊಳಿಸಿದ ಮಾದರಿಯಲ್ಲೇ ತುಮಕೂರಿನಲ್ಲಿ ನಡೆಯಲಿರುವ ಈ 5ನೇ ಆವೃತ್ತಿಯ ಅಕ್ಷರ ಜಾತ್ರೆಗೂ ಜಿಲ್ಲೆಯ ಸಾಹಿತ್ಯ ಪ್ರೇಮಿಗಳು, ಲೇಖಕರು, ಸಂಶೋಧಕರು ಮತ್ತು ಯುವ ಸಮೂಹವು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ವೈವಿಧ್ಯಮಯ ಸಾಹಿತ್ಯ ಪ್ರಕಾರಗಳು ಹಾಗೂ ಅಪರೂಪದ ಪುಸ್ತಕಗಳ ಭಂಡಾರವೇ ಈ ಸಂತೆಯಲ್ಲಿ ಅನಾವರಣಗೊಳ್ಳುತ್ತಿದ್ದು, ಗಡಿ ಜಿಲ್ಲೆಯ ಓದುಗರು ಇದರ ಸದುಪಯೋಗ ಪಡಿಸಿಕೊಳ್ಳಬೇಕು.**

**–ಸುರೇಶ ಚನ್ನಶೆಟ್ಟಿ**
**ಅದ್ಯಕ್ಷರು ಜಿಲ್ಲಾ ಕಸಾಪ ಬೀದರ**

# ಒಗ್ಗಟ್ಟಾಗಿ ಶ್ರಮಿಸೋಣ–ಪರಿವರ್ತನೆ ತರೋಣ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ವಿವಿಧ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ನೌಕರರು ಒಗ್ಗಟ್ಟಾಗಿ ಶ್ರಮಿಸಿ ಪರಿವರ್ತನೆ ತರೋಣ ಎಂದು ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ಅಭಿಪ್ರಾಯಪಟ್ಟರು.

ಪಟ್ಟಣದ ತಾಲೂಕಾ ಪಂಚಾಯತ ಸಭಾಂಗಣದಲ್ಲಿ ತಾಲೂಕು ಸರ್ಕಾರಿ ನೌಕರರ ಸಂಘದ ವತಿಯಿಂದ ಸೋಮವಾರ ಸಾಯಂಕಾಲ ಆಯೋಜಿಸಿದ ಕೆಯುಡಬ್ಲುಜೆ ಪದಾಧಿಕಾರಿಗಳು ಸೇರಿದಂತೆ ವಿವಿಧ ಸಂಘಟನೆಯ ಪದಾಧಿಕಾರಿಗಳಿಗೆ ಹಾಗೂ ಕ್ರೀಡಾ ಸಾಧಕರ ಸನ್ಮಾನ ಸಮಾರಂಭದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಇತ್ತೀಚೆಗೆ ಸರ್ಕಾರಿ ನೌಕರರು ಮೇಲಾಧಿಕಾರಿಗಳ ,ಜನಪ್ರತಿನಿಧಿಗಳ ಒತ್ತಡದಲ್ಲಿ ಕರ್ತವ್ಯನಿರ್ವಹಿಸಬೇಕಾಗಿದೆ. ಸಂಘಟನೆಗಳು ಚುನಾವಣಾ ಸಂದರ್ಭದಲ್ಲಿ ಇರುವ ಭಿನ್ನಾಭಿಪ್ರಾಯಗಳನ್ನು ಮರೆತು ಇಲಾಖೆಯ ಪ್ರಗತಿಗಾಗಿ ದುಡಿದು,ಸರ್ಕಾರದ ಕೆಲಸ ದೇವರ ಕೆಲಸ ಎಂದು ಭಾವಿಸಿ ಕಾರ್ಯಪ್ರವೃತ್ತರಾಗೋಣ ಎಂದು ಹೇಳಿ,ಫೇಕ್ ಯುಟ್ಯೂಬ್ ಸಾಮಾಜಿಕ ಮಾಧ್ಯಮದವರನ್ನು ನಿಯಂತ್ರಿಸುವುದು ಅಗತ್ಯ ಎಂದು ಹೇಳಿದರು.

ಕ್ಷೇತ್ರಶಿಕ್ಷಣಾಧಿಕಾರಿ ಕಛೇರಿಯ ವ್ಯವಸ್ಥಾಪಕ ವಿನೋದ ರೆಡ್ಡಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ದತ್ತಾತ್ರಿ ಕಾಟಕರ್ ಮಾತನಾಡಿ,ಇಲಾಖೆಯಿಂದ ಸಿಗುವ ಎಲ್ಲ ಸೌಲಭ್ಯಗಳನ್ನು ಸಕಾಲದಲ್ಲಿ ಶಿಕ್ಷಕರಿಗೆ ತಲುಪಿಸುವುದು ಸಂಘಟನೆಗಳ ಜವಾಬ್ದಾರಿಯಾಗಿದೆ ಎಂದರು.ವಕೀಲರ ಸಂಘದ ಅಧ್ಯಕ್ಷ ನ್ಯಾಯವಾದಿ ಮಹೇಶ ರಾಚೋಟಿ ಮಾತನಾಡಿ,ಸಮಾಜದ ಕಟ್ಟಕಡೆ–ಯ ವ್ಯಕ್ತಿಗೂ ನ್ಯಾಯ ದೊರಕಿಸಿ ಕೊಡುವ ಕೆಲಸ ನಮ್ಮದಾಗಿದೆ.ದೇಶದ್ರೋಹಿ ಪ್ರಕಟರಣ ತಡೆಗಟ್ಟಲು ಎಲ್ಲರಲ್ಲಿ ಕಾನೂನಿನ ಅರಿವು ಮೂಡಿಸುವುದು ಅಗತ್ಯ ಎಂದರು.




ಪತ್ರಕರ್ತರ ಸಂಘದ ಗೌರವಾಧ್ಯಕ್ಷ ಅಶೋಕ ರಾಜೋಳೆ ಮಾತನಾಡಿ, ಪತ್ರಕರ್ತರು ನೈಜ ಸುದ್ದಿ ಪ್ರಕಟಿಸಿ ಸಾರ್ವಜನಿಕರ ವಿಶ್ವಾಸ ಗಳಿಸಬೇಕು ಎಂದರು.

ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ ದಾನಾ ಮಾತನಾಡಿ,ಸಂಘದಲ್ಲಿ ರಾಜಕೀಯ ಬೆರೆಸದೆ,ವಾರ್ಷಿಕ ಯೋಜನೆಗಳನ್ನು ರೂಪಿಸಿ ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಿದಾಗ ಪ್ರಗತಿಗೆ ವೇಗ ದೊರೆಯುತ್ತದೆ ಎಂದರು.

ವಿಶೇಷ ಸನ್ಮಾನ:ಕೆಯುಡಬ್ಲುಜೆ ಅಧ್ಯಕ್ಷ ಜೈರಾಜ ಪಾತ್ರೆ, ಪ್ರ.ಕಾರ್ಯದರ್ಶಿ ಸಂತೋಷ ಬಿಜಿಪಾಟೀಲ್,ಗೌರವಾಧ್ಯಕ್ಷ ಅಶೋಕ ರಾಜೋಳೆ, ನ್ಯಾಯವಾದಿ ಸಂಘದ ಅಧ್ಯಕ್ಷ ಮಹೇಶ ರಾಚೋಟಿ,ಉಪಾಧ್ಯಕ್ಷ ಮಕರಂದ ಮಾನಕರಿ,ಕಾರ್ಯದರ್ಶಿ ವಾಗೇಶ ಪಾಟೀಲ್,ಜಂಟಿ ಕಾರ್ಯದರ್ಶಿ ನೀಲಕಂಠ ಬಿರಾದಾರ ,ಪ್ರಾ.ಶಾ.ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ ದಾನಾ,ಉಪಾಧ್ಯಕ್ಷ ಸುಧಾಕರ ಗಾಯಕವಾಡ,ಕಾರ್ಯದರ್ಶಿ ರಾಮ ಬಾಣಾ,ಖಜಾಂಚಿ ಸತ್ಯವಾನ ಕಾಂಬಳೆ,ಸಹಕಾರ್ಯರ್ಶಿಗಳಾದ ದತ್ತು ಮುದಾಳೆ,ಅನೀತಾ ಮುದಾಳೆ,ಸಂ.ಕಾರ್ಯದರ್ಶಿಗಳಾದ ರತ್ನಮ್ಮ ಹಲಕುಡೆ,ಅನ್ನಪೂರ್ಣ ಮೇತ್ರೆ ,ಮತ್ತು ಜಿಲ್ಲಾ ಸಂಘಟನಾ ಕಾರ್ಯದರ್ಶಿ ಸೂರ್ಯಕಾಂತ ಸುಂಟೆ,ನಿರ್ದೇಶಕರಾದ ಸಂತೋಷ ವಾಡೆ,ಗಣಪತಿ ಭಕ್ತಾ,ಚಂದ್ರಕಾಂತ ತಳವಾಡೆ ಮತ್ತು ರಾಜ್ಯಮಟ್ಟದ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದ ಹಣಮಂತ ಪೂಜಾರಿ (ಯೋಗಾ),ಪೂರ್ಣಿಮಾ ಪಾಟೀಲ್ (ಕುಸ್ತಿ),ಚಂದ್ರಕಾಂತ ತಳವಾಡೆ(ಕುಸ್ತಿ)ಅವರಿಗೆ ಸರ್ಕಾರಿ ನೌಕರರ ಸಂಘದ ವತಿಯಿಂದ ಗೌರವಿಸಲಾಯಿತು.ಪ್ರಮುಖರಾದ ಸುನೀಲ ಬಿರಾದಾರ, ಬಾಲಾಜಿ ಕಾಂಬಳೆ,ಅಶೋಕ ಕುಂಬಾರ,ರವಿಚಂದ್ರ ಮೈನಾಳೆ,ಭೀಮಣ್ಣ ಕೊಂಕಣಿ,ದಾವುದ ಜಮಾದಾರ,ಸುಬಾಷ,ಅಮೂಲ ಮೇತ್ರೆ ಸೇರಿದಂತೆ ಅನೇಕರು ಹಾಜರಿದ್ದರು.ಬಿಇಓ ಕಛೇರಿಯ ಪತ್ರಾಂಕಿತ ಅಧಿಕಾರಿ ಶಿವುಕುಮಾರ ಫುಲಾರಿ ಸ್ವಾಗತಿಸಿದರು.ಸ.ನೌ.ಸಂಘದ ಪ್ರ.ಕಾರ್ಯದರ್ಶಿ ರಾಜಪ್ಪಾ ಪಾಟೀಲ ಪ್ರಾಸ್ತಾವಿಕ ಮಾತನಾಡಿದರು. ಚಂದ್ರಕಾಂತ ತಳವಾಡೆ ನಿರೂಪಿಸಿದರು.ಪ್ರಭು ಡಿಗ್ಗೆ ವಂದಿಸಿದರು.

# ಪ್ರತಿಭಟನೆಗೆ ಬಸವ ಭಕ್ತರಿಗೆ ಕರೆ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ನಗರದ ಶ್ರೀ ಚನ್ನಬಸವಾಶ್ರಮದಲ್ಲಿ ನಡೆದ 123ನೇ ಮಾಸಿಕ ಶರಣ ಸಂಗಮದಲ್ಲಿ ಬಸವತತ್ವ, ಸಮಾನತೆ ಹಾಗೂ ವಚನ ಸಾಹಿತ್ಯದ ಮಹತ್ವವನ್ನು ಪ್ರತಿಪಾದಿಸಿದ ವಿವಿಧ ಮಠಾಧೀಶರು, ಬಸವಭಕ್ತರು ಮತ್ತು ಬಸವತತ್ವ ಪ್ರಚಾರಕರ ಕುರಿತು ಅವಹೇಳನಕಾರಿ ಹೇಳಿಕೆಗಳನ್ನು ನೀಡಿರುವುದಾಗಿ ಆರೋಪಿಸಲಾದ ಕನೇರಿ ಮಠದ ಶ್ರೀಗಳ ವಿರುದ್ಧ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ವಕ್ತಾರರು, ವಿಶ್ವಗುರು ಬಸವಣ್ಣನವರು 12ನೇ ಶತಮಾನದಲ್ಲಿಯೇ ಕಾಯಕ, ದಾಸೋಹ, ಸಮಾನತೆ, ದಯೆ ಹಾಗೂ ಮಾನವೀಯ ಮೌಲ್ಯಗಳನ್ನು ಆಧಾರವಾಗಿಟ್ಟುಕೊಂಡು ಸಮಾಜದಲ್ಲಿ ಪರಿವರ್ತನೆಯ ಚಳವಳಿಯನ್ನು ರೂಪಿಸಿದ್ದರು. ವಚನಗಳ ಮೂಲಕ ಸಮಾನತೆಯ ಸಂದೇಶ ಸಾರಿದ ಬಸವಣ್ಣನವರ ಆದರ್ಶಗಳನ್ನು



ಕೀಳಾಗಿ ಕಾಣುವುದು ಅಥವಾ ತಪ್ಪಾಗಿ ಬಿಂಬಿಸುವುದು ಶರಣ ಸಂಸ್ಕೃತಿಗೆ ವಿರುದ್ಧವಾದದ್ದು ಎಂದು ಹೇಳಿದರು.

ಬಸವತತ್ವದ ಕುರಿತು ಆಕ್ಷೇಪಾರ್ಹ ಹೇಳಿಕೆಗಳನ್ನು ನೀಡುತ್ತಿರುವವರ ವಿರುದ್ಧ ಜೂನ್ 28ರಂದು ಬಸವಕಲ್ಯಾಣದಲ್ಲಿ ನಡೆಯಲಿರುವ ಪ್ರತಿಭಟನೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಪೂಜ್ಯ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ಬಸವಭಕ್ತರಿಗೆ ಕರೆ ನೀಡಿದರು. ಈ ಸಂದರ್ಭದಲ್ಲಿ ಕನೇರಿ ಶ್ರೀಗಳ ಬಸವಕಲ್ಯಾಣ ಪ್ರವೇಶವನ್ನು ವಿರೋಧಿಸಿ ಸಿದ್ಧಪಡಿಸಿರುವ ಪ್ರತಿಭಟನಾ ಭಿತ್ತಿಪತ್ರವನ್ನು ಬಿಡುಗಡೆ ಮಾಡಲಾಯಿತು.

# ಆನಂದ ಅನುಭೂತಿ ಶಿಬಿರ ನಾಳೆಯಿಂದ


• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಆರ್ಟ್ ಆಫ್ ಲಿವಿಂಗ್ ವತಿಯಿಂದ ನಗರದ ಕುಂಬಾರವಾಡ ಕಮಾನ್ ಸಮೀಪದ ನವೀನ್ ಪಬ್ಲಿಕ್ ಸ್ಕೂಲ್‌ನಲ್ಲಿ ಇರುವ ಆರ್ಟ್ ಆಫ್ ಲಿವಿಂಗ್ ಮಾಹಿತಿ ಕೇಂದ್ರದಲ್ಲಿ ಜೂ. 25 ರಿಂದ 30 ರ ವರೆಗೆ ಆನಂದ ಅನುಭೂತಿ ಶಿಬಿರ ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 6 ರಿಂದ 8 ಹಾಗೂ ಸಂಜೆ 6 ರಿಂದ 8 ರ ವರೆಗೆ ಶಿಬಿರ ನಡೆಯಲಿದೆ ಎಂದು ಯೋಗ ಶಿಕ್ಷಕರೂ ಆದ ಆರ್ಟ್ ಆಫ್ ಲಿವಿಂಗ್ ಜಿಲ್ಲಾ ಅಭಿವೃದ್ಧಿ ಸಮಿತಿ ಸದಸ್ಯ ಕಾಮಶೆಟ್ಟಿ ಚಿಕ್ಕಬಸೆ ತಿಳಿಸಿದ್ದಾರೆ.

ಆರ್ಟ್ ಆಫ್ ಲಿವಿಂಗ್ ಜಿಲ್ಲಾ ಸಂಯೋಜಕರಾಗಿರುವ ಯೋಗ ಶಿಕ್ಷಕರಾದ ಶಿವಾನಂದ ಹಾಗೂ ಕಾಮಶೆಟ್ಟಿ ಚಿಕ್ಕಬಸೆ ಅವರು ಯೋಗ, ಧ್ಯಾನ, ಪ್ರಾಣಾಯಾಮ, ಉಸಿರಾಟ ಹಾಗೂ ಸುದರ್ಶನ ಕ್ರಿಯೆಗಳನ್ನು ಹೇಳಿಕೊಡಲಿದ್ದಾರೆ ಎಂದು ಹೇಳಿದ್ದಾರೆ.





ಶಿಬಿರವು ಮಾನಸಿಕ ಒತ್ತಡದಿಂದ ಮುಕ್ತಿ, ದೈಹಿಕ ಸದೃಢತೆ ಹಾಗೂ ಉತ್ಸಾಹದ ಜೀವನಕ್ಕೆ ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ.

ಆಸಕ್ತರು ಹೆಸರು ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 7022513111 ಅಥವಾ 7259838372 ಗೆ ಸಂಪರ್ಕಿಸಬಹುದು ಎಂದು ಹೇಳಿದ್ದಾರೆ.

# ಎಂ.ಇ.ಎಸ್ ನಿಷೇದಿಸುವಂತೆ ಒತ್ತಾಯಿಸಿ ಕರವೇಯಿಂದ ಪ್ರತಿಭಟನೆ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಕರ್ನಾಟಕದಲ್ಲಿ ಎಂ.ಇ.ಎಸ್ ಸಂಘಟನೆಯನ್ನು ನಿಷೇದಿಸಿಸುವಂತೆ ಒತ್ತಾಯಿಸಿ ಮಂಗಳವಾರ ನಗರದಲ್ಲಿ ಕರ್ನಾಟಕ ರಕ್ಷಣಾ (ಪ್ರವೀಣ್ ಶೆಟ್ಟಿ ಬಣ) ವೇದಿಕೆಯಿಂದ ಬೃಹತ್ ಪ್ರತಿಭಟನಾ ರ್‍ಯಾಲಿ ಹಮ್ಮಿಕೊಳ್ಳಲಾಯಿತು.

ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಪೀಟರ್ ಚೀಟಗುಪ್ಪಾ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನಾ ರ್‍ಯಾಲಿ ನಗರದ ಅಂಬೇಡ್ಕರ್ ವೃತ್ತದಿಂದ ಆರಂಭವಾದ ರ್‍ಯಾಲಿಯು ಭಗತ್ ಸಿಂಗ್ ವೃತ್ತದ ಮಾರ್ಗವಾಗಿ ತಹಸೀಲ್ದಾರ ಕಚೇರಿ ತಲುಪಿತು. ರ್‍ಯಾಲಿಯಲ್ಲಿ ಭಾಗವಹಿಸಿದ ಕರ್ನಾಟಕ ರಕ್ಷಣಾ ವೇದಿಕೆಯ ಸಹಸ್ರಾರು ಕಾರ್ಯಕರ್ತರು ಎಂ.ಇ. ಎಸ್ ವಿರುದ್ಧ ಘೋಷಣೆ ಮೊಳಗಿಸಿದರು.

ನಂತರ ಮುಖ್ಯಮಂತ್ರಿ ಡಿ. ಕೆ ಶಿವಕುಮಾರ ಅವರಿಗೆ ಬರೆದ ಮನವಿ ಪತ್ರವನ್ನು ತಹಸೀಲ್ದಾರ ರವರಿಗೆ ಸಲ್ಲಿಸಿದರು. ಮಹಾರಾಷ್ಟ್ರ ಏಕೀಕರಣ ಸಮಿತಿಯವರು ಮಹಾರಾಷ್ಟ್ರಗಡಿ ಭಾಗಗಳಲ್ಲಿರುವ




ಬೀದರ, ಭಾಲ್ಕಿ. ಔರಾದ, ಬಸವಕಲ್ಯಾಣ ಹಾಗೂ ಬೆಳಗಾವಿ ಜಿಲ್ಲೆಯ ಕೆಲವು ಪ್ರದೇಶಗಳು ಮಹಾರಾಷ್ಟ್ರ ರಾಜ್ಯಕೆ ಸೇರಿಸಿ ಸಂಯುಕ್ತ ಮಹಾರಾಷ್ಟ್ರ ಮಾಡುವು ಸಂಬಂಧ ದಿನಾಂಕ 22–06–2026 ರಂದು ಬೆಳಗಾವಿ ಜಿಲ್ಲೆಯ ಕುಂದಾನಗರಿಯಲ್ಲಿ ಪ್ರತಿಭಟನೆ ನಡೆಸಿ ಕರ್ನಾಟಕ ಸರ್ಕಾರ ಹೊರಡಿಸಿರುವ ಆದೇಶಗಳನ್ನು ಹರಿದು ಹಾಕಿ ಪ್ರತಿಭಟನೆ ಮಾಡಿ ದರ್ಪ ತೋರಿರುತ್ತಾರೆ.

ಈ ಪ್ರತಿಭಟನೆಯು ಸಂವಿಧಾನಾತ್ಮಕವಾಗಿ ಕಾನೂನು ಬಾಹಿರವಾಗಿದ್ದು, ಮಹಾರಾಷ್ಟ್ರ ಏಕೀಕರಣ ಸಮಿತಿಯುವರು ಕರ್ನಾಟಕ ರಾಜ್ಯ–ಕ್ಕೆ ಸೇರಿದ ಗಡಿ ಪ್ರದೇಶಗಳನ್ನು ಮಹಾರಾಷ್ಟ್ರ ರಾಜ್ಯಕ್ಕೆ ಸೇರಿಸುವುದಾಗಿ ಪುಂಡಾಟಿಕೆ ಮಾಡಿ ರಾಜ್ಯದ ಜನತೆಗೆ ಶಾಂತಿಗೆ ಧಕ್ಕೆ ತರುತ್ತಿದ್ದಾರೆ. ಮಹಾರಾಷ್ಟ್ರ ಏಕೀರಕಣ ಸಮಿತಿಯವರು ಪದೆ ಪದೆ ವಿನಾ ಕಾರಣ ಕರ್ನಾಟಕ ರಾಜ್ಯ ರಸ್ತೆಗೆ ಸಾರಿಗೆ ಸಂಸ್ಥೆಗೆ ಸಂಬಂಧಪಟ್ಟ ಬಸ್ ಗಳ ಮೇಲೆ ಕಲ್ಲು ತೂರಾಟ ಮಾಡುವುದು ಚಾಲಕ ಮತ್ತು ನಿರ್ವಾಹಕರ ಮೇಲೆ ಹಲ್ಲೆ ಮಾಡಿರುವ ಸಾಕಷ್ಟು ಘಟನೆಗಳು ನಡೆದಿವೆ.

ಆದಕಾರಣ, ಕನ್ನಡಿಗರ ಸ್ವಾಭಿಮಾನಕ್ಕೆ ದ–ಕ್ಕೆ ತರುತ್ತಿರುವ ಎಂ.ಇ.ಎಸ್ ಸಂಘಟನೆಯನ್ನು ಕರ್ನಾಟಕದಲ್ಲಿ ತಕ್ಷಣವೇ ಕಾನೂನು ಬದ್ದವಾಗಿ ನಿಷೇಧಿಸಬೇಕು. ಕನ್ನಡ ಕಡ್ಡಾಯವನ್ನು ವಿರೋಧಿಸಿ ಪ್ರಚೋದಾತ್ಮಕವಾಗಿ ವರ್ತಿಸುತ್ತಿರುವ ಎಮ್.ಇ.ಎಸ್. ನಾಯಕರನ್ನು ರಾಜ್ಯದಿಂದ ಗಡಿ ಪಾರು ಮಾಡಿ ಕರ್ನಾಟಕ ರಾಜ್ಯದಲ್ಲಿ ಮತ್ತೆ ತಲೆ ಎತ್ತದಂತೆ ಮಹಾರಾಷ್ಟ್ರ ಏಕೀಕರಣ ಸಮಿತಿಯನ್ನು ರಾಜ್ಯದಲ್ಲಿ ಶಾಶ್ವತಗಾಗಿ ಮಟ್ಟಹಾಕಬೇಕೆಂದು ಎಂದು ವೇದಿಕೆ ತಮ್ಮ ಮನವಿ ಪತ್ರದ ಮೂಲಕ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದೆ. ಪ್ರತಿಭಟನೆಯಲ್ಲಿ ಕರವೇ ಜಿಲ್ಲಾ ಸಂಚಾಲಕ ಬಸವರಾಜ ನಂದಗಾಂವಕರ್,ರವಿಕುಮಾರ ಹೊಕ್ರಾಣಿ, ಜಗನಾಥ್ ಕೌಠಾ, ಮೋಜೆಸ್ ಅಣ್ಣದುರೆ, ಮೈಕಲ್ ಕಡ್ಯಾಳ್, ಅಶೋಕ್ ಕಡ್ಯಾಳ್, ನಾಗೇಶ್ ರಾಯಣ್ಣೋರ, ಚಂದ್ರಕಾಂತ್ ಪೊಳ್, ನೀಲೇಶ್ ರಾಠೋಡ್, ಸಂತೋಷ. ಜೆ, ಗಿರೀಶ್ ಓಂಕಾರ್, ಪ್ರಸಾದ್ ಘೋಡಂಪಳ್ಳಿಕರ್, ಧನರಾಜ್ ಚಿಟ್ಟವಾಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಕನಕದಾಸರ ತತ್ವಾದರ್ಶಗಳು ಸಮಾಜಕ್ಕೆ ದಾರಿದೀಪ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ವಿಶ್ವಗುರು ಬಸವಣ್ಣ ಅವರು ನಡೆದಾಡಿದ ಈ ಪವಿತ್ರ ಭೂಮಿಯಲ್ಲಿ 12ನೇ ಶತಮಾನದ ಶರಣರ ಪರಂಪರೆ ಮತ್ತು 16ನೇ ಶತಮಾನದ ದಾಸ ಪರಂಪರೆ ನಡುವೆ ಅವಿನಾಭಾವ ಸಂಬಂಧವಿದ್ದು, ಎರಡೂ ಕಾಲಘಟ್ಟಗಳ ಸಂದೇಶಗಳು ಸಮಾಜದ ಒಳಿತಿಗೆ ದಾರಿ ದೀಪವಾಗಿವೆ ಎಂದು ಪಂಚ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ರಾಜ್ಯಾಧ್ಯಕ್ಷರಾದ ಹೆಚ್.ಎಂ. ರೇವಣ್ಣ ಅವರು ಹೇಳಿದರು.

ಸೋಮವಾರ ಸಂಜೆ ನಗರದ ಪೂಜ್ಯ ಚನ್ನಬಸವ ಪಟ್ಟದೇವರು ಜಿಲ್ಲಾ ರಂಗಮಂದಿರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, ಬೆಂಗಳೂರು, ಸಹಕಾರ ಜನಪದ ಕಲಾವಿದರ ಬಳಗ (ರಿ) ಹಾಗೂ ಅತಿವಾಳೆ ಸಾಂಸ್ಕೃತಿಕ ಪ್ರತಿಷ್ಠಾನ (ರಿ) ಬೀದರ ಇವರ ಸಂಯುಕ್ತ ಆಶ್ರಯದಲ್ಲಿ ಜರುಗಿದ 'ಮುತ್ತು ಬಂದಿದೆ ಕೇರಿಗೆ' ಸಂಗೀತ–ನೃತ್ಯ ರೂಪಕ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಶರಣರು ಹಾಗೂ ದಾಸರ ಸಂದೇಶಗಳು ಮಾನವೀಯ ಮೌಲ್ಯಗಳು, ಸಮಾನತೆ, ಭಕ್ತಿ ಮತ್ತು ಸಾಮಾಜಿಕ ಸಾಮರಸ್ಯವನ್ನು ಜನರಿಗೆ ಬೋಧಿಸಿದ್ದು, ಇಂತಹ ಮಹನೀಯರ ತತ್ವಾದರ್ಶಗಳು ಇಂದಿನ ಸಮಾಜಕ್ಕೂ ಪ್ರಸ್ತುತವಾಗಿವೆ ಎಂದು ಹೇಳಿದರು. ಕನಕದಾಸರ ಜೀವನ, ಆಚಾರ–ವಿಚಾರಗಳು ಹಾಗೂ ಸಾಹಿತ್ಯದ ನಿಜವಾದ ಅರ್ಥವನ್ನು ಜನಸಾಮಾನ್ಯರಿಗೆ ಪರಿಚಯಿಸುವಲ್ಲಿ ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ಮಹತ್ವದ ಪಾತ್ರ



ವಹಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ಮಾಜಿ ಸಭಾಪತಿ ರಘುನಾಥರಾವ್ ಮಲ್ಕಾಪುರೆ ಮಾತನಾಡಿ, ಕನಕದಾಸರ ಆದರ್ಶಗಳು, ತತ್ವಗಳು ಹಾಗೂ ಸಮಾಜಮುಖಿ ಚಿಂತನೆಗಳನ್ನು ಜನರಿಗೆ ತಲುಪಿಸುವಲ್ಲಿ ಈ ನಾಟಕ ಮಹತ್ವದ ಪಾತ್ರ ವಹಿಸಿದೆ ಎಂದು ಹೇಳಿದರು. ರಾಜ್ಯದ ಮೂಲೆಮೂಲೆಗಳಲ್ಲಿ ಇಂತಹ ನಾಟಕಗಳು ಪ್ರದರ್ಶನಗೊಂಡು ಕನಕದಾಸರ ಸಂದೇಶಗಳು ಹೆಚ್ಚಿನ ಜನರಿಗೆ ತಲುಪುವಂತಾಗಬೇಕು ಎಂದು ಆಶಿಸಿದರು.

ಉಚ್ಚಾ ಮಠದ ಪರಮ ಪೂಜ್ಯ ಗೋಪಾಲ ಮುತ್ತ್ಯಾ ದಿವ್ಯ ಸಾನಿಧ್ಯ ವಹಿಸಿದರು, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷ ಅಮೃತರಾವ ಚಿಮಕೋಡೆ, ಹಿರಿಯ ರಂಗ ಸಂಘಟಕ ಶ್ರೀನಿವಾಸ ಜಿ. ಕಪ್ಪಣ್ಣ, ಕಾತ ಚಿಕ್ಕಣ್ಣ, ರಾಷ್ಟ್ರಮಟ್ಟದ ಖ್ಯಾತಿಯ ನೃತ್ಯ ನಿರ್ದೇಶಕಿ ಸ್ನೇಹ ಕಪ್ಪಣ್ಣ, ಪ್ರಮುಖರಾದ ಪಂಡಿತರಾವ್ ಚಿದ್ರಿ, ಮಲ್ಲಿಕಾರ್ಜುನ ಪರಿಹಾರ ಮಾತನಾಡಿದರು. ಕಸಾಪ ಜಿಲ್ಲಾಧ್ಯಕ್ಷ ಸುರೇಶ ಚನ್ನಶೆಟ್ಟಿ, ಸಿದ್ರಾಮ ಸಿಂಧೆ, ಬಾಬುವಾಲಿ, ಮುರಳಿಧರ ಏಕಲಾರಕರ್, ಡಿ, ನಿಜಾಮೂದ್ದಿನ್, ಸೇರಿದಂತೆ ಹಲವರು ವೇದಿಕೆ ಮೇಲೆ ಇದ್ದರು.

ಕಾರ್ಯಕ್ರಮದಲ್ಲಿ ಶ್ರೀಮತಿ ಗೀತಾ ಪಂಡಿತ್ ಚಿದ್ರಿ, ಮಾಳಪ್ಪ ಅಡಸಾರೆ, ಎಂ.ಎಸ್. ಕಟಗಿ, ಲಕ್ಷ್ಮಣ ಮೇತ್ರೆ, ವಿಜಯಕುಮಾರ್ ಖಾಸೆಂಪುರ, ಶಂಭುಲಿಂಗ ವಾಲ್ದೊಡ್ಡಿ, ಸಂತೋಷಕುಮಾರ ಜೋಳದಾಪಕೆ, ಬಕ್ಕಪ್ಪಾ ಶೇರಿಕಾರ, ಕುಶಾಲರಾವ್ ಯರನಳ್ಳಿ, ಸುಚಿದಾನಂದ ಮಲ್ಕಾಪುರೆ, ಪುಂಡಲೀಕಪ್ಪಾ ಇಟಕಮ್‌ಪಳ್ಳಿ, ತುಕಾರಾಮ ಚಿಮಕೋಡೆ, ನಿರಂಜನಪ್ಪ ಪಾತ್ರೆ, ತೋಟಪ್ಪ, ದೀಪಕ ಚಿದ್ರಿ, ಹಣ್ಮೂ ಪಾಜಿ, ಸುನೀಲ ಭಾವಿಕಟ್ಟಿ, ಸಂಜೀವಕುಮಾರ ಅಲ್ಲೂರೆ, ಬಿ.ಎಮ್.ಅರವಾಡಿ, ದೇವಪ್ಪಾ ಚಾಂಬೋಳೆ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಪ್ರಾರಂಭದಲ್ಲಿ ಕಾರ್ಯಕ್ರಮದ ಸಂಚಾಲಕರಾದ ಡಾ. ಸಂಜೀವಕುಮಾರ ಅತಿವಾಳೆ ಸ್ವಾಗತಿಸಿದರು, ವಿಜಯಕುಮಾರ್ ಸೋನಾರೆ ಪ್ರಸ್ತಾವಿಕ ಮಾತನಾಡಿದರು, ದೇವಿದಾಸ್ ಜೋಶಿ ನಿರೂಪಿಸಿ ವಂದಿಸಿದರು.

ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ ರಾಷ್ಟಮಟ್ಟದ ಖ್ಯಾತಿಯ ನೃತ್ಯ ನಿರ್ದೇಶಕಿ ಸ್ನೇಹ ಕಪ್ಪಣ್ಣ ಅವರ ನೃತ್ಯ ಸಂಯೋಜನೆ, ಸಂಗೀತ ತಜ್ಞ ಡಾ. ಪ್ರವೀಣ ಡಿ. ರಾವ್ ಅವರ ಸಂಗೀತ ನಿರ್ದೇಶನ ಹಾಗೂ ಕಾತ ಚಿಕ್ಕಣ್ಣ ಅವರ ಪರಿಕಲ್ಪನೆ ಮತ್ತು ಸಾಹಿತ್ಯದಲ್ಲಿ ಮೂಡಿಬಂದ ನೃತ್ಯ ರೂಪಕ ಪ್ರೇಕ್ಷಕರ ಮನಗೆದ್ದಿತು. ಹಿರಿಯ ರಂಗ ಸಂಘಟಕ ಶ್ರೀನಿವಾಸ ಜಿ. ಕಪ್ಪಣ್ಣ ಅವರ ಸಮನ್ವಯ ಹಾಗೂ ತಾಂತ್ರಿಕ ನಿರ್ದೇಶನದಲ್ಲಿ ಭ್ರಮರಿ ಡ್ಯಾನ್ಸ್ ರೆಪರ್ಟರಿ ಕಲಾವಿದರು ನೀಡಿದ ನೃತ್ಯ ಪ್ರದರ್ಶನ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು. ಕನಕದಾಸರ ಜೀವನ, ಸಾಹಿತ್ಯ ಹಾಗೂ ತತ್ವಾದರ್ಶಗಳನ್ನು ನೃತ್ಯದ ಮೂಲಕ ಜೀವಂತವಾಗಿ ಕಟ್ಟಿಕೊಟ್ಟ ಕಲಾವಿದರ ಅಭಿನಯ ಪ್ರೇಕ್ಷಕರನ್ನು ಮಂತ್ರಮುಗ್ಧರನ್ನಾಗಿಸಿತು. ಬಣ್ಣಬಣ್ಣದ ವಸ್ತ್ರಗಳು, ಆಕರ್ಷಕ ವೇದಿಕೆ ವಿನ್ಯಾಸ, ಮನಮೋಹಕ ಸಂಗೀತ ಮತ್ತು ಭಾವಪೂರ್ಣ ನೃತ್ಯ ಸಂಯೋಜನೆ ಕಾರ್ಯಕ್ರಮದ ಮೆರುಗು ಹೆಚ್ಚಿಸಿತು. ಕಲಾವಿದರ ಅದ್ಭುತ ಪ್ರದರ್ಶನಕ್ಕೆ ಪ್ರೇಕ್ಷಕರು ಚಪ್ಪಾಳೆ ತಟ್ಟಿ ಹುರಿ ದುಂಬಿಸಿದರು.

**ಸಂತಕವಿ ಕನಕದಾಸರ ದಾಸ ಸಾಹಿತ್ಯವು ಸಮಾಜಕ್ಕೆ ಅಮೂಲ್ಯ ಕೊಡುಗೆಯಾಗಿದೆ ಎಂದರು. 'ನಳ ಚರಿತ್ರೆ' ಸೇರಿದಂತೆ ಅವರ ಅನೇಕ ಕೃತಿಗಳು ಇಂದಿಗೂ ಜನರಿಗೆ ಮಾರ್ಗದರ್ಶನ ನೀಡುತ್ತಿವೆ. ಸಾಮಾಜಿಕ ಸಮಾನತೆ, ಮಾನವೀಯ ಮೌಲ್ಯಗಳು, ಮೂಢನಂಬಿಕೆಗಳ ವಿರುದ್ಧದ ಜಾಗೃತಿ ಹಾಗೂ ಸೌಹಾರ್ದಯುತ ಬದುಕಿನ ಸಂದೇಶಗಳು ಅವರ ಸಾಹಿತ್ಯದಲ್ಲಿ ಅಡಕವಾಗಿವೆ.**

**–ಬಂಡೆಪ್ಪ ಖಾಸೆಂಪೂರ್**
**ಜೆಡಿಎಸ್ ಮಾಜಿ ಸಚಿವರು**

# ಮಾನವೀಯತೆ ಮೆರೆದ ಅಕ್ಷಯ ಆರ್ ಪಾಟೀಲ



• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ

ಹುಮನಾಬಾದ ಕಲಬುರಗಿ ರಾಜ್ಯ ಹೆದ್ದಾರಿಯಲ್ಲಿ ವಾಹನ ರಸ್ತೆ ಅಪಘಾತದಲಾದ ಗಾಯಾಳುವಿನ ನೆರವಿಗೆ ಧಾವಿಸಿ ಮಾನವಿಯತೆ ಮೆರೆದ ಮಾಜಿ ಸಚಿವರಾದ ಸನ್ಮಾನ್ಯ ಶ್ರೀ ರಾಜಶೇಖರ ಬಿ ಪಾಟೀಲ ರವರ ಸುಪುತ್ರ ಯುವನಾಯಕಾರದ ಶ್ರೀ ಅಕ್ಷಯ ಆರ್ ಪಾಟೀಲ ರವರು ಹಾಗೂ ರೇವಣಸಿದ್ದಪ್ಪಾ ವಿ ಪಾಟೀಲ ರವರು .

ಹುಮನಾಬಾದ ಕಲಬುರಗಿ ರಸ್ತೆ ಮಧ್ಯ ದ್ವಿಚಕ್ರ ವಾಹನ ಸವಾರನಿಗೆ ರಸ್ತೆ ಅಪಘಾತದಲ್ಲಿ ಗಾಯಗಳಾಗಿದ್ದು ತಕ್ಷಣವೇ ಆಸ್ಪತ್ರೆಗೆ ರವಾನಿಸಲು ಸ್ಥಳಿಯ ವ್ಯದ್ಯರಿಗೆ ದುರವಾಣಿ ಕರೆ ಮುಖಾಂತರ ಸಲಹೆ ನೀಡಿ ಸ್ಥಳಿಯರ ಸಹಾಯದಿಂದ ರಸ್ತೆ ಮಧ್ಯ ಬಿದ್ದಿರುವ ದ್ವಿಚಕ್ರ ವಾಹನ ಸವಾರನಿಗೆ ಪಕ್ಕಕೆ ಕೂರಿಸಿ ಅವರ ಆರೋಗ್ಯ ವಿಚಾರಿಸಿ ಮಾನವಿಯತೆ ಮೆರೆದರು.

# ನಿರೀಕ್ಷಕರಿಗಾಗಿ ಕಾರ್ಮಿಕರ ಪರದಾಟ



• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ

ಕಚೇರಿಗೆ ಬಾರದ ನಿರೀಕ್ಷಕರಿಗಾಗಿ ತಮ್ಮ ಕೂಲಿ ಕೆಲಸ ಬಿಟ್ಟು ಕಾಯ್ದು ಕುಳಿತ ಕಾರ್ಮಿಕರನ್ನು ಲೆಕ್ಕಿಸದೆ ಬೀಗ ಜಡಿದು ನಾಪತ್ತೆಯಾದ ಸಿಬ್ಬಂದಿಗಳ ಅವ್ಯವಸ್ಥೆ ಇಲ್ಲಿ ಕೇಳುವವರಿಲ್ಲವಾಗಿದೆ. ಪಟ್ಟಣದಲ್ಲಿರುವ ತಾಲೂಕು ಆಡಳಿತ ಭವನದಲ್ಲಿ ಇರುವ ಕಾರ್ಮಿಕ ನಿರೀಕ್ಷಕರ ಕಛೇರಿ ಪಿರಿಯಪಟ್ಟಣ ವೃತ್ತದಲ್ಲಿ ಬಹುತೇಕ ದಿನಗಳಲ್ಲಿ ಕಂಡು ಬರುತ್ತಿರುವ ಪರಿಸ್ಥಿತಿ ಇದಾಗಿದ್ದು ಮಂಗಳವಾರವೂ ಸಹ ಮುಂದುವರೆಯಿತು. ಕಾರ್ಮಿಕ ಇಲಾಖೆಯ ನಿರೀಕ್ಷಕರಾಗಿ ಗೋವಿಂದರಾಜ್ ಯಾದವ್ ಎಂಬ ವ್ಯಕ್ತಿಯು ಕಾರ್ಯನಿರ್ವಹಿಸುತ್ತಿದ್ದು ಕೆಆರ್ ನಗರ ತಾಲೂಕಿನ ಅಧಿಕೃತ ಕಾರ್ಮಿಕ ಇಲಾಖೆಯ ನಿರೀಕ್ಷಿತರಾಗಿದ್ದು ಪ್ರಬಾರ ಅಧಿಕಾರಿಯಾಗಿ ಪಿರಿಯಾಪಟ್ಟಣ ತಾಲೂಕಿನಲ್ಲಿ ಸಹ ಕಾರ್ಯ ನಿರ್ವಹಿಸುತ್ತಿದ್ದಾರೆ. ಆದರೆ ಈ ನಿರೀಕ್ಷಕರು ವಾರಕ್ಕೊಮ್ಮೆ ಆದರೂ ಸಹ ಕಚೇರಿಗೆ ಬಂದು ಹೋಗಬೇಕು ಆದರೆ ಶಾಸಕರ ಕಾರ್ಯಕ್ರಮಗಳನ್ನು ಹೊರತುಪಡಿಸಿದರೆ ಒಮ್ಮೆಯು ತಾಲೂಕಿಗೆ ಆಗಮಿಸದೆ ಹೊರಗುತ್ತಿಗೆ ಆದರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ಅಂಜಲಿ ಎಂಬ ಮಹಿಳೆಯಿಂದಲೇ ಎಲ್ಲಾ ದಾಖಲೆಗಳನ್ನು ತಾವು ಇರುವ ಬಳಿಗೆ ತರಗತಿಸಿಕೊಂಡು ಪತ್ರವ್ಯವಹಾರ ನಡೆಸುತ್ತಿದ್ದಾರೆ ಎಂದು ಕಾರ್ಮಿಕರಾದ ರಾಜು ಮತ್ತು ಶಿವಣ್ಣ ಹಾಗೂ ಜವರಪ್ಪ ಆರೋಪಿಸಿದ್ದಾರೆ. ಅಲ್ಲದೆ ಸರ್ಕಾರದ ವತಿಯಿಂದ ಕಾರ್ಮಿಕರಿಗಾಗಿ ನೀಡುತ್ತಿರುವ ಉಚಿತ ರಕ್ಷಣೆ ಕವಚ (ಸೇಫ್ಟಿ ಕಿಟ್) ವಿತರಣೆ ಮಾಡುತ್ತಿದ್ದು ಪ್ರತೀ ಕಾರ್ಮಿಕರಿಂದ ನೂರು ರೂಗಳನ್ನು ಪಡೆದು-ಕೊಂಡು ಇಲ್ಲಿ ಸಿಬ್ಬಂದಿಗಳು ತೊಂದರೆ ನೀಡುತ್ತಿದ್ದಾರೆ ಈ ಬಗ್ಗೆ ಯಾವುದೇ ಕ್ರಮ ವಹಿಸುತ್ತಿಲ್ಲ ಎಂದು ವೀರಭದ್ರ ತನ್ನ ಅಸಹಾಯಕತೆ ವ್ಯಕ್ತಪಡಿಸಿದ್ದಾರೆ. ಪ್ರತಿ ಕೆಲಸದ ದಿನಗಳಲ್ಲಿ ಗುರುತಿಸಿದ ವ್ಯಕ್ತಿಗಳಿಗೆ ಮಾತ್ರ ಎಲ್ಲಾ ರೀತಿಯಲ್ಲೂ ಸ್ಪಂದಿಸಿ ಸಾಮಾನ್ಯ ಕಾರ್ಮಿಕರನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ ಇಲ್ಲಿ ತಾರತಮ್ಯ ನಡೆಸಲಾಗುತ್ತಿದೆ ಎಂದು ದೂರಿದ್ದಾರೆ. ಕಳೆದೆರಡು ದಿನಗಳಿಂದ ಕಚೇರಿಗೆ ಕಾರ್ಮಿಕರ ಪರವಣಗಿಯನ್ನು ನವೀಕರಣ ಹಾಗೂ ಹೊಸದಾಗಿ ಪರವಣಿಗೆಯ ಬಗ್ಗೆ ಮಾಹಿತಿ ಪಡೆಯಲು ಮತ್ತು ಇನ್ನಿತರ ವಿಷಯ ವಿನಿಮಯ ಸಂಬಂಧಿಸಿದಂತೆ ಮಾಹಿತಿ ಪಡೆಯಲು ಯಾರು ಇಲ್ಲದೆ ಕಚೇರಿಗೆ ಬೀಗ ಜಡಿದು ಯುವರಾಜ್ ಎಂಬುವವರು ಕಚೇರಿಗೆ ಬರುತ್ತಾರೆ ಕಾಯ್ದು ಕುಳಿತುಕೊಳ್ಳಿ ಎಂದು ಹೇಳಿ ಅಂಜಲಿ ಕಚೇರಿಯಿಂದ ಮಂಗಳವಾರ ಬೆಳಿಗ್ಗೆ ಹೊರ ನಡೆದಿದ್ದಾರೆ. ಯಾರಾದರೂ ಬಂದು ನಮ್ಮ ಸಮಸ್ಯೆಯನ್ನು ಕೇಳುತ್ತಾರೆ ಎಂದು ದೊಡ್ಡಹೈದ. ಬಸವರಾಜ್. ಬಿ ಎಲ್ ಸ್ವಾಮಿ. ರಂಗಸ್ವಾಮಿ. ಮಹೇಂದ್ರ. ಎಸ್ ಅಭಿಷೇಕ್. ಗಣೇಶ್. ಶಾರದಮ್ಮ ಸೇರಿದಂತೆ ಐವತ್ತಕ್ಕೂ ಹೆಚ್ಚು ಮಂದಿ ಕಚೇ-ರಿಯ ಮುಂದೆ ತಮ್ಮ ಕೆಲಸ ಬಿಟ್ಟು ಕಾಯ್ದು ನಿಂತು ಸಂಜೆ ತಮ್ಮ ಊರುಗಳಿಗೆ ತೆರಳಿದರು. ಸ್ಥಳೀಯ ಶಾಸಕರಾದ ಕೆ ವೆಂಕಟೇಶ್ ರವರು ಗಮನಹರಿಸಿ ಕಾರ್ಮಿಕ ಇಲಾಖೆಯ ಅವ್ಯವಸ್ಥೆಯನ್ನು ಸರಿಪಡಿಸಬೇಕು ಎಂದು ಅವರು ಮನವಿ ಮಾಡಿಕೊಂಡರು. ಈಗಾಗದಂತೆ ನೋಡಿಕೊಳ್ಳುತ್ತೇನೆ : ಕೆ ಆರ್ ನಗರ ತಾಲೂಕಿನ ದಾವಣಗೆರೆ ಗ್ರಾಮದಲ್ಲಿ ನಡೆಯುತ್ತಿರುವ ಇಲಾಖೆ ಕಾರ್ಯಕ್ರಮದಲ್ಲಿದ್ದು ನನಗೆ ಕೆಲವು ದಾಖಲೆಗಳು ಬೇಕಾಗಿರುವುದರಿಂದ ಅಂಜಲಿ ಎಂಬ ಸಿಬ್ಬಂದಿಗೆ ತರುವಂತೆ ಹೇಳಿದ್ದೇನೆ ಆದ್ದರಿಂದ ಬರುತ್ತಿರಬಹುದು ಯುವರಾಜ್ ಎಂಬ ವ್ಯಕ್ತಿಗೆ ಹೇಳಿದ್ದೆ ಅವರು ಇಲ್ಲವೇ ಅವರು ಇಲ್ಲದೇ ಇರುವುದರಿಂದ ಕಚೇರಿಗೆ ಬೀಗ ಹಾಕಿರ ಬಹುದು ಇದು ಸರಿಯಲ್ಲ ಮುಂದೆ ಹಾಗಾಗದಂತೆ ಎಚ್ಚರ ವಹಿಸಲಾಗುವುದು ಎಂದು ಪಿರಿಯಾಪಟ್ಟಣ ತಾಲೂಕು ಕಾರ್ಮಿಕ ಇಲಾಖೆಯ ವೃತ್ತ ನಿರೀಕ್ಷಕ ಗೋವಿಂದರಾಜ್ ಯಾದವ್ ಸ್ಪಷ್ಟಪಡಿಸಿದ್ದರು.

# ತರಕಾರಿ ಬೀಜಗಳ ಮಾರಾಟಕ್ಕಾಗಿ ಪರವಾನಿಗೆ ಪಡೆಯುವುದು ಕಡ್ಡಾಯ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.23- ಕಲಬುರಗಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬುರುವ ಎಲ್ಲಾ ತರಕಾರಿ ಬೀಜ ಮಾರಾಟಗಾರರು/ ವ್ಯಾಪಾರಸ್ಥರು ಬೀಜಗಳ ಮಾರಾಟಕ್ಕಾಗಿ ಬೀಜ ನಿಯಂತ್ರಣ ಆದೇಶ Seeds (Control) Order 1983ರನ್ವಯ ಬೀಜ ಪರವಾನಗಿ (Seed License) ಹೊಂದಿರುವುದು ಕಡ್ಡಾಯವಾಗಿದೆ ಎಂದು ಕಲಬುರಗಿ (ಜಿ.ಪಂ.) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

ಆದ್ದರಿಂದ ಬೀಜ ಪರವಾನಗಿ ಪಡೆಯದೇ ತರಕಾರಿ ಬೀಜ ಮಾರಾಟಗಾರರು/ವ್ಯಾಪಾರಸ್ಥರು ಮಾರುವಂತಿಲ್ಲ.

# ಮೊಹರಂ ಹಬ್ಬಕ್ಕೆ ಸಕಲ ಸಿದ್ಧತೆ: ಕುದರಿಮೋತಿಯಲ್ಲಿ ಪೊಲೀಸ್ ಶಾಂತಿ ಸಭೆ

• ಮಲ್ಲಮ್ಮ ನುಡಿ ವಾರ್ತೆ ಕುಕನೂರು



ಸಮೀಪದ ಕುದರಿಮೋತಿ ಗ್ರಾಮದಲ್ಲಿ ನಡೆಯಲಿರುವ ಪ್ರತಿವರ್ಷದಂತೆ ಈ ವರ್ಷದ ಮೊಹರಂ ಹಬ್ಬ ಪ್ರಮುಖವಾಗಿದ್ದು ಏಕೆಂದರೆ ಕುದರಿಮೋತಿ ಮೊಹರಂ ಹಬ್ಬವನ್ನು ಎಲ್ಲಾ ಸಮಾಜದವರಕೊಡಿಕೊಂಡು ಭಾವೈಕ್ಯಯಿಂದ ಪ್ರತಿವರ್ಷ ಈ ಹಬ್ಬವನ್ನು ಆಚರಣೆ ಮಾಡುತ್ತಾ ಬಂದಿದ್ದಾರೆ ಗ್ರಾಮದಲ್ಲಿ ಎಲ್ಲಾ ಸಮಾಜದವರು ತುಂಬಾ ಸಹಕಾರ ಇರುವದರಿಂದ ಮೊಹರಂ ಹಬ್ಬ ಶಾಂತಿಯುತ ಹಾಗೂ ಸೌಹಾರ್ದಯುತವಾಗಿ ಆಚರಿಸುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆಯಿಂದ ಶಾಂತಿ ಸಭೆ ನಡೆಸಲಾಯಿತು.

ಸಭೆಯಲ್ಲಿ ಮಾತನಾಡಿದ ಪಿಎಸ್ಐ ಟಿ. ಗುರುರಾಜ ಯಾದವ, ಮೊಹರಂ ಹಬ್ಬದ ಸಂದರ್ಭದಲ್ಲಿ ಸಾರ್ವಜನಿಕರು ಕಾನೂನು ಸುವ್ಯವಸ್ಥೆ ಕಾಪಾಡಲು ಸಹಕರಿಸಬೇಕು. ಯಾವುದೇ ವದಂತಿಗಳಿಗೆ ಕಿವಿಗೊಡದೆ ಪರಸ್ಪರ ಸಹಬಾಳ್ವೆ ಮತ್ತು ಸಹೋದರತ್ವದ ಮನೋಭಾವದಿಂದ ಹಬ್ಬವನ್ನು ಆಚರಿಸಬೇಕು ಎಂದು ಮನವಿ ಮಾಡಿದರು.

ನಂತರ ಮಾತನಾಡಿದ ದಳಪತಿ ಹನಮಗೌಡ ಪೊ. ಪಾಟೀಲ್, ಗ್ರಾಮಸ್ಥರು ಹಾಗೂ ಯುವಕರು ಪೊಲೀಸ್ ಇಲಾಖೆಯೊಂದಿಗೆ ಕೈಜೋಡಿಸಿ ಹಬ್ಬವನ್ನು ಯಶಸ್ವಿಯಾಗಿ ನಡೆಸಲು ಸಹಕರಿಸುತ್ತಾರೆ ನಮ್ಮ ಕುದರಿಮೋತಿ ಮೊಹರಂ ಹಬ್ಬ ರಾಜ್ಯಕ್ಕೆ ನಂಬರ್ ಒನ್ ಹಾಗೂ ಎರಡನೇ ಸ್ಥಾನ ಲಿಂಗಸ್ಗೂರು ತಾಲೂಕು ಮುದಗಲ್ ಎಂದು ಹೆಸರು ವಾಸಿಯಾಗಿದೆ ಅದಕ್ಕೆ ನಮ್ಮ ಊರಿನ ಹಿರಿಯರು ಯುವಕರು ಯಾವಾಗಲೂ ಮೊಹರಂ ಹಬ್ಬದ ಸಂದರ್ಭದಲ್ಲಿ ಯಾವುದೇ ಜಗಳ ಮತ್ತು ಗಲಾಟೆ ಮಾಡಲ್ಲಾ ಎಂದು ಭರವಸೆ ಮಾತನಾಡಿದರು ಈ ಸಂದರ್ಭದಲ್ಲಿ ಪಿಎಸ್ಐ ಸಂಗನಗೌಡ,ವೇಷಗಾರ ಸಮಾಜದ ಮುಖಂಡರಾದ ಚಿನ್ನಪ್ಪ, ದುರಗಪ್ಪ ದೊಪಂ,ಚಂದಪ್ಪ ,ರಮೇಶ,ಕಾರ್ಯಕ್ರಮದ ನಿರೂಪಣೆ ಮಂಜುನಾಥ ಗಟ್ಟೆಪ್ಪನವರ್, ಗ್ರಾಮದ ಮುಖಂಡರಾದ ಬಸಪ್ಪ ದೊಡ್ಡಮನಿ, ಸುಭಾಷ್ ಈಡಿಗೇರ, ಡಾ.ಹುಸೇನಬಾಷ ಮಕಾಂದರ್, ಹಾಸೀಮಸಾಬ ಮಾಕಾಂದರ್,ಮಾಜಿ ಗ್ರಾಮ ಪಂಚಾಯತಿ ಸದಸ್ಯರಾದ ಮಾಬುಸಾಬ ಮಕಂದಾರ್,ಶರಣಯ್ಯ ಜಂಗಮೂರು,ರವಿ ಕಟಗಿ, ಮುಖಂಡರಾದ,ದ್ಯಾಮಣ್ಣ ಉಚ್ಚಲಕುಂಟಿ, ಮಹಾಂತಪ್ಪ ಶಿಡ್ನಳ್ಳಿ, ಶಿವಪ್ಪ ಬೇವಿನಗಿಡದ್, ಉಮೇಶ ತಲ್ಲೂರ, ಪಂಪಾಪತಿ ವಣಗೇರಿ, ಸೇರಿದಂತೆ ಇತರರು ಇದ್ದರು

# ಯುವಜನರು ಸಂವಿಧಾನದ ಮೌಲ್ಯ ಜೀವನದಲ್ಲಿ ಅಳವಡಿಸಿಕೊಳ್ಳಲಿ




• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಹಬಾಳ್ವೆ ನೆಲೆಸಬೇಕಾದರೆ ಸಂವಿಧಾನದಲ್ಲಿರುವ ಸ್ವಾತಂತ್ರ್ಯ, ಸಮಾನತೆ, ನ್ಯಾಯ ಹಾಗೂ ಭ್ರಾತೃತ್ವದ ಮೌಲ್ಯಗಳನ್ನು ಪ್ರತಿಯೊಬ್ಬರೂ ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಜಾನಪದ ಅಕಾಡೆಮಿ ಸದಸ್ಯ ಡಾ. ಜೀವನಸಾಬ್ ವಾಲಿಕಾರ ಹೇಳಿದರು.

ಅವರು ತಾಲೂಕಿನ ಕಕ್ಕಿಹಳ್ಳಿ ಗ್ರಾಮದ ಸಾರ್ವಜನಿಕ ಗ್ರಂಥಾಲಯದ ಸಭಾಂಗಣದಲ್ಲಿ ಬಳಗೇರಿ ಗ್ರಾಮ ಪಂಚಾಯತ್, ಎಐಡಿವೈಓ (AIDYO) ಕೊಪ್ಪಳ ಹಾಗೂ ಸಂವಿಧಾನ ಸಂರಕ್ಷಣಾ ವೇದಿಕೆ, ಕಕ್ಕಿಹಳ್ಳಿ ಇವರ ಸಹಯೋಗದಲ್ಲಿ ಆಯೋಜಿಸಿದ್ದ 'ಸಾಂವಿಧಾನಿಕ ಮೌಲ್ಯಗಳ ಅನುಷ್ಠಾನ ಮತ್ತು ಭ್ರಾತೃತ್ವ' ಕುರಿತ ಯುವಜನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಕಾರ್ಯಕ್ರಮದ ಆರಂಭದಲ್ಲಿ ಬುದ್ಧ, ಬಸವಣ್ಣ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಿ, ಭಾರತದ ಸಂವಿಧಾನದ ಪೀಠಿಕೆಯನ್ನು ಸಾಮೂಹಿಕವಾಗಿ ವಾಚಿಸಲಾಯಿತು. ಬಳಿಕ ಗಣ್ಯರು ಸೇರಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮುಖ್ಯ ಉಪನ್ಯಾಸ ನೀಡಿದ ಅವರು, ಹಾಡುಗಳು, ನುಡಿಗಟ್ಟುಗಳು ಹಾಗೂ ಜನಪದ ಉದಾಹರಣೆಗಳ ಮೂಲಕ ಸಂವಿಧಾನದ ಮೌಲ್ಯಗಳನ್ನು ಸರಳವಾಗಿ ಹಾಗೂ ಮನಮುಟ್ಟುವ ರೀತಿಯಲ್ಲಿ ವಿವರಿಸಿದರು. ಭಿನ್ನತೆಗಳ ನಡುವೆ ಭ್ರಾತೃತ್ವ, ಪರಸ್ಪರ ಗೌರವ ಮತ್ತು ಸಹಿಷ್ಣುತೆಯ ಮನೋಭಾವ ಬೆಳೆಸಿದಾಗ ಮಾತ್ರ ಸೌಹಾರ್ದಯುತ ಸಮಾಜ ನಿರ್ಮಾಣ ಸಾಧ್ಯ ಎಂದು ಹೇಳಿದರು.

ಶಿಬಿರದ ಅಧ್ಯಕ್ಷತೆ ವಹಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ಸಂವಿಧಾನ ಸಂರಕ್ಷಣಾ ವೇದಿಕೆಯ ಸಂಚಾಲಕ ಭೀಮಾಶಂಕರ್ ಪಾಣೇಗಾಂವ್, ಜಾತಿ, ಧರ್ಮ, ಪ್ರಾಂತ್ಯ, ಭಾಷೆ ಹಾಗೂ ಲಿಂಗ ಆಧಾರಿತ ತಾರತಮ್ಯಗಳನ್ನು ತೊರೆದು ಭ್ರಾತೃತ್ವದ ಮನೋಭಾವವನ್ನು ಪ್ರತಿಯೊಬ್ಬರೂ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಪ್ರತಿಯೊಬ್ಬ ನಾಗರಿಕರೂ ಭಾರತದ ಸಂವಿಧಾನವನ್ನು ಓದಿ, ಅದರ ಆಶಯಗಳನ್ನು ಅರ್ಥೈಸಿಕೊಂಡು, ಸಂವಿಧಾನದ ಮೂಲ ತತ್ವಗಳನ್ನು ತಮ್ಮ ಬದುಕಿನಲ್ಲಿ ಮೈಗೂಡಿಸಿಕೊಳ್ಳಬೇಕು. ಸಂವಿಧಾನದ ಆಶಯಗಳು ಕೇವಲ ಪುಸ್ತಕದಲ್ಲೇ ಉಳಿಯದೆ ನಮ್ಮ ದೈನಂದಿನ ಬದುಕಿನ ಭಾಗವಾಗಬೇಕು. ನ್ಯಾಯ, ಸ್ವಾತಂತ್ರ್ಯ, ಸಮಾನತೆ ಹಾಗೂ ಭ್ರಾತೃತ್ವದ ಮೌಲ್ಯಗಳನ್ನು ಅನುಷ್ಠಾನಗೊಳಿಸಲು ಪ್ರತಿಯೊಬ್ಬರೂ ಬದ್ಧರಾಗಬೇಕು. ಸಮಾಜದಲ್ಲಿರುವ ಅಸಮಾನತೆ, ಅನ್ಯಾಯ ಮತ್ತು ತಾರತಮ್ಯಗಳನ್ನು ನಿವಾರಿಸಿ, ಸಂವಿಧಾನದ ಆಶಯಗಳನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಯುವಜನರು ಮುಂಚೂಣಿಯಲ್ಲಿ ನಿಲ್ಲುವ ಸಂಕಲ್ಪ ಮಾಡಬೇಕು ಎಂದು ಹೇಳಿದರು.

ಸಂವಿಧಾನ ಚಿಂತಕ ಧರ್ಮರಾಜ್ ಗೋನಾಳ ಮಾತನಾಡಿ, ಸಂವಿಧಾನದಲ್ಲಿರುವ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಹಾಗೂ ಭ್ರಾತೃತ್ವದ ಆಶಯಗಳನ್ನು ಯುವಜನರು ಅರ್ಥಮಾಡಿಕೊಂಡು ಸಮಾಜದಲ್ಲಿ ಅನುಷ್ಠಾನಗೊಳಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದರು.

ಸಾಮಾಜಿಕ ಹೋರಾಟಗಾರ ಸುರೇಶ್ ಬಳೂಟಗಿ ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿ ಸಂವಿಧಾನದ ಆಶಯಗಳು ಮತ್ತು ಸಾಂವಿಧಾನಿಕ ಮೌಲ್ಯಗಳ ಕುರಿತು ನಿರಂತರ ಜಾಗೃತಿ ಮೂಡಿಸುವ ಮೂಲಕ ಸಾಮಾಜಿಕ ಸಾಮರಸ್ಯ, ವೈಜ್ಞಾನಿಕ ಮನೋಭಾವ ಹಾಗೂ ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ಬಲಪಡಿಸಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಗೌರಿ ಗೋನಾಳ್ ಅವರು ಸಂವಿಧಾನ ಜಾಗೃತಿ ಗೀತೆಗಳನ್ನು ಹಾಡಿದರು.

ಭಾಗವಹಿಸಿದ್ದ ಶಿಬಿರಾರ್ಥಿಗಳೆಲ್ಲರಿಗೂ ಪ್ರಮಾಣ ಪತ್ರ ನೀಡಲಾಯಿತು. ಬಳಗೇರಿ ಗ್ರಾಮ ಪಂಚಾಯತ್ ಆಡಳಿತ ಅಧಿಕಾರಿ ಕುಮಾರಿ ರಾಣಿ ಹಳ್ಳಿ ಅವರು ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಮುಖಂಡ ಮೇಘರಾಜ್ ಬಳಗೇರಿ, ಮಾಜಿ ಗ್ರಾಮ ಪಂಚಾಯತ್ ಸದಸ್ಯ ಯಮನೂರಪ್ಪ ಕಟ್ಟಿಮನಿ, ಮಾಜಿ ಗ್ರಾಮ ಪಂಚಾಯತ್ ಅಧ್ಯಕ್ಷ ವಿರುಪಾಕ್ಷಯ್ಯ ಕುರ್ತಕೋಟಿ, ಎಸ್‌ಡಿಎಂಸಿ ಅಧ್ಯಕ್ಷ ಯಮನೂರಪ್ಪ ಆರ್. ಭಾನಾಪುರ, ಪತ್ರಕರ್ತ ಚಂದ್ರು ಆರ್. ಭಾನಾಪುರ, ಶಶಿಕುಮಾರ ಬಳಿಗೇರಿ, ಹಂಪಣ್ಣ ಕಟ್ಟಿಮನಿ , ಮಹಾದೇವಪ್ಪ ಹಿರೇಮನಿ, ಬಾಲಚಂದ್ರ ವೈ.ಟಿ., ಶಿವು ಬಳಗೇರಿ, ಜ್ಯೋತಿ ಎಂ. ಕಾರಭಾರಿ, ಗ್ರಂಥಪಾಲಕಿ ಗವಿಸಿದ್ದಮ್ಮ ಗೌಡ್ರ ಹಾಗೂ ತಿರುಪತಿ ತಲ್ಲೂರು, ಶಂಕ್ರಮ್ಮ ಕೆಂಭಾವಿ ಮಠ ಸೇರಿದಂತೆ ಸಂವಿಧಾನ ಸಂಗಾತಿಗಳಾದ ಸಲ್ಮಾ ಜಾನ್, ನಿಂಗು ಬೆಣಕಲ್, ಶಶಿಕಲಾ ಮಠದ, ಕೃಷ್ಣವೇಣಿ, ಕರಿಯಪ್ಪ ಮಣ್ಣಿನವರ್, ದಿಲ್ ಶಾದ್ ಹಾಗೂ ಬಳಗೇರಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಕಕ್ಕಿಹಳ್ಳಿ, ಕೋನಾಪುರ, ಬಳಗೇರಿ, ಹರಿಶಂಕರ ಬಂಡಿ ಹಾಗೂ ಚೆನ್ನಪ್ಪನಹಳ್ಳಿ ಗ್ರಾಮಗಳ 100ಕ್ಕೂ ಹೆಚ್ಚು ವಿದ್ಯಾರ್ಥಿ-ವಿದ್ಯಾರ್ಥಿನಿಯರು, ಯುವಕ-ಯುವತಿಯರು ಹಾಗೂ ಸಾರ್ವಜನಿಕರು ಶಿಬಿರದಲ್ಲಿ ಭಾಗವಹಿಸಿದ್ದರು.

> ಬಡತನ, ಬೆಲೆ ಏರಿಕೆ, ನಿರುದ್ಯೋಗ, ಭ್ರಷ್ಟಾಚಾರ, ಕೋಮುವಾದ ಹಾಗೂ ಜಾತಿವಾದದಂತಹ ಸಾಮಾಜಿಕ ಸಮಸ್ಯೆಗಳ ವಿರುದ್ಧ ನಾವೆಲ್ಲರೂ ಒಂದಾಗಿ ಹೋರಾಟ ನಡೆಸಬೇಕಿದೆ. ಭಗತ್ ಸಿಂಗ್, ನೇತಾಜಿ ಸುಭಾಷ್ ಚಂದ್ರ ಬೋಸ್ ಅವರಂತಹ ಮಹನೀಯರ ವಿಚಾರಧಾರೆಗಳನ್ನು ಯುವಜನರು ಜೀವನದಲ್ಲಿ ಅಳವಡಿಸಿಕೊಳ್ಳಬೇಕು.ಜೊತೆಗೆ ಉನ್ನತ ನೀತಿ, ನೈತಿಕತೆ, ಸಂಸ್ಕೃತಿ ಬೆಳೆಸಿಕೊಂಡಾಗ ಮಾತ್ರ ಸಮಾಜ ಬದಲಾವಣೆಗೆ ಪೂರಕವಾಗುತ್ತದೆ".
>
> **– ಶರಣು ಪಾಟೀಲ್, ಎಐಡಿವೈಓ ಜಿಲ್ಲಾ ಕಾರ್ಯದರ್ಶಿ, ಕೊಪ್ಪಳ**

> ಗ್ರಾಮೀಣ ಭಾಗದಲ್ಲಿ ಇನ್ನೂ ಅನೇಕ ಜನರು ಮೂಢನಂಬಿಕೆಗಳಿಗೆ ಒಳಗಾಗಿ ಸ್ವಯಂಘೋಷಿತ ಸಾಧು-ಸಂತರು ಹಾಗೂ ಪವಾಡಗಳ ಹೆಸರಿನಲ್ಲಿ ನಡೆಯುವ ವಂಚನೆಗಳಿಗೆ ಬಲಿಯಾಗುತ್ತಿದ್ದಾರೆ. ಇದರಿಂದ ಜನರು ಆರ್ಥಿಕವಾಗಿ ಮತ್ತು ಮಾನಸಿಕವಾಗಿ ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ . ಇದರಿಂದ ಹೊರಬಂದು ಪ್ರತಿಯೊಬ್ಬರೂ ವೈಜ್ಞಾನಿಕ ಮನೋಭಾವ ಮತ್ತು ತಾರ್ಕಿಕ ಚಿಂತನೆಯನ್ನು ಬೆಳೆಸಿಕೊಳ್ಳಬೇಕು. ಪವಾಡಗಳ ಹೆಸರಿನಲ್ಲಿ ನಡೆಯುವ ಕೆಲ ಮೋಸಗಳನ್ನು ಈ ಶಿಬಿರದಲ್ಲಿ ಪ್ರಾತ್ಯಕ್ಷಿಕೆಯ ಮೂಲಕ ಬಯಲುಪಡಿಸಲಾಗಿದೆ. ಇಂತಹ ಪವಾಡಗಳು ಅಲೌಕಿಕ ಶಕ್ತಿಗಳಲ್ಲ, ಅವುಗಳ ಹಿಂದಿರುವ ವೈಜ್ಞಾನಿಕ ಕಾರಣಗಳನ್ನು ಅರ್ಥಮಾಡಿಕೊಂಡು ಸಮಾಜದಲ್ಲಿ ವೈಜ್ಞಾನಿಕ ಮನೋಭಾವವನ್ನು ಬೆಳೆಸುವ ಅಗತ್ಯವಿದೆ. "
>
> **– ಆರ್. ವಿ. ಕಾಮನೂರ, ವೈಜ್ಞಾನಿಕ ಚಿಂತಕ, ಕೊಪ್ಪಳ**

# ಗ್ಯಾರಂಟಿ ಯೋಜನೆಗಳ ದುರುಪಯೋಗಕ್ಕೆ ಬ್ರೇಕ್: ಅರ್ಹ ಫಲಾನುಭವಿಗಳಿಗೆ ಮಾತ್ರ ಸೌಲಭ್ಯ: ಅಧ್ಯಕ್ಷ ಎಚ್.ಎಂ. ರೇವಣ್ಣ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.23 : ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು ಜನರ ಆರ್ಥಿಕ ಸಬಲೀಕರಣಕ್ಕೆ ಮಹತ್ವದ ಕೊಡುಗೆ ನೀಡಿದ್ದು, ಯೋಜನೆಗಳ ದುರುಪಯೋಗವನ್ನು ತಡೆಗಟ್ಟುವ ಮೂಲಕ ಅರ್ಹ ಫಲಾನುಭವಿಗಳಿಗೆ ಮಾತ್ರ ಸೌಲಭ್ಯ ತಲುಪುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ. ರೇವಣ್ಣ ಹೇಳಿದ್ದಾರೆ.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯೋಜನೆಗಳ ಅನುಷ್ಠಾನ ವೇಳೆ ಪತ್ತೆಯಾದ ಅಕ್ರಮಗಳನ್ನು ತಡೆಯಲು ಸರ್ಕಾರ ಕ್ರಮ ಕೈಗೊಂಡಿದ್ದು, ತಪ್ಪಾಗಿ ವರ್ಗಾವಣೆಯಾಗಿದ್ದ ಸುಮಾರು 14 ರಿಂದ 15 ಕೋಟಿ ಮೊತ್ತವನ್ನು ಈಗಾಗಲೇ ವಾಪಸ್ ಪಡೆಯಲಾಗಿದೆ. ಉಳಿದಿರುವ ಸುಮಾರು 100 ಕೋಟಿ ಮೊತ್ತದ ವಸೂಲಾತಿಗೆ ಬ್ಯಾಂಕುಗಳೊಂದಿಗೆ ಸಮನ್ವಯ ಸಾಧಿಸಿ ಅಗತ್ಯ ಕ್ರಮ ಜರುಗಿಸಲಾಗುತ್ತಿದೆ ಎಂದು ತಿಳಿಸಿದರು.

ಮೃತರ ಖಾತೆಗಳಿಗೆ ಹಣ ಜಮೆ; ಅಸಮಾಧಾನ

ಪರಿಶೀಲನೆ ವೇಳೆ ಮೃತಪಟ್ಟವರ ಖಾತೆಗಳಿಗೆ ಹಣ ಜಮೆಯಾಗಿರುವುದು, ಒಂದೇ ಬ್ಯಾಂಕ್ ಖಾತೆಗೆ 20ಕ್ಕೂ ಹೆಚ್ಚು ಫಲಾನುಭವಿಗಳನ್ನು ಲಿಂಕ್ ಮಾಡಿರುವುದು ಹಾಗೂ ಬ್ಯಾಂಕ್ ಖಾತೆ ಇಲ್ಲದಿದ್ದರೂ ಹಣ ವರ್ಗಾವಣೆಯಾಗಿರುವಂತಹ ಗಂಭೀರ ಲೋಪಗಳು ಬೆಳಕಿಗೆ ಬಂದಿವೆ ಎಂದು ರೇವಣ್ಣ ಹೇಳಿದರು. ಗೃಹಲಕ್ಷ್ಮಿ ಯೋಜನೆಯಡಿ ಕಲಬುರಗಿ ಜಿಲ್ಲೆಯಲ್ಲಿ 9,156 ಮೃತ ಫಲಾನುಭವಿಗಳನ್ನು ಗುರುತಿಸಲಾಗಿದ್ದು, ಅವರ ಖಾತೆಗಳಿಗೆ ಒಟ್ಟು 4.27 ಕೋಟಿ ಜಮೆಯಾಗಿದೆ. ಈ ಪೈಕಿ 5,336 ಖಾತೆಗಳಲ್ಲಿ ಹಣ ವರ್ಗಾವಣೆಯನ್ನು ತಡೆಹಿಡಿಯಲಾಗಿದ್ದು, ಇದುವರೆಗೆ ಕೇವಲ 25.84 ಲಕ್ಷ ಮಾತ್ರ ವಸೂಲಿ ಮಾಡಲಾಗಿದೆ.

ವಸೂಲಾತಿ ಪ್ರಗತಿ ತೃಪ್ತಿಕರವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ ಅವರು, ಮುಂದಿನ 8 ರಿಂದ 10 ದಿನಗಳೊಳಗೆ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಮನೆ ಮನೆ ಸಮೀಕ್ಷೆ ನಡೆಸಿ ಸಮಗ್ರ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬ್ಯಾಂಕುಗಳಿಗೆ ಕಟ್ಟುನಿಟ್ಟಿನ ಎಚ್ಚರಿಕೆ:

ಗ್ಯಾರಂಟಿ ಯೋಜನೆಗಳಡಿ ಫಲಾನುಭವಿಗಳ ಖಾತೆಗೆ ಜಮೆಯಾಗುವ ಹಣವನ್ನು ಕೆಲವು ಬ್ಯಾಂಕುಗಳು ಹಳೆಯ ಸಾಲಗಳಿಗೆ ಹೊಂದಾಣಿಕೆ ಮಾಡಿಕೊಳ್ಳುತ್ತಿರುವ ಬಗ್ಗೆ ದೂರುಗಳು ಬಂದಿವೆ. ಇದು ನಿಯಮಬಾಹಿರವಾಗಿದ್ದು, ಇಂತಹ ಕ್ರಮಗಳನ್ನು ತಕ್ಷಣ ನಿಲ್ಲಿಸುವಂತೆ ಬ್ಯಾಂಕುಗಳಿಗೆ ಎಚ್ಚರಿಕೆ ನೀಡಲಾಗಿದೆ ಎಂದು ಹೇಳಿದರು.

ಅನ್ನಭಾಗ್ಯ ಯೋಜನೆಯಲ್ಲಿ ಅಕ್ರಮ ತಡೆ:

ಅನ್ನಭಾಗ್ಯ ಯೋಜನೆಯಡಿ ಆಹಾರ ಇಲಾಖೆ ಕೈಗೊಂಡ ಕ್ರಮಗಳ ಕುರಿತು ಮಾಹಿತಿ ನೀಡಿದ ಅವರು, ನಿಯಮ ಉಲ್ಲಂಘಿಸಿದ 14 ನ್ಯಾಯಬೆಲೆ ಅಂಗಡಿಗಳ ಪರವಾನಗಿ ರದ್ದುಪಡಿಸಲಾಗಿದೆ. ಅಲ್ಲದೆ 6,874 ಬೋಗಸ್ ಪಡಿತರ ಚೀಟಿಗಳನ್ನು ರದ್ದುಪಡಿಸಿ, 9,631 ಕ್ವಿಂಟಾಲ್ ಅಕ್ರಮ ಆಹಾರ ಧಾನ್ಯಗಳನ್ನು ಜಪ್ತಿ ಮಾಡಲಾಗಿದೆ ಎಂದು ತಿಳಿಸಿದರು. ಜುಲೈ 2023ರಿಂದ ಡಿಸೆಂಬರ್ 2024ರವರೆಗೆ ಅನ್ನಭಾಗ್ಯ ಯೋಜನೆಯಡಿ ಡಿಬಿಟಿ ಮೂಲಕ 508.72 ಕೋಟಿ ಫಲಾನುಭವಿಗಳ ಖಾತೆಗಳಿಗೆ ಜಮೆ ಮಾಡಲಾಗಿದೆ ಎಂದರು.

ಶಕ್ತಿ ಯೋಜನೆಗೆ 608 ಕೋಟಿ ಬಿಡುಗಡೆ:

ಶಕ್ತಿ ಯೋಜನೆಯಡಿ ಸಾರಿಗೆ ಸಂಸ್ಥೆಗಳಿಗೆ ಬಿಡುಗಡೆಯಾಗಬೇಕಿದ್ದ ಬಾಕಿ ಮೊತ್ತದಲ್ಲಿ ಶೇ.80ರಷ್ಟು, ಅಂದರೆ 608 ಕೋಟಿ ಹಣವನ್ನು ಸರ್ಕಾರ ಬಿಡುಗಡೆ ಮಾಡಿದೆ.

# ಯೋಗದಿಂದ ದೇಹ ಮತ್ತು ಮನಸ್ಸು ಸದೃಢ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ನಮ್ಮ ಮನಸ್ಸು ಸದೃಢವಾಗಿದ್ದರೆ ನಮ್ಮ ದೇಹವು ಸದೃಢವಾಗಿರುತ್ತದೆ ಅದಕ್ಕಾಗಿ ಪ್ರತಿಯೊಬ್ಬರು ಯೋಗ ಮಾಡಬೇಕು ಯೋಗದಿಂದ ಮಾತ್ರ ನಮ್ಮ ದೇಹ ಮತ್ತು ಮನಸ್ಸು ಸದೃಢವಾಗಿಟ್ಟುಕೊಳ್ಳಲು ಸಾಧ್ಯವಾಗಿದೆ ಎಂದು ನಗರದ ಶ್ರೀ ಸಾಯಿ ಬೋಡೋಕಾನ್ ಕರಾಟೆ ಕ್ಲಬ್ ನ ಮುಖ್ಯ ತರಬೇತಿದಾರ ಶ್ರೀಕಾಂತ್ ಪಿ ಕಲಾಲ್ ಹೇಳಿದರು,

ಅವರು ನಗರದ ಸಂಸ್ಥೆಯ ಕ್ರೀಡಾ ಮೈದಾನದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಸಮಾರಂಭದ ನೇತೃತ್ವ ವಹಿಸಿ ಯೋಗ ಮಾಡುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು ,

ಮುಂದುವರೆದು ಮಾತನಾಡಿ ಯೋಗ ಪ್ರಾಣಾಯಾಮ ಧ್ಯಾನ ದಿಂದ ಮನಸ್ಸಿಗೆ ಶಾಂತಿ ನೆಮ್ಮದಿ ಸದೃಢತೆ ಉಂಟಾಗುತ್ತದೆ ಪ್ರತಿಯೊಬ್ಬರು ಯೋಗ ಮಾಡುವುದರ ಮೂಲಕ ಆರೋಗ್ಯ ಪೂರ್ಣ ಸಮಾಜ ನಿರ್ಮಾಣ ಮಾಡುವಲ್ಲಿ ಸಹಕರಿಸಬೇಕು ಎಂದು ಶ್ರೀ ಸಾಯಿ ಬೂಡೊ ಕಾನ್ ಕರಾಟೆ ಕ್ಲಬ್ ನ ಮುಖ್ಯ ತರಬೇತಿದಾರ ಶ್ರೀಕಾಂತ್ ಪಿ ಕಲಾಲ್ ಅಭಿಪ್ರಾಯಪಟ್ಟರು,

ಈ ಸಂದರ್ಭದಲ್ಲಿ ಕರಾಟೆ ಪಟುಗಳಾದ ಗಣೇಶ್, ಐಶ್ವರ್ಯ, ಪ್ರಿಯಾಂಕಾ,ಅಖಿಲೇಶ್, ಧ್ರುವ, ಗಗನ್, ಪ್ರೀತಮ್ ,ತಿರುಮಲ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

# ಸುಟ್ಟ ಸ್ಥಿತಿಯಲ್ಲಿ ಅಪರಿಚಿತ ಪುರುಷನ ಶವ ಪತ್ತೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಡಿ ಹಿರೇಹಾಳ್ ಮಂಡಲ, ಹಿರ್ದೇಹಾಲ್ ಗ್ರಾಮದ ಹೊರವಲಯದಲ್ಲಿ ಸುಮಾರು 30-35 ವರ್ಷ ವಯಸ್ಸಿನ ಅಪರಿಚಿತ ಪುರುಷ ಶವ ಪತ್ತೆಯಾಗಿದೆ.

ಬಟ್ಟೆಗಳು ಬಿಳಿ ಮತ್ತು ನೀಲಿ ಬಣ್ಣದ್ದಾಗಿದ್ದು, ಚೆಕ್ಸ್ ಹೊಂದಿರುವ ಪೂರ್ಣ ತೋಳಿನ ಅಂಗಿಯೊಂದಿಗೆ.ಸಿಮೆಂಟ್ ಬಣ್ಣದ ಪ್ಯಾಂಟ್

ಶವದ ಮುಖ ಮತ್ತು ಬಟ್ಟೆಗಳು ಸುಟ್ಟು ಹೋಗಿದ್ದವು.ಮೇಲಿನ ವ್ಯಕ್ತಿಯನ್ನು ನೀವು ಗುರುತಿಸಿದರೆ, ನೀವು ಈ ಕೆಳಗಿನ ಸಂಖ್ಯೆಗಳಿಗೆ ಮಾಹಿತಿಯನ್ನು ನೀಡಬಹುದು. ಡಿ ಹಿರೇಹಾಳ್ ಪೊಲೀಸ್ ಠಾಣೆ ಅವರು ಪ್ರಕಟಣೆ ನೀಡಿದ್ದಾರೆ.

ಅಲ್ಲದೆ, ನಿಮ್ಮ ಗ್ರಾಮದಲ್ಲಿ ಅಥವಾ ಹತ್ತಿರದ ಹಳ್ಳಿಗಳಲ್ಲಿ ಇತ್ತೀಚೆಗೆ ಯಾರಾದರೂ ಕಾಣೆಯಾಗಿರುವುದು ನಿಮಗೆ ತಿಳಿದಿದ್ದರೆ, ಅವರ ಮಾಹಿತಿಯನ್ನು ಸಹ ನಮಗೆ ತಿಳಿಸಬಹುದು.

ಮಾಹಿತಿ ನೀಡಿದವರಿಗೆ ಸೂಕ್ತ ಬಹುಮಾನ ನೀಡಲಾಗುವುದು.ಎಸ್.ಐ, ಪಿ.ಎಸ್ ಐ ತಿಳಿಸಿದ್ದಾರೆ. ಈ ಮೊಬೈಲ್ ನಂಬರ್ ಗೆ ಸಂಪರ್ಕಿಸಬಹುದು ಎಂದು ಹೇಳಿದ್ದಾರೆ.

9490109174, ರಾಯದುರ್ಗ ಸಿ.ಐ ಫೋನ್ ನಂಬರ್ 9440796825 ಸಂಪರ್ಕಿಸಬಹುದು.

# ಹೆಚ್ಚಿನ ರೈತರಿಗೆ ಬೆಳೆ ವಿಮೆ ಯೋಜನೆಗಳಡಿ ನೋಂದಾಯಿಸಿ, ವಿಮಾ ಯೋಜನೆಗಳ ಲಾಭ ದೊರಕಿಸಿ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜೂ:23: ರೈತರಿಗೆ ಬೆಳೆ ವಿಮೆ ಯೋಜನೆಗಳ ಲಾಭ ದೊರಕಿಸಲು ವಿಶೇಷ ಗಮನ ನೀಡುವಂತೆ ಜಿಲ್ಲಾಧಿಕಾರಿ ಶ್ರೀ ರಾಹುಲ್ ತುಕಾರಾಮ ಪಾಂಡ್ವೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಕೃಷಿ ಇಲಾಖೆಯ 2026–27ನೇ ಸಾಲಿನ ಜಿಲ್ಲಾ ಮಟ್ಟದ ಬೆಳೆ ವಿಮೆ, ಹತ್ತಿ ಬೆಳೆ ಉತ್ಪಾದಕತೆ ಮತ್ತು ಸೂಕ್ಷ್ಮ ನೀರಾವರಿ ಯೋಜನೆಯ ಅನುಷ್ಠಾನ ಸಮಿತಿ ಸಭೆಗಳ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ರೈತರಿಗೆ ವಿಮೆ ಯೋಜನೆಗಳ ಲಾಭ ದೊರೆಯಲುಅನುಕೂಲವಾಗುವಂತೆತಾಲೂಕುವಾರು,ಹೋಬಳಿ ವಾರು ಹಾಗೂ ಕ್ಷೇತ್ರವಾರು ರೈತರನ್ನು ಹೆಚ್ಚಿನ ರೀತಿಯಲ್ಲಿ ನೊಂದಾಯಿಸಬೇಕು.

ಈ ಬಾರಿ ಮುಂಗಾರು ಕುಂಠಿತದಿಂದ ರೈತರಿಗೆ ತೊಂದರೆಯಾಗುವ ಸಾಧ್ಯತೆ ಇದೆ.ರೈತರನ್ನು ಹೆಚ್ಚಾಗಿ ನೊಂದಾಯಿಸುವ ಜೊತೆಗೆ, ಬೆಳೆ ಹಾನಿಗೆ ಸಂಬಂಧಿಸಿದಂತೆ ವಿಮೆ ಪಾವತಿಯೂ ಸಕಾಲಕ್ಕೆ ಆಗುವಂತೆ ನೋಡಿಕೊಳ್ಳಬೇಕು.ಈ ಕುರಿತು ಯಾವುದೇ ದೂರುಗಳಿಗೆ ಆಸ್ಪದ ನೀಡದಂತೆ ಕೃಷಿ ಇಲಾಖೆ ಅಧಿಕಾರಿಗಳು ಹಾಗೂ ವಿಮೆ ಕಂಪನಿಯ ಅಧಿಕಾರಿಗಳಿಗೆ ಎಚ್ಚರಿಕೆ ವಹಿಸಲು ಅವರು ಸೂಚಿಸಿದರು.

ಜಿಲ್ಲೆಯಲ್ಲಿನ ಬೆಳೆ ಕಟಾವು ಸಮೀಕ್ಷೆಯಡಿ ಯಾವುದೇ ದೂರು ಬರದಂತೆ ನಿಗಾವಹಿಸಿ. ಕೃಷಿ ಇಲಾಖೆ,ಅಂಕಿ ಸಂಖ್ಯೆ ಸಂಗ್ರಹಣಾಧಿಕಾರಿ ಹಾಗೂ ಸಂಬಂಧಪಟ್ಟ ಅಧಿಕಾರಿಗಳ ತಂಡ ರಚಿಸಿ , ಕ್ಷೇತ್ರವಾರು ಗಮನ ನೀಡಬೇಕು.ತುಂತುರ ಹನಿ ನೀರಾವರಿ ಯೋಜನೆಯಡಿ ಅರ್ಹರಿಗೆ ಲಾಭ ದೊರೆಯುವಂತೆ ನೋಡಿಕೊಳ್ಳಲು ಅವರು ಸೂಚಿಸಿದರು.

ಹತ್ತಿ ಉತ್ಪಾದನೆ ಹೆಚ್ಚಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ರೈತರಲ್ಲಿ ಸೂಕ್ತ ಜಾಗೃತಿ ಮೂಡಿಸಿ. ಗುಣಮಟ್ಟದ ಬೀಜ ಪೂರೈಕೆ ಬಗ್ಗೆ ನಿಗಾವಹಿಸಬೇಕು. ಗುಚ್ಛ ಪ್ರಾತ್ಯಕ್ಷಿಕೆ, ಹತ್ತಿಯಲ್ಲಿ ಉತ್ಪಾದಕತೆ ಅಭಿಯಾನ,ಬೆಳೆ ನಿರ್ವಹಣೆ ಬಗ್ಗೆ ಅರಿವು ಮೂಡಿಸಬೇಕು ಎಂದು ಅವರು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿಗಳು 2026– 27ನೇ ಸಾಲಿನ ಹೊಸ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (PMRKVY) ಪರ್ ಡ್ರಾಪ್ ಮೋರ್ ಕ್ರಾಪ್ (PDMC) ಘಟಕದಡಿ ಸೂಕ್ಷ್ಮ ನೀರಾವರಿ ಕಾರ್ಯಕ್ರಮ, ಬೆಳೆ ವಿಮೆ ಕಾರ್ಯಕ್ರಮ(ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಗಳು ಹಾಗೂ ಸ್ಥಳೀಯ ಪ್ರಕೃತಿ ವಿಕೋಪ ಬೆಳೆ ಹಾನಿ ನಿರ್ಧರಿಸಿ ಬೆಳೆ ವಿಮೆ ಸೌಲಭ್ಯ ಕಲ್ಪಿಸುವ ಬಗ್ಗೆ, ಮುಂಗಾರು ಹಂಗಾಮಿನಲ್ಲಿ ಬೆಳೆಗಳಿಗೆ ವಿವಿಧ ಹಂತಗಳ ವಿಮೆ ಮೊತ್ತ, ಯೋಜನೆ ಅನುಷ್ಠಾನದ ಕುರಿತು ಪರಿಶೀಲಿಸಿದರು.

ಜಂಟಿ ಕೃಷಿ ನಿರ್ದೇಶಕ ಶ್ರೀ ರತೇಂದ್ರನಾಥ ಸುಗೂರ್ ಅವರು ಮಾತನಾಡಿ, 2026–27ನೇ ಸಾಲಿನ ಹತ್ತಿ ಬೆಳೆ ಉತ್ಪಾದಕತೆ ಯೋಜನೆಯಡಿಯಲ್ಲಿ ಅಧಿಕ ಸಾಂದ್ರತೆಯಲ್ಲಿ ಹತ್ತಿ ಬೆಳೆದು ಉತ್ಪಾದಕತೆ ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರದಿಂದ ನೀಡಲಾದ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಮಾನ್ಯ ಜಿಲ್ಲಾಧಿಕಾರಿಗಳಿಂದ ಸಭೆಯಲ್ಲಿ ಅನುಮೋದನೆ ಪಡೆದರು ಮತ್ತು ಸೂಕ್ಷ್ಮ ನೀರಾವರಿ ಯೋಜನೆಯಡಿಯಲ್ಲಿ ರೈತರಿಗೆ ಸೂಕ್ಷ್ಮ ನೀರಾವರಿ ಘಟಕಗಳ ವಿತರಣೆ ಕುರಿತು ಜಿಲ್ಲಾಧಿಕಾರಿಗಳಿಗೆ ವಿವರಿಸಿ ಕಾರ್ಯಕ್ರಮದ ಅನುಷ್ಠಾನಕ್ಕೆ ಅನುಮತಿ ಕೋರಿದರು.

ವಿಮೆ ಯೋಜನೆಯ

ಬೆಳೆ 2026–27ನೇ ಸಾಲಿನ ಅಧಿಸೂಚನೆ ಸರ್ಕಾರದಿಂದ ಹೊರಡಿಸಲಾಗಿದ್ದು, ಜಿಲ್ಲೆಯ ರೈತರು ಬೆಳೆ ವಿಮೆಗೆ ನೊಂದಾಯಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಹಾಗೂ ಪ್ರಚಾರ ನೀಡಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲೆಯ ಎಲ್ಲಾ ತಾಲ್ಲೂಕಿನ ಬೆಳೆಗಳಾದ ಉದ್ದು (ಮ.ಆ) ಮತ್ತು ಹೆಸರು (ಮ.ಆ) ಬೆಳೆಗಳಿಗೆ ರೈತರು ವಿಮಾ ಕಂತುಗಳನ್ನು ಪಾವತಿಸಲು 15.07.2026 ಕಡೆಯ ದಿನಾಂಕವಾಗಿರುತ್ತದೆ. ತೊಗರಿ (ನೀ), ಸೂರ್ಯಕಾಂತಿ (ಮ.ಆ), ಹತ್ತಿ (ನೀ ಮತ್ತು ಮ.ಆ), ಸಜ್ಜೆ (ನೀ ಮತ್ತು ಮ.ಆ), ಬೆಳೆಗಳಿಗೆ ರೈತರು ವಿಮಾ ಕಂತುಗಳನ್ನು ಪಾವತಿಸಲು 31.07.2026 ಕಡೆಯ ದಿನಾಂಕವಾಗಿರುತ್ತದೆ. ಹಾಗೂ ಭತ್ತ (ನೀ), ತೊಗರಿ (ಮ.ಆ) ಬೆಳೆಗೆ ರೈತರು ವಿಮಾ ಕಂತುಗಳನ್ನು ಪಾವತಿಸಲು 16.08.2026 ಕಡೆಯ ದಿನಾಂಕವಾಗಿರುತ್ತದೆ.

ಜಿಲ್ಲೆಗೆ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಇಸ್ಕೋ ಟೋಕಿಯೋ ಜನರಲ್ ಇನ್ಸೂರೆನ್ಸ್ ಕಂಪನಿ ಸಂಸ್ಥೆಯನ್ನು ಆಯ್ಕೆ ಮಾಡಲಾಗಿದೆ.

ಬೆಳೆ ಸಾಲ ಪಡೆದ ಮತ್ತು ಪಡೆಯದ ರೈತರಿಗೆ ಬೆಳೆ ವಿಮೆ ಐಚ್ಛಿಕವಾಗಿದ್ದು, ಆಸಕ್ತ ರೈತರು ತಾವು ಬೆಳೆದ ಬೆಳೆಗಳಿಗೆ, ಬೆಳೆ ವಿಮೆ ಮಾಡಿಸಲು ಸಮೀಪದ ಬ್ಯಾಂಕ್‌ಗಳು, ಕೃಷಿ ಪತ್ತಿನ ಸಹಕಾರ ಸಂಘಗಳು (PACS) ಸಾಮಾನ್ಯ ಸೇವಾ ಕೇಂದ್ರಗಳಿಗೆ ಭೇಟಿ ನೀಡಬೇಕು ಎಂದು ಸಭೆಯಲ್ಲಿ ತಿಳಿಸಲಾಯಿತು.ಸಭೆಯಲ್ಲಿ ಕೃಷಿ ಇಲಾಖೆ ಅಧಿಕಾರಿಗಳು,ಅಂಕಿ ಸಂಖ್ಯೆ ಸಂಗ್ರಹಣಾಧಿಕಾರಿ, ಜಿಲ್ಲಾ ಹಾಗೂ ತಾಲೂಕು ಮಟ್ಟದ ಕೃಷಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಲೆಮಾರಿ ಪ.ಜಾತಿ,ಪ.ಪಂಗಡ ಜನಾಂಗದ ಕುಂದು ಕೊರತೆಗಳಿಗೆ ಸ್ಪಂದನೆ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜೂ:23: ಸುರಪುರ ನಗರದ ತಹಸಿಲ್ದಾರ್ ಕಚೇರಿ ಸಭಾಂಗಣದಲ್ಲಿ ತಾಲೂಕ ಆಡಳಿತ, ತಾಲೂಕ ಪಂಚಾಯಿತಿ, ನಗರಸಭೆ, ಸಮಾಜ ಕಲ್ಯಾಣ ಇಲಾಖೆ ಹಾಗೂ ಪ.ಜಾತಿ ,ಪೈ.ಪಂಗಡ ನಿಗಮದ ಸಂಯುಕ್ತ ಆಶ್ರಯದಲ್ಲಿ ಅಲೆಮಾರಿ ಸಮುದಾಯದ ಕುಂದು ಕೊರತೆ ಮತ್ತು ಪ್ರಗತಿ ಪರಿಶೀಲನಾ ಸಭೆ ನಡೆಸಲಾಯಿತು.

ಸಭೆಯಲ್ಲಿ ಭಾಗವಹಿಸಿದ್ದ ಪ.ಜಾ.ಪ.ಪಂ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ.ಜಿ ಮಾತನಾಡಿ, ಕಳೆದ ವರ್ಷ ಯಾದಗಿರಿ ಜಿಲ್ಲಾ ಪ್ರವಾಸ ಕೈಗೊಂಡಾಗ ಜಿಲ್ಲೆಯ ಅಲೆಮಾರಿ ಸಮುದಾಯದ ಜನರ ಅಹವಾಲು ಸ್ವೀಕರಿಸಿದೆ. ಅವುಗಳಲ್ಲಿನ ಪ್ರಗತಿ ಪರಿಶೀಲನೆಗಾಗಿ ಈಗ ಮೊದಲಿಗೆ ಸುರಪುರ ಮತ್ತು ಹುಣಸಗಿ ತಾಲೂಕಿನ ಪ್ರವಾಸ ಕೈಗೊಂಡಿದ್ದು, ಮುಂಬರುವ ದಿನಗಳಲ್ಲಿ ಇತರೆ ಜಿಲ್ಲೆ ಹಾಗೂ ತಾಲೂಕುಗಳಿಗೂ ಭೇಟಿ ನೀಡುವುದಾಗಿ ತಿಳಿಸಿದರು.

ಅಲೆಮಾರಿ ಜನಾಂಗದ ನಿಜವಾದ ಫಲಾನುಭವಿಗಳಿಗೆ ಜಾತಿ ಪ್ರಮಾಣ ಪತ್ರ ನೀಡಬೇಕು. ನಕಲಿ ಎಂದು ಕಂಡು ಬಂದಲ್ಲಿ ಅಂತಹವರನ್ನು ದೂರವಿರುವಂತೆ ತಿಳಿಸಿದರು.

ಜಿಲ್ಲೆಯಲ್ಲಿರುವ ಅಲೆಮಾರಿ ಸಮುದಾಯದ ಶಿಕ್ಷಣ ವಂಚಿತ ಮಕ್ಕಳ ಪಟ್ಟಿಯನ್ನು ಮಾಡುವಂತೆ ತಿಳಿಸಿದ ಅವರು ಸಮುದಾಯಕ್ಕೆ ಸರಕಾರದಿಂದ ದೊರೆಯುವ ಸೌಲಭ್ಯಗಳನ್ನು ಪಡೆದುಕೊಳ್ಳಲು ನಿಗಮಕ್ಕೆ ನಿರಂತರವಾಗಿ ಸಂಪರ್ಕದಲ್ಲಿರುವಂತೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ವಿವಿಧ ಅಲೆಮಾರಿ ಸಮುದಾಯಗಳ ಸಂಘಟನೆಯ ಮುಖಂಡರುಗಳು ಭಾಗವಹಿಸಿ ಮಾತನಾಡಿ, ಅಲೆಮಾರಿ ಜನಾಂಗದ ಜನರಿಗೆ ಮನೆಗಳ ಸಮಸ್ಯೆ, ನಿವೇಶನಗಳ ಸಮಸ್ಯೆ ಇವೆ.ಅವುಗಳನ್ನು ಪರಿಹರಿಸಬೇಕು. ಸಮುದಾಯ ಭವನಗಳನ್ನು ಹಾಗೂ ಗ್ರಂಥಾಲಯಗಳನ್ನು ನಿರ್ಮಿಸಿಕೊಡಬೇಕು. ಗಂಗಾ ಕಲ್ಯಾಣ ಯೋಜನೆ ಅಡಿ ಬಾಕಿ ಉಳಿದವರಿಗೆ ಬೋರ್‌ವೆಲ್ ಹಾಕಿಕೊಡಬೇಕು.ಸುರಪುರ ಮೇದಾರ ಕಾಲೋನಿಯಲ್ಲಿ ಸಾರ್ವಜನಿಕ ಶೌಚಾಲಯ ನಿರ್ಮಾಣ ಮಾಡಲು,ಸಮುದಾಯದ ಹಿರಿಯ ಕಲಾವಿದರಿಗೆ ಮಾಶಾಸನ ನೀಡಬೇಕು. ನಗರ ಸ್ಥಳೀಯ ಸಂಸ್ಥೆಗಳು, ವಿಧಾನಸಭೆಯ ವಿಧಾನ ಪರಿಷತ್ ನಲ್ಲಿ ನಾಮನಿರ್ದೇಶನ ಸದಸ್ಯರ ಆಯ್ಕೆಗೆ ಆದ್ಯತೆ ನೀಡಬೇಕು ಎಂದು ವಿನಂತಿಸಿದರು.

ಇದೇ ಸಂದರ್ಭದಲ್ಲಿ ಸಮುದಾಯಗಳ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ವಿಜಯಪುರ ಜಿಲ್ಲೆಯಿಂದಲೂ ಅಲೆಮಾರಿ ಸಮುದಾಯದ ಮುಖಂಡರು ಆಗಮಿಸಿ, ಸಮಸ್ಯೆಗಳ ಕುರಿತು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಚನ್ನಬಸಪ್ಪ,ಅಲೆಮಾರಿ ಅಭಿವೃದ್ಧಿ ನಿಗಮದ ಕೋ ಆರ್ಡಿನೇಟರ್ ಅನಂತಕುಮಾರ, ಅಲೆಮಾರಿ ಸಮುದಾಯದ ಅಭಿವೃದ್ಧಿ ಇಲಾಖೆಯ ಜಿಲ್ಲಾಧಿಕಾರಿ ಸಿದ್ದಣ್ಣ, ಗ್ರೇಡ್ –2 ತಹಸಿಲ್ದಾರ ಮಲ್ಲಯ್ಯ ದಂಡು,ತಾ.ಪಂ ಇಓ ಬಸವರಾಜ ಸಜ್ಜನ್, ನಗರಸಭೆ ಪೌರಾಯುಕ್ತ ಬಸವರಾಜ ಟಣಕೆದಾರ, ಕಾರ್ಮಿಕ ಇಲಾಖೆಯ ಜಿಲ್ಲಾ ಉಪ ನಿರ್ದೇಶಕ ಶಿವರಾಜ, ತಾಲೂಕ ಸಮಾಜ ಕಲ್ಯಾಣ ಇಲಾಖೆ ಎ.ಡಿ ಮಹ್ಮದ್ ಸಲಿಂ ಉಪಸ್ಥಿತರಿದ್ದರು.

ಸಭೆಯಲ್ಲಿ ಜೆಸ್ಕಾಂ ಎಇಇ ರಫಿಕ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ನೂರಾರು ಜನ ಅಲೆಮಾರಿ ಸಮುದಾಯದ ಮುಖಂಡರು ಭಾಗವಹಿಸಿದ್ದರು.

# ಕೈಗಾರಿಕೆಗಳ ವಿಷಗಾಳಿಯಿಂದ ಜನರ ಜೀವಕ್ಕೆ ಕುತ್ತು ಶಾಸಕ ಕಂದಕೂರ ಕೆಂಡಾಮಂಡಲ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಕಡೇಚೂರು–ಬಾಡಿಯಾಳ ಪ್ರದೇಶದ ಕಾರಖಾನೆಗಳು ಹೊರ ಹಾಕುವ ವಿಷಗಳ ಜನ ಜೀವನಕ್ಕೆ ಕಂಠಕವಾಗಿದ್ದು ಅವುಗಳ ಬಂದ್ ಗೆ ನಾವು ಹೋರಾಟ ಮಾಡುತ್ತಿದ್ದರೆ ಸರಕಾರ ಹೊಸದಾಗಿ ಫಾರ್ಮಾ ಕಂಪನಿಗಳಿಗೆ ಪರವಾನಗಿ ನೀಡಲಾಗುತ್ತಿದೆ ಎಂದು ಶಾಸಕ ಶರಣಗೌಡ ಕಂದಕೂರ ಅವರು ಕಿಡಿ ಕಾರಿದರು.ಸಮೀಪದ ಬದ್ದೇಪಲ್ಲಿ ಗ್ರಾಮದಲ್ಲಿ ಸಿಸಿ ರಸ್ತೆ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದರು.ವಿಷಾನಿಲದಿಂದ ಜನರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಉಂಟಾಗುತ್ತಿದೆ ಎಂಬ ಕಾರಣಕ್ಕೆ ನಮ್ಮ ತಂದೆಯವರು ಶಾಸಕರಿದ್ದಾಗಿನಿಂದಲೂ ನಿರಂತರವಾಗಿ ವಿರೋಧಿಸುತ್ತಲೇ ಬಂದಿದ್ದೇವೆ. ನಾನು ಶಾಸನದ ಮೇಲೆ ಪ್ರತಿ ಅಧಿವೇಶನದಲ್ಲಿ ಕ್ಷೇತ್ರದ ಜನರ ಧ್ವನಿಯಾಗಿ ಮಾಲಿನ್ಯತೆಯ ಬಗ್ಗೆ ಪ್ರಸ್ತಾಪಿಸುತ್ತ ಬಂದಿದ್ದೇನೆ. ಇದಲ್ಲದೆ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷರಿಗೆ ಮನವಿ ಸಲ್ಲಿಸಿದ ಹಿನ್ನಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿದ ಅವರು ಇಲ್ಲಿನ ಅವ್ಯವಸ್ಥೆಯನ್ನು ಕಂಡು ಸೂಕ್ತ ಕ್ರಮಕ್ಕೆ ಸೂಚಿಸಿದ್ದರು. ಇದರಿಂಗಾಗಿ ಕೈಗಾರಿಕಾ ಪ್ರದೇಶದಲ್ಲಿನ ಕಲ್ಯಾಣ ಕರ್ನಾಟಕ ವೇಸ್ಟ್ ಮ್ಯಾನೇಜ್ ಮೆಂಟ್ ಪ್ರಾಜೆಕ್ಟ್ ಪ್ರೈವೈಟ್ ಲಿಮಿಟೆಡ್ ಬಂದ್ ಮಾಡಿ ಆದೇಶ ಹೊರಡಿಸಲಾಗಿದೆ. ನಾವು ಮಾಲಿನ್ಯತೆಯನ್ನು ತಡೆಯಬೇಕು, ಮಾನವ ಜೀವಕ್ಕೆ ಹಾನಿ ಮಾಡುವ ಕಾರಖಾನೆಗಳನ್ನು ಮುಚ್ಚಬೇಕು ಎಂದು ಹೋರಾಟ ಮಾಡುತ್ತಿದ್ದರೆ ಸರಕಾರ ಹೊಸದಾಗಿ ಕಾರಖಾನೆಗಳಿಗೆ ಪರವಾನಗಿ ನೀಡುತ್ತಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.ಕಾರ್ಯಕ್ರಮದಲ್ಲಿ ಪಂಚಾಯತ್ ರಾಜ್ ಇಲಾಖೆಯ ಡಾ. ಶರಣಬಸಪ್ಪ ಪರಮವೇಶ್ವರ, ತಾಪಂ ಇಒ ಅಂಬರೀಶ ಪಾಟೀಲ್, ಜೆಸ್ಕಾಂ ಎಇಇ ಮಾರ್ಕೆಂಡೆಯಾ, ಉಪ ತಹಸೀಲ್ದಾರ್ ಬಸವರಾಜ ಸಜ್ಜನ್, ಭೀಮಶೇನ ಪಾಟೀಲ್, ಸೈದಾಪುರ ಪೊಲೀಸ್ ಠಾಣೆಯ ಇನ್ ಸ್ಪೆಕ್ಟರ್ ಶಿವಾನಂದ ಮರಡಿ, ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷ ಶುಭಾಶ್ಚಂದ್ರ ಕಟಕಟಿ, ಗುರುಮಠಕಲ್ ಬ್ಲಾಕ್ ಅಧ್ಯಕ್ಷ ಪ್ರಕಾಶ ನೀರೇಟಿ, ಭೀಮರಾಯ ಬದ್ದೇಪಲ್ಲಿ, ನರಸಪ್ಪ ಕವಡೆ ತಾಪಂ ಮಾಜಿ ಸದಸ್ಯ, ಶರಣು ಆವಂಟಿ, ಅನಂತಪ್ಪ ಮುಕುಡಿ, ಮಲ್ಲಿಕಾರ್ಜುನ ಅರುಣಿ, ಶಿವಲಿಂಗರೆಡ್ಡಿ ಮಾಲಿ ಪಾಟೀಲ್, ಗುರುನಾಥರೆಡ್ಡಿ, ರವಿ ಪಾಟೀಲ್, ಆನಂದರೆಡ್ಡಿ ವಡವಟ್, ಡಿ.ತಾಯಪ್ಪ, ಗ್ರಾಪಂ ಮಾಜಿ ಅಧ್ಯಕ್ಷ ಲಚಮಪ್ಪ, ಗುರುನಾಥರೆಡ್ಡಿ, ಮಲ್ಲು ಪಾಟೀಲ್, ರಾಜೇಶ ಉಡುಪಿ, ಮಖಬುಲ್ ಸಾಹುಕಾರ, ಶೇಮಿ ಸಾಹುಕಾರ ಕಡೇಚೂರು, ಸಂಜೀವರೆಡ್ಡಿ, ರಾಘವಾಂಕ ಪಾಟೀಲ್, ಹಾಜಿಸಾಬ್, ಜಗದೀಶ ಕಲಾಲ್, ಬನ್ನಪ್ಪಗೌಡ, ಚನ್ನಕೇಶ್ವರ ಸ್ವಾಮಿ, ಗುರುನಾಥ ಯಾದವ, ಬಾಲಗೌಡ ಕಲಾಲ್, ಸಂತೋಷ ಯಾದವ,ನಾರಾಯಣ ಯಾದವ, ನರಸಿಂಹ, ಬಾಲು ದಾಸರಿ, ಮೀರಾನ್, ಮಹದೇವಪ್ಪ ಕಾವಲಿ, ಅಂಜಪ್ಪ ಕೇಳಮ್ಮೊಳ, ಗುತ್ತಿಗೆದಾರ ಸಾಬು ಹೊರುಂಚಾ, ಅಲ್ಲಾವುದ್ದಿನ್ ನೀಲಹಳ್ಳಿ ಸೇರಿದಂತೆ ಮುಂತಾದವರಿದ್ದರು.

## ಕಾಮಗಾರಿ ಗುಣಮಟ್ಟ ಕಾಯ್ದುಕೊಳ್ಳಿ...!

ಬದ್ದೇಪಲ್ಲಿ ಗ್ರಾಮದಲ್ಲಿ 2025–26ನೇ ಸಾಲಿನ ಪರಿಶಿಷ್ಟ ಜಾತಿ ಮತ್ತು ಪಂಗಡ ಯೋಜನೆ ಅಡಿಯಲ್ಲಿ ಸುಮಾರು 50ಲಕ್ಷ ರೂ. ವೆಚ್ಚದಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಯನ್ನು ಗುಣಮಟ್ಟದ ಜತೆಗೆ ತ್ವರಿತವಾಗಿ ಪೂರ್ಣಗೊಳಿಸುವ ಜವಾಬ್ದಾರಿ ಅಧಿಕಾರಿಗಳ ಮೇಲಿದೆ. ಕಾಮಗಾರಿ ನಿರ್ಮಾಣ ಕಾರ್ಯಕ್ಕೆ ಸ್ಥಳೀಯರು ಸಹಕಾರ ನೀಡುವಂತೆ ಶಾಸಕ ಶರಣಗೌಡ ಕಂದಕೂರ ಅವರು ತಿಳಿಸಿದರು. ಇದೇ ವೇಳೆ ಬದ್ದೇಪಲ್ಲಿ ಗ್ರಾಮದಲ್ಲಿ ಸರಕಾರಿ ಪ್ರೌಢ ಶಾಲಾ ತಡೆಗೋಡೆ ನಿರ್ಮಾಣ, ಕೆಟ್ಟುನಿಂತ ಶುದ್ಧ ಕುಡಿಯುವ ನೀರಿನ ಘಟಕ ರಿಪೇರಿ, ವಿದ್ಯುತ್ ಸಮಸ್ಯೆ, ಕೆರೆ ದುರಸ್ತಿ ಇತ್ಯಾದಿ ಸಮಸ್ಯೆಗಳನ್ನು ಇತ್ಯರ್ಥ ಮಾಡಬೇಕು ಎಂಬ ಗ್ರಾಮಸ್ಥರ ಬೇಡಿಕೆಗೆ ಸ್ಪಂದಿಸಿದ ಶಾಸಕರು ಕ್ಷೇತ್ರದ ಪ್ರತಿ ಗ್ರಾಮದ ಸಮಸ್ಯೆಗಳನ್ನು ಹಂತ ಹಂತವಾಗಿ ಬಗೆಹರಿಸುವುದಾಗಿ ತಿಳಿಸಿದರು.

## ಅಧಿಕಾರಿಗಳಿಗೆ ತಾಕೀತು...!

ಅಧಿಕಾರಿಗಳು ತಮ್ಮ ತಮ್ಮ ಹಂತದಲ್ಲಿಯೇ ಸಮಸ್ಯೆ ಬಗೆಹರಿಸಬೇಕು, ಗ್ರಾಮದ ಮೂಲಭೂತ ಸಮಸ್ಯೆಗಳ ಬಗ್ಗೆಯೂ ಕ್ಷೇತ್ರದ ಜನ ಶಾಸಕರನ್ನು ಸಂಪರ್ಕ ಮಾಡುತ್ತಿದ್ದಾರೆ. ಪಿಡಿಓ, ಜೆಸ್ಕಾಂ, ಕಂದಾಯ ಇತರೆ ಎಲ್ಲ ಅಧಿಕಾರಿಗಳು ಫೋನ್ ರಿಸೀವ್ ಮಾಡ್ತಿಲ್ಲ, ಮೊಬೈಲ್ ಸ್ವಿಚ್ ಆಫ್ ಇರ್ತಿದೆ, ಸಮಸ್ಯೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸುತ್ತಿಲ್ಲ ಎಂಬ ಆರೋಪಗಳು ಜನರಿಂದ ಕೇಳಿ ಬರುತ್ತಿವೆ. ಅನುದಾನ ನಾವು ಕೊಡ್ತೀವಿ, ಅಧಿಕಾರಿಗಳು ಕೆಲಸ ಮಾಡದಿದ್ದರೆ ಜನ ಶಾಸಕರ ಬಗ್ಗೆ ತಪ್ಪು ತಿಳ್ಕೋತಾರೆ ಅದರ ಬಗ್ಗೆ ಗಮನಹರಿಸಬೇಕು ಎಂದು ಶಾಸಕ ಶರಣಗೌಡ ಕಂದಕೂರ ಅವರು ಅಧಿಕಾರಿಗಳಿಗೆ ಸೂಚಿಸಿದರು. ಇದೇ ವೇಳೆ ಬದ್ದೇಪಲ್ಲಿ ಲ್, ದುಪ್ಪಲ್ಲಿ ಅಜಲಾಪುರ ಮುಂತಾದ ಗ್ರಾಮಗಳ ಜನರ ಅಹವಾಲುಗಳನ್ನು ಶಾಸಕರು ಸ್ವೀಕರಿಸಿದರು.

“ ಮನುಷ್ಯ ಜೀವಕ್ಕೆ ಆಪತ್ತು ತರುವ ಕೈಗಾರಿಕಾ ಘಟಕಗಳನ್ನು ಬಂದ್ ಮಾಡುವುದಲ್ಲದೆ ಹೊಸದಾಗಿ ಯಾವುದೇ ಕಾರಖಾನೆಗಳ ಸ್ಥಾಪನೆಗೆ ಅವಕಾಶ ಕೊಡಬಾರದು ಎಂಬುದು ಕ್ಷೇತ್ರದ ಜನರ ಒತ್ತಾಸೆಯಾಗಿದೆ. ಕ್ಷೇತ್ರದ ಶಾಸಕನಾಗಿ ನಾನು ಸದನ ಒಳಗೆ ಮತ್ತು ಹೊರಗೆ ಕೈಗಾರಿಕೆಗಳ ಬಂದ್ ಗೆ ಅಗ್ರಹಿಸುತ್ತಿದ್ದೇನೆ. ಆದಾಗ್ಯೂ ಸರಕಾರ ಹೊಸದಾಗಿ ಫಾರ್ಮಾ ಕಂಪನಿಯೊಂದಕ್ಕೆ ಪರವಾನಗಿ ನೀಡಿದ್ದು ಖಂಡನೀಯ.

**– ಶರಣಗೌಡ ಕಂದಕೂರ ಶಾಸಕರು, ಗುರುಮಠಕಲ್**

# ರಾಜ್ಯ ಭೋವಿ ಅಭಿವೃದ್ಧಿ ನಿಗಮ ಅಧ್ಯಕ್ಷರಿಂದ ಸಭೆ- ಅಹವಾಲು ಸ್ವೀಕಾರ: ಅಗತ್ಯ ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ಸೂಚನೆ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ರಾಮಪ್ಪ, ಎಂ (ರಾಜ್ಯ ಸಚಿವರ ಸ್ಥಾನಮಾನ) ಅವರು ದಿನಾಂಕ:25–06–2026 ರಂದು ಬೆಳಿಗ್ಗೆ 11 ಗಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ(ಜಿಲ್ಲಾಡಳಿತ ಭವನ) ನಿಗಮದ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ, ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ಹಾಗೂ ಭೋವಿ ಸಮುದಾಯಗಳ ಮುಖಂಡರು ಹಾಗೂ ಜನ ಪ್ರತಿನಿಧಿಗಳಿಂದ ಅಹವಾಲು ಸ್ವೀಕರಿಸಲಿದ್ದಾರೆ.ಈ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಅಗತ್ಯ ದಾಖಲಾತಿಗಳೊಂದಿಗೆ ಹಾಜರಾಗುವಂತೆ ಜಿಲ್ಲಾಧಿಕಾರಿ ರಾಹುಲ್ ತುಕಾರಾಮ ಪಾಂಡ್ವೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಳವಂಡಿ ಠಾಣೆ ಪಿಎಸ್‌ಐ ಆಗಿ ಗೀತಾಂಜಲಿ ಶಿಂಧೆ ಅಧಿಕಾರ ಸ್ವೀಕಾರ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಈ ಹಿಂದೆ ಕೊಪ್ಪಳ ಜಿಲ್ಲೆಯಲ್ಲಿ ಪಿಎಸ್‌ಐ ಆಗಿ ಸೇವೆ ಸಲ್ಲಿಸಿದ್ದ ಗೀತಾಂಜಲಿ ಶಿಂಧೆ ಅಳವಂಡಿ ಪೊಲೀಸ್ ಠಾಣೆಗೆ ವರ್ಗಾವಣೆಗೊಂಡಿದ್ದಾರೆ. ಆ ಸ್ಥಾನದಲ್ಲಿದ್ದ ಭ್ರಷ್ಟ ಪಿಎಸ್‌ಐ ಪ್ರಹ್ಲಾದ ನಾಯಕ್ ಅವರನ್ನು ವಿಜಯನಗರ ಜಿಲ್ಲೆಯ ಇಟ್ಟಗಿ ಠಾಣೆಗೆ ವರ್ಗಾಯಿಸಲಾಗಿದೆ.ಗೀತಾಂಜಲಿ ಶಿಂಧೆ ಬಿರುಸು ವ್ಯಕ್ತಿತ್ವದ ಅಧಿಕಾರಿ ಎಂಬ ಖ್ಯಾತಿ ಮತ್ತು ಕುಖ್ಯಾತಿ ಹೊಂದಿದವರು. ಹಿಂದೆ ರಾಯಚೂರು ಜಿಲ್ಲೆಯ ಸಿರವಾರ ಠಾಣೆಯ ವ್ಯಾಪ್ತಿಯಲ್ಲಿ ಯುವಕನೊಬ್ಬನಿಗೆ ಕಿರುಕುಳ ನೀಡಿದ್ದಾರೆಂಬ ಆರೋಪದ ಮೇಲೆ ಅವರ ವಿರುದ್ಧ ಎಫ್‌ಐಆರ್ ದಾಖಲಾಗಿತ್ತು. ಡೆತ್‌ನೋಟ್ ಬರೆದಿಟ್ಟು ಯುವಕ ನಾಪತ್ತೆಯಾಗಿದ್ದ ಪ್ರಕರಣ ಮತ್ತು ಕರ್ತವ್ಯಲೋಪದ ಹಿನ್ನೆಲೆಯಲ್ಲಿ ಅವರನ್ನು 2022ರ ಡಿಸೆಂಬರ್‌ನಲ್ಲಿ ಅಮಾನತು ಮಾಡಲಾಗಿತ್ತು.ಮರಳು ಅಕ್ರಮಿಗಳ ಜೊತೆ ಕೈ ಜೋಡಿಸುವ ಮೂಲಕ ಕುಖ್ಯಾತವಾಗಿರುವ ಅಳವಂಡಿ ಠಾಣೆಯನ್ನು ಈ ಅಧಿಕಾರಿ ಹೇಗೆ ನಿಭಾಯಿಸುತ್ತಾರೆ ಎಂಬ ಕುತೂಹಲ ಜನರಲ್ಲಿದೆ.

# 5 ವರ್ಷದೊಳಗಿನ ಎಲ್ಲ ಮಕ್ಕಳಿಗೂ ಲಸಿಕೆ ನೀಡಿ:ಎಡಿಸಿ ಸಿದ್ರಾಮೇಶ್ವರ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜೂನ್ 28 ರಿಂದ ಜುಲೈ 1ರ ವರೆಗೆ ನಡೆಯುವ ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮದಡಿ 5 ವರ್ಷದೊಳಗಿನ ಎಲ್ಲ ಮಕ್ಕಳಿಗೂ ಲಸಿಕೆ ನೀಡುವ ಮೂಲಕ ಜಿಲ್ಲೆಯಲ್ಲಿ ಶೇ. 100 ರಷ್ಟು ಪ್ರಗತಿ ಸಾಧಿಸಬೇಕೆಂದು ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಹೇಳಿದರು.


ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಕುರಿತು ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಗುರುವಾರ (ಜೂ. 18ರಂದು) ಹಮ್ಮಿಕೊಂಡಿದ್ದ 2ನೇ ಸುತ್ತಿನ ಜಿಲ್ಲಾ ಮಟ್ಟದ ಜಾಗೃತ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಮ್ಮ ದೇಶದಲ್ಲಿ ಪೋಲಿಯೋ ಪ್ರಕರಣಗಳು ಕಂಡುಬಂದಿಲ್ಲವಾದರೂ,ನಾವು ಮೈಮರೆಯುವಂತಿಲ್ಲ. ಪೋಲಿಯೋ ನಿರ್ಮೂಲನೆ ಸರ್ಕಾರದ ಪ್ರಮುಖ ಗುರಿಯಾಗಿದ್ದು,ಮನೆ ಮನೆಗೆ ತೆರಳಿ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಲಸಿಕೆ ನೀಡಬೇಕು. ಪಲ್ಸ್ ಪೋಲಿಯೋ ಲಸಿಕೆಯಿಂದ ಯಾವುದೇ ಅರ್ಹ ಮಗು ವಂಚಿತವಾಗಬಾರದು. ಈ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಜೂನ್ 28 ರಿಂದ ಜುಲೈ 1 ರವರೆಗೆ ನಡೆಯಲಿರುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನವನ್ನು ಯಶಸ್ವಿಗೊಳಿಸಬೇಕು. ಇದಕ್ಕಾಗಿ ವಿವಿಧ ಇಲಾಖೆಗಳ ಸಹಕಾರ ತೆಗೆದುಕೊಂಡು ಲಸಿಕಾ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದರು.

ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮದ ಬಗ್ಗೆ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ಜನರಿಗೆ ಪೋಲಿಯೊ ಲಸಿಕೆಯ ಕುರಿತು ಹೆಚ್ಚಿನ ಜಾಗೃತಿ ಮೂಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯ ಸಾಧಿಸಿ ತಮಗೆ ವಹಿಸಲಾದ ಕರ್ತವ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಎನ್.ಜಿ.ಓ ಮತ್ತು ಸ್ವಯಂ ಸೇವಾ ಸಂಸ್ಥೆಗಳ ಸಹಕಾರ ತೆಗೆದುಕೊಂಡು ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು 100ಕ್ಕೆ 100ರಷ್ಟು ಪ್ರಗತಿ ಸಾಧಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ಡಾ.ಲಿಂಗರಾಜು ಟಿ., ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳಾದ ಡಾ. ಪ್ರಕಾಶ ವಿ., ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ರವೀಂದ್ರನಾಥ ಎಂ.ಎಚ್., ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿಗಳಾದ ಡಾ.ಪ್ರಕಾಶ ಎಚ್., ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಾದ ಡಾ.ನಂದಕುಮಾರ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳಾದ ಡಾ. ಶಶೀಧರ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿಗಳಾದ ಡಾ. ಗೋನಾಳ ಕುಮಾರಸ್ವಾಮಿ, ಕೊಪ್ಪಳ ರೋಟರಿ ಕ್ಲಬ್ ಅಧ್ಯಕ್ಷರಾದ ಡಾ. ಕೆ.ಜಿ ಕುಲಕರ್ಣಿ, ಇನ್ನರ್ ವೀಲ್ ಕ್ಲಬ್ ಡಾ. ರಾಧಾ ಕುಲಕರ್ಣಿ ಸೇರಿದಂತೆ ಇತರೆ ವೈದ್ಯಾಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು, ಎನ್.ಜಿ.ಓ.ಗಳ ಪ್ರನಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಪತ್ರಕರ್ತ ಮಲ್ಲಿಕಾರ್ಜುನ್ ಪಗಡೆ ವಿರುದ್ಧದ ಪ್ರಕರಣದ ನ್ಯಾಯಸಮ್ಮತ ತನಿಖೆಗೆ ಆಗ್ರಹ: ರಮೇಶ ಚವ್ಹಾಣ್



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಪತ್ರಕರ್ತರ ಮೇಲೆ ಆಧಾರರಹಿತ ಆರೋಪಗಳನ್ನು ಮಾಡುವುದು ಹಾಗೂಅವರ ವೃತ್ತಿಪರ ಕರ್ತವ್ಯ ನಿರ್ವಹಣೆಗೆ ಅಡ್ಡಿಪಡಿಸುವುದು ಖಂಡನೀಯ ಎಂದು ಸಾಮಾಜಿಕ ಕಾರ್ಯಕರ್ತ ರಮೇಶ್ ಜೆ. ಚವ್ಹಾಣ್ ಹೇಳಿದರು. ಈ ಕುರಿತು ಪತ್ರಿಕೆಗೆ ಹೇಳಿಕೆ ನೀಡಿರುವ ಅವರು ಕಲಬುರಗಿಯ ಬೇಲೂರು ರಸ್ತೆ ಕಾಮಗಾರಿ ಕುರಿತು ಸುದ್ದಿ ಪ್ರಸಾರಮಾಡಿದ ಕಲ್ಯಾಣ ಕರ್ನಾಟಕ ನ್ಯೂಸ್ ಚಾನೆಲ್‌ನ ಸಂಪಾದಕರಾದ ಮಲ್ಲಿಕಾರ್ಜುನ್ ಪಗಡೆಅವರ ವಿರುದ್ಧ ಎಫ್‌ಐಆರ್ ದಾಖಲಾಗಿರುವ ವಿಷಯವು ಸಾರ್ವಜನಿಕವಲಯದಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾಗಿದೆ. ಕಲ್ಯಾಣ ಕರ್ನಾಟಕ ಭಾಗದ ಸಾರ್ವಜನಿಕ ಸಮಸ್ಯೆಗಳು, ಜನಹಿತದ ವಿಚಾರಗಳು ಹಾಗೂ ಆಡಳಿತಾತ್ಮಕ ಅಕ್ರಮಗಳ ಕುರಿತು ನಿರಂತರವಾಗಿ ಧ್ವನಿ ಎತ್ತುತ್ತಿರುವ ಪತ್ರಕರ್ತ ಮಲ್ಲಿಕಾರ್ಜುನ್ ಪಗಡೆ ಅವರ ವಿರುದ್ಧ ದಾಖಲಾಗಿರುವ ಪ್ರಕರಣದ ಬಗ್ಗೆ ಸಮಗ್ರ, ನಿಷ್ಪಕ್ಷಪಾತ ಹಾಗೂ ಪಾರದರ್ಶಕ ತನಿಖೆ ನಡೆಸಬೇಕು. ಪತ್ರಕರ್ತರು ಪ್ರಜಾಪ್ರಭುತ್ವದ ನಾಲ್ಕನೇ ಅಂಗವಾಗಿದ್ದು, ಅವರ ಅಭಿವ್ಯಕ್ತಿ ಸ್ವಾತಂತ್ರ್ಯ ಮತ್ತು ಪತ್ರಿಕಾ ಸ್ವಾತಂತ್ರ್ಯವನ್ನು ಸಂರಕ್ಷಿಸುವುದು ಅತ್ಯಂತ ಅಗತ್ಯವಾಗಿದೆ. ಯಾವುದೇ ಪ್ರಕರಣದಲ್ಲಿ ಕಾನೂನು ಪ್ರಕ್ರಿಯೆಯು ನ್ಯಾಯಸಮ್ಮತವಾಗಿ ನಡೆಯಬೇಕು ಹಾಗೂ ಸತ್ಯಾಂಶಗಳ ಆಧಾರದ ಮೇಲೆ ಮಾತ್ರ ಕ್ರಮ ಕೈಗೊಳ್ಳಬೇಕು. ಈ ಪ್ರಕರಣದ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಬೇಕು, ಪತ್ರಕರ್ತರ ಹಕ್ಕುಗಳು ಮತ್ತು ಸುರಕ್ಷತೆಯನ್ನು ಕಾಪಾಡಬೇಕು, ಸತ್ಯಾಂಶಗಳ ಆಧಾರದ ಮೇಲೆ ನ್ಯಾಯ ಒದಗಿಸಬೇಕು, ಪ್ರಜಾಪ್ರಭುತ್ವದ ಮೌಲ್ಯಗಳನ್ನು ಉಳಿಸಬೇಕು, ಸತ್ಯ, ನ್ಯಾಯ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳ ಪರವಾಗಿ ನಾವು ಸದಾ ನಿಲ್ಲುತ್ತೇವೆ ಎಂದರು.

# ಡಾ. ಭರಣಿ ವೇದಿಕೆಯಿಂದ ಮಂಜುನಾಥ ಗೋವಿಂದವಾಡ ಹೆಸರಿನಲ್ಲಿ ಉದಯೋನ್ಮುಖ ಚಿತ್ರಕಲಾವಿದ ಪ್ರಶಸ್ತಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆಯ ಹೆಸರಾಂತ ಚಿತ್ರಕಲಾವಿದ ಮಂಜುನಾಥ ಗೋವಿಂದವಾಡ ಅವರ ಹೆಸರಿನಲ್ಲಿ ಪ್ರಸಕ್ತ ಸಾಲಿನಿಂದ ಉದಯೋನ್ಮುಖ ಚಿತ್ರಕಲಾವಿದರಿಗೆ ಪ್ರಶಸ್ತಿ ನೀಡಿ ಉತ್ತೇಜಿಸಲಾಗುವುದು ಎಂದು ಡಾ.ಸುಭಾಷ್ ಭರಣಿ ಸಾಂಸ್ಕೃತಿಕ ವೇದಿಕೆ ಅಧ್ಯಕ್ಷ, ಹಿರಿಯ ಪತ್ರಕರ್ತ ಸಿ.ಮಂಜುನಾಥ್ ಅವರು ಪ್ರಕಟಿಸಿದರು.

ನಗರದ ಸ್ನೇಹ ಸಂಪುಟ ಸಭಾಂಗಣದಲ್ಲಿ ಭಾನುವಾರ

ನಗರದ ಡಾ. ಸುಭಾಷ್ ಭರಣಿ ಸಾಂಸ್ಕೃತಿಕ ವೇದಿಕೆ, ಹಳೇ ದರೋಜಿ ನಾಡೋಜ ಬುರಕಥಾ ಈರಮ್ಮ ಫೌಂಡೇಷನ್, ಕರ್ನಾಟಕ ಜಾನಪದ ಪರಿಷತ್ತು, ಜಿಲ್ಲಾ ಘಟಕ ಬಳ್ಳಾರಿ ಹಾಗೂ ಶ್ರೀ ಮಹಾದೇವತಾತ ಕಲಾ ಸಂಘ ಹಂದ್ಯಾಳ್ ಇವರ ಸಂಯುಕ್ತಾಶ್ರಯದಲ್ಲಿ

ಆಯೋಜಿಸಲಾಗಿದ್ದ ಕರ್ನಾಟಕ ಲಲಿತಕಲಾ ಅಕಾಡೆಮಿಯ ವರ್ಣಶ್ರೀ ಪ್ರಶಸ್ತಿ ಪುರಸ್ಕೃತ ಲಿಂಗೈಕ್ಯ ಮಂಜುನಾಥ ಗೋವಿಂದವಾಡ

ಅವರಿಗೆ ಸಲ್ಲಿಸಲಾದ ನುಡಿನಮನ ಕಾರ್ಯಕ್ರಮದಲ್ಲಿ

ಅವರು ಮಾತನಾಡಿದರು.

ಮಂಜುನಾಥ ಗೋವಿಂದವಾಡ ಅವರು ಎರಡೂವರೆ ದಶಕಗಳ ಕಾಲ ಚಿತ್ರಕಲಾ ಕ್ಷೇತ್ರ ಹಾಗೂ ಸಾಂಸ್ಕೃತಿಕ ಸಂಘಟನೆಗೆ ಅತ್ಯುತ್ತಮ ಸೇವೆ ಸಲ್ಲಿಸಿದ್ದಾರೆ. ಇವರ ಸಾರ್ಥಕ ಜೀವನ, ಸಾಧನೆ ಯುವಕರಿಗೆ ಸ್ಫೂರ್ತಿಯಾಗಿಸಲು ಹಾಗೂ ಇವರ ಹೆಸರು ಸಮಾಜದಲ್ಲಿ ಚಿರಸ್ಥಾಯಿಯಾಗಿ ಉಳಿಯಲು ಭರಣಿ ವೇದಿಕೆ ಪ್ರತಿ ವರ್ಷವೂ ಇವರ ಹೆಸರಿನಲ್ಲಿ ಪ್ರಶಸ್ತಿ ನೀಡಲಾಗುವುದು ಎಂದು ತಿಳಿಸಿದರು.

ಮುಖ್ಯ ಅತಿಥಿ ಕಸಾಪ ಜಿಲ್ಲಾಧ್ಯಕ್ಷ ನಿಷ್ಠಿ ರುದ್ರಪ್ಪ ಅವರು ಮಾತನಾಡಿ ಸರಳ ಸಜ್ಜನಿಕೆ ವ್ಯಕ್ತಿತ್ವದ ಗೋವಿಂದವಾಡ ಅವರು ತಮ್ಮ ಪ್ರತಿಭೆಯಿಂದ ಪ್ರತಿಯೊಬ್ಬರನ್ನು ಸೆಳೆಯುತ್ತಿದ್ದರು. ಇವರ ಅಕಾಲಿಕ ನಿಧನ ಚಿತ್ರಕಲಾ ಕ್ಷೇತ್ರವನ್ನು ಬಡವಾಗಿಸಿದೆ ಮಾತ್ರವಲ್ಲ ಇವರ ಕುಟುಂಬವನ್ನು ಸಂಕಷ್ಟಕ್ಕೆ ತಳ್ಳಿದೆ ಎಂದು ದುಃಖ ವ್ಯಕ್ತಪಡಿಸಿದರು.



ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವಿಶ್ರಾಂತ ಉಪ ನಿರ್ದೇಶಕ ಟಿ.ಕೊಟ್ರಪ್ಪ ಅವರು ಮಾತನಾಡಿ

ಮಂಜುನಾಥ ಗೋವಿಂದವಾಡ ಅವರುಚಿತ್ರಕಲೆಯಲ್ಲಿ ಪರಿಣತಿಯನ್ನು ಪಡೆದಿದ್ದರು. ಆಕರ್ಷಕ ವೇದಿಕೆ ನಿರ್ಮಿಸುವುದರಲ್ಲಿ ನಿಪುಣರಾಗಿದ್ದರು ಎಂದು ಶ್ಲಾಘಿಸಿದರು.

ಆರ್ಥಿಕವಾಗಿ ಸಂಕಷ್ಟದಲ್ಲಿರುವ ಇವರ ಕುಟುಂಬಕ್ಕೆ ಸಹಾಯ ಮಾಡುವ ಭರದಲ್ಲಿ ಘನತೆಗೆ ಧಕ್ಕೆಬಾರದಂತೆ ಎಚ್ಚರ ವಹಿಸುವ ಅಗತ್ಯವಿದೆ ಎಂದು ಸಂಘ ಸಂಸ್ಥೆಗಳಿಗೆ ಕಿವಿ ಮಾತು ಹೇಳಿದರು.

ಪತ್ರಕರ್ತ ಕೆ ಎಂ ಮಂಜುನಾಥ ಮಾತನಾಡಿ ಪ್ರತಿಭಾವಂತ ಗೋವಿಂದವಾಡ ಅವರು ಸ್ವಾಭಿಮಾನಿಯಾಗಿದ್ದರು. ತೀರ ಸಂಕಷ್ಟದಲ್ಲಿದ್ದರೂ ಯಾರಲ್ಲೂ ತಮ್ಮ ಕಷ್ಟಗಳನ್ನು ಹೇಳಿಕೊಂಡವರಲ್ಲ. ಹಲವು ತಿಂಗಳುಗಳ ಹಿಂದೆ ಮಕ್ಕಳ ಶಾಲಾ ಕಾಲೇಜು ಫೀ ಕಟ್ಟಲು ವಿಮಾ ಪಾಲಿಸಿಯನ್ನು ಸರೆಂಡರ್ ಮಾಡಿ ಹಣಪಡೆದಿರುವುದು ಅವರ ನಿಧನದ ಬಳಿಕ ತಿಳಿಯಿತು. ಪಾಲಿಸಿಯನ್ನು ಸರೆಂಡರ್ ಮಾಡದಿದ್ದರೆ ಇದೀಗ ಕುಟುಂಬಕ್ಕೆ ಆರ್ಥಿಕ ಸಹಾಯವಾಗುತ್ತಿತ್ತು ಎಂದು ತಿಳಿಸಿದರು.

ಇವರ ಕುಟುಂಬಕ್ಕೆ ಯಾವ ರೀತಿ ಆರ್ಥಿಕ ಸಹಾಯ ಮಾಡಲು ಸಹೃದಯ ಸಂಘ ಸಂಸ್ಥೆಗಳು, ಗಣ್ಯರು ಯೋಜನೆ ಹಾಕಿಕೊಳ್ಳುವ ಅಗತ್ಯವಿದೆ. ಪ್ರತಿಯೊಬ್ಬರೂ ಸ್ಪಂದಿಸಬೇಕು ಎಂದು ಮನವಿ ಮಾಡಿದರು.

ಹಿರಿಯ ಪತ್ರಕರ್ತ ಎಂ. ಅಹಿರಾಜ್ ಅವರು ಮಾತನಾಡಿ, ಮಂಜುನಾಥ ಅವರ ಕಲಾಕೃತಿಗಳ ಪ್ರದರ್ಶನ ಮತ್ತು ಮಾರಾಟಕ್ಕೆ ಯೋಜನೆಯೊಂದನ್ನು ಹಿತೈಷಿಗಳು ಹಾಕಿಕೊಳ್ಳಬೇಕು. ಕಲಾಕೃತಿಗಳು ಮಾರಾಟವಾದರೆ ಇವರ ಕುಟುಂಬಕ್ಕೆ ನೆರವಾಗುತ್ತದೆ.

ಸಹಾಯ ದೊಡ್ಡ ಮನಸುಗಳು ನಗರದಲ್ಲಿವೆ. ಎಲ್ಲರೂ ಈ ನಿಟ್ಟಿನಲ್ಲಿ ಪ್ರಯತ್ನ ನಡೆಸ ಬೇಕು ಎಂದು ಸಲಹೆ ನೀಡಿದರು.

ತುಂಗಭದ್ರಾ ರೈತ ಸಂಘದ ದರೂರು ಪುರುಷೋತ್ತಮ ಗೌಡ ಮಾತನಾಡಿ, ಅದ್ಭುತ ಪ್ರತಿಭೆಯಾಗಿದ್ದ ಗೋವಿಂದವಾಡ ಅವರು ಮಾಜಿ ಉಪ ಮುಖ್ಯಮಂತ್ರಿ ಎಂ. ಪಿ. ಪ್ರಕಾಶ್ ಅವರ ಕಣ್ಣಿಗೆ ಬೀಳಬೇಕಿತ್ತು. ಹಲವು ಕೊರತೆಗಳ ನಡುವೆಯೂ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಮಂಜುನಾಥ ಅವರ ಕುಟುಂಬದ ಆರ್ಥಿಕ ನೆರವಿಗೆ ಸಮಾನಮನಸ್ಕರಂತೆ ತಾವು ಬದ್ಧರಾಗಿರುವುದಾಗಿ ಹೇಳಿದರು. ವೀವಿ ಸಂಘದ ಸ್ವತಂತ್ರ ಪಿಯು ಕಾಲೇಜಿನ ಪ್ರಾಚಾರ್ಯ, ರಂಗ ಕಲಾವಿದ ಎಎಂಪಿ ವೀರೇಶಸ್ವಾಮಿ,

ಮುಖ್ಯ ಗುರು ಸಿದ್ದೇಶ್ವರ ಸ್ವಾಮಿ ಎಸ್. ಎಂ., ಅಧ್ಯಾಪಕ ರುದ್ರಮುನಿ, ಮಂಜುನಾಥ ಸಹೋದರ ನಾಗಭೂಷಣ ಗೋವಿಂದವಾಡ ಮತ್ತಿತರರು ಮಾತನಾಡಿದರು.

ಶ್ರೀ ಕಲ್ಯಾಣ ಸ್ವಾಮಿಗಳು ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದರು.

ಕವನ ವಾಚನ: ವಿಶ್ರಾಂತ ಡಿಡಿಪಿಐ, ಸಾಹಿತಿ ಎಚ್ ಎಂ ಮಲ್ಲಿಕಾರ್ಜುನ ಸ್ವಾಮಿ ಅವರು ಗೋವಿಂದವಾಡ ಅವರ ಕುರಿತು ರಚಿಸಿದ ಕವಿತೆಯನ್ನು ಸಿ. ಮಂಜುನಾಥ ಮತ್ತು ಸತ್ಯಂ ಬಿಇಡಿ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಆಲಂ ಭಾಷಾ ಅವರು ಸ್ವ ರಚನೆಯ ಕವನ ವಾಚಿಸಿ ಗಮನ ಸೆಳೆದರು.

ಕಾರ್ಯಕ್ರಮದಲ್ಲಿ ವರ್ಣಶ್ರೀ ಪ್ರಶಸ್ತಿಗೆ ಭಾಜನರಾದ ಚಿತ್ರಕಲಾವಿದ ಮಹಮ್ಮದ್ ರಫಿ, ಸಾಹಿತಿ ಎಚ್ ಎಂ ಮಲ್ಲಿಕಾರ್ಜುನ ಸ್ವಾಮಿ (ಮಹಿಮ), ರಂಗಕಲಾವಿದ ಅಮರೇಶಯ್ಯ, ಪತ್ರಕರ್ತರಾದ ಸಿದ್ಧರಾಮಪ್ಪ ಸಿರಿಗೇರಿ, ಈ ಗೋವರ್ಧನ ರೆಡ್ಡಿ, ಖಲಂದರ್ ಮತ್ತಿತರರು ಉಪಸ್ಥಿತರಿದ್ದರು.

ನಾಡೋಜ ಬುರ್ರಕಥಾ ಈರಮ್ಮ ಫೌಂಡೇಷನ್ ಅಧ್ಯಕ್ಷ ಡಾ. ಅಶ್ವರಾಮು ಅವರು ಸ್ವಾಗತಿಸಿ ನಿರೂಪಿಸಿದರು. ಭರತನಾಟ್ಯ ಕಲಾವಿದೆ ಅವನೀ ಗಂಗಾವತಿ ಪ್ರಾರ್ಥಿಸಿದರು. ಹಂದ್ಯಾಳ್ ಶ್ರೀ ಮಹಾದೇವತಾತ ಕಲಾ ಸಂಘದ ಅಧ್ಯಕ್ಷ, ಹಿರಿಯ ರಂಗ ಕಲಾವಿದ ಪುರುಷೋತ್ತಮ ಹಂದ್ಯಾಳ್ ವಂದಿಸಿದರು.

# ಅಲ್ಲಿಪುರ್ ತಾಂಡಾ ಅಧ್ಯಕ್ಷರಾಗಿ ಸುಧಾಕರ ರಾಠೋಡ ನೇಮಕ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ



ಕನ್ನಡ ಸೇನೆ ಕರ್ನಾಟಕ ಸಂಘಟನೆಗೆ ತಾಲೂಕಿನ ಅಲ್ಲಿಪುರ್ ತಾಂಡಾ ಅಧ್ಯಕ್ಷರಾಗಿ ಸುಧಾಕರ ರಾಠೋಡ ಇವರನ್ನು ಕನ್ನಡ ಸೇನೆ ಕರ್ನಾಟಕ ಸಂಘಟನೆ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ಮಂಗಳವಾರ ನೇಮಕ ಮಾಡಿ ಆದೇಶಿಸಿದ್ದಾರೆ. ನಾಡು, ನುಡಿ, ನೆಲ, ಜಲ, ಭಾಷೆ, ನಿಷ್ಠೆಯ ಹೋರಾಟಕ್ಕಾಗಿ ಶ್ರಮಿಸಬೇಕು ನೇಮಕಾತಿ ಆದೇಶ ಪತ್ರದಲ್ಲಿ ತಿಳಿಸಿರುತ್ತಾರೆ.

# ಪತ್ರಿಕಾ ಭವನ ನಿರ್ವಹಣೆ ಸಂಘಕ್ಕೆ ಹಸ್ತಾಂತರಿಸಿ: ಡಿಸಿಗೆ ಮನವಿ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಪಟ್ಟಣದ ತಹಶೀಲ ಕಚೇರಿಯಲ್ಲಿ ಜಿಲ್ಲಾಧಿಕಾರಿಗಳಿಗೆ ಬರೆದ ಮನವಿ ಪತ್ರವನ್ನು ಕಮಲನಗರ ತಹಶೀಲ್ದಾರ್ ಅಮಿತಕುಮಾರ ಕುಲಕರ್ಣಿ ಅವರ ಮುಖಾಂತರ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಕಮಲನಗರ ಘಟಕ ವತಿಯಿಂದ ಮನವಿ ಪತ್ರ ಸಲ್ಲಿಸಲಾಯಿತು.ನಮ್ಮ ಜಿಲ್ಲೆಯ ಪತ್ರಕರ್ತರ ಅನುಕೂಲಕ್ಕಾಗಿ ನಿಮಿಸಲಾಗಿರುವ ಪತ್ರಿಕಾ ಭವನವು ಪ್ರಸ್ತೂತ ಕಾಯ್ನಿರ್ವಹಿಸುತ್ತಿದ್ದು, ಪತ್ರಕರ್ತರಿಗೆ ಸುದ್ದಿ ವರದಿಗೆ ಮತ್ತು ಸಭೆಗಳನ್ನು ನಡೆಸಲು ಇದು ಪ್ರಮುಖ ಕೇಂದ್ರವಾಗಿದೆ ಹೀಗಾಗಿ ಪತ್ರಿಕಾ ಭವನ ನಿರ್ವಹಣೆ ಜಿಲ್ಲಾ ಪತ್ರಕರ್ತರ ಸಂಘಕ್ಕೆ ಹಸ್ತಾಂತರಿಸಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಕಮಲನಗರ ತಾಲ್ಲೂಕು ಘಟಕ ಅಧ್ಯಕ್ಷ ಮನೋಜಕುಮಾರ ಹಿರೇಮಠ ಅಭಿಪ್ರಾಯಪಟ್ಟರು.ಪ್ರಸ್ತೂತ ಈ ಭವನದ ದೈನಂದಿನ ನಿರ್ವಹಣೆ, ಸ್ವಚ್ಛತೆ, ವಿದ್ಯುತ್ ಮತ್ತು ನೀರಿನ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಕರ್ಯಗಳ ನಿರ್ವಹಣೆಯಲ್ಲಿ ಕೆಲವು ತೊಡಕುಗಳು ಉಂಟಾಗುತ್ತಿವೆ. ಪತ್ರಿಕಾ ಭವನವೂ ಪತ್ರಕರ್ತರ ಹಿತದೃಷ್ಟಿಯಿಂದ ನಿರ್ಮಾಣವಾಗಿರುವುದರಿಂದ , ಅದರ ಸದ್ಬಳಕೆ ಮತ್ತು ಸಮರ್ಪಕ ನಿರ್ವಹಣೆಯನ್ನು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ವಹಿಸಿಕೊಟ್ಟರೆ, ಸಂಘದ ಮೂಲಕ ನಾವು ಅದನ್ನು ಅತ್ಯಂತ ವ್ಯವಸ್ಥಿತವಾಗಿ ನಿರ್ವಹಿಸಲು ಸಾಧ್ಯವಾಗುತ್ತದೆ. ಈ ಕುರಿತು ಕಳೆದ ದಿನಗಳಿಂದ ನಮ್ಮ ಪದಾದಿಕಾರಿಗಳೊಂದಿಗೆ ಚರ್ಚಿಸಿದ್ದು , ಭವನದ ಜವಾಬ್ಧಾರಿಯನ್ನು ಸಂಘಕ್ಕೆ ನಿಡುವಂತೆ ಮನವಿ ಮಾಡುತ್ತಿದ್ದೇವೆ ಎಂದರು.ಗೌರವಾಧ್ಯಕ್ಷ ಡಾ.ಎಸ್.ಎಸ್. ಮೈನಾಳೆ, ಪ್ರಧಾನ ಕಾರ್ಯದರ್ಶಿ ಮಹಾದೇವ ಬಿರಾದಾರ, ಖಜಾಂಚಿ ಬಿ.ಬಿ.ಹೆಡೆ, ರಾಜಶೇಖರ ಅಜ್ಜಾ, ಮಹಾದು ಬರ್ಗೆ, ಪರಮೇಶ್ವರ ರಾಂಪುರೆ, ಲಕ್ಷ್ಮಣ ರಾಠೋಡ್, ಸಂಜೀವಕುಮಾರ ಮುಳೆ, ಸವೀತಾ ಅಜ್ಜಾ ಸೇರಿದಂತೆ ತಾಲ್ಲೂಕು ಕಾರ್ಯಕಾರಣಿ ಸದಸ್ಯರು ಇದ್ದರು.

# ಕೊಪ್ಪಳ ಡಿಸ್ಟ್ರಿಕ್ಟ ಸ್ಪೋರ್ಟ್ಸ್ ಕರಾಟೆ ಅಸೋಸಿಯನ್ ಅಧ್ಯಕ್ಷರಾಗಿ ರಾಜಾಭಕ್ಷಿ ಎಚ್ ವಿ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಡಿಸ್ಟ್ರಿಕ್ಟ್ ಸ್ಪೋರ್ಟ್ಸ್ ಕರಾಟೆ ಅಸೋಸಿಯೇಷನ್ ಅಧ್ಯಕ್ಷರಾಗಿ ಕೊಪ್ಪಳ ಜಿಲ್ಲೆಯ ಹಿರಿಯ ತರಬೇತುದಾರ ರಾಜಾಬಕ್ಷಿ ಹೆಚ್ ವಿ ಅವರನ್ನು ನೇಮಕ ಮಾಡಲಾಗಿದೆ. ಅಖಿಲ ಕರ್ನಾಟಕ ಸ್ಪೋರ್ಟ್ಸ್ ಕರಾಟೆ ಅಸೋಸಿಯೇಷನ್ ರಾಜ್ಯ ಅಧ್ಯಕ್ಷರಾದ ಮತ್ತು ಕರ್ನಾಟಕ ರಾಜ್ಯ ಕರ್ನಾಟಕ ರಾಜ್ಯ ಕ್ರೀಡಾ ಪ್ರಾಧಿಕಾರದ ಉಪಾಧ್ಯಕ್ಷ ರೂ ಆದ ಎಂ ಸಿ ಅರುಣ್ ಮಾಚಯ್ಯ ಮತ್ತು ಕಾರ್ಯದರ್ಶಿಯಾದ ಭಾರ್ಗವ ರೆಡ್ಡಿ ಜೆ ಇವರು ನೇಮಕಾತಿ ಮಾಡಿ ಆದೇಶ ಹೊರಡಿಸಿದ್ದಾರೆ.ಕಳೆದ ಮೂರು ದಶಕಗಳಿಂದ ಕೊಪ್ಪಳ ಜಿಲ್ಲೆಯಲ್ಲಿ ಕರಾಟೆ ತರಬೇತಿಯಲ್ಲಿ ತೊಡಗಿಸಿಕೊಂಡಿರುವ ಹಾಗೂ ನ್ಯಾಷನಲ್ ಸ್ಪಿರಿಟ್ ಕರಾಟೆ ಅಕಾಡೆಮಿ ಮುಖ್ಯಸ್ಥರಾದ ರಾಜಾಬಕ್ಷಿ ಎಚ್ ವಿ ಯವರು ಜಿಲ್ಲೆಯಲ್ಲಿ ಉತ್ತಮ ಕರಾ-ಟೆ ಪಟುಗಳನ್ನು ತಯಾರಿಸಲು ಹಾಗೂ ಕರಾಟೆ ಶಿಕ್ಷಕರನ್ನು ಸಂಘಟಿಸಿ ರಾಜ್ಯ ಮತ್ತು ರಾಷ್ಟ್ರಮಟ್ಟದ ಸ್ಪರ್ಧೆಗಳಲ್ಲಿ ಕೊಪ್ಪಳ ಜಿಲ್ಲೆಯ ಕ್ರೀಡಾಪಟುಗಳಿಗೆ ಅವಕಾಶ ದೊರಕಿಸಿ ಕೊಡುವಂತಾಗಲು ಶ್ರಮಿಸಬೇಕೆಂದು ಹೇಳಿದ್ದಾರೆ.

# ಆರ್.ಬಿ.ತಿಮ್ಮಾಪೂರಗೆ ನೂತನ ಸಂಪುಟದಲ್ಲಿ ಸಚಿವ ಸ್ಥಾನ ನೀಡಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ವಿಧಾನ ಪರಿಷತ್ ಸದಸ್ಯ ಆರ್.ವಿ. ತಿಮ್ಮಾಪೂರ ಅವರಿಗೆ ನೂತನ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ಆದಿಜಾಂಬವ ಮತ್ತು ಮಾದಿಗ ಸಂಘದ ತಾಲ್ಲೂಕು ಘಟಕದ ಪದಾಧಿಕಾರಿಗಳು ಮಂಗಳವಾರ ತಹಸೀಲದಾರ ಕಾರ್ಯಾಲಯಕ್ಕೆ ತೆರಳಿ ಮನವಿ ಪತ್ರ ಸಲ್ಲಿಸಿದರು.

ರಾಜ್ಯ ಆದಿ ಜಾಂಬವ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಅಂಬಾದಾಸ ಹುಲಸೂರೆ ಅವರ ನೇತೃತ್ವದಲ್ಲಿ ಪದಾಧಿಕಾರಿಗಳು ತೆರಳಿ ಮುಖ್ಯಮಂತ್ರಿಗಳಿಗೆ



ಬರೆದ ಪತ್ರವನ್ನು ಗ್ರೇಡ್2 ತಹಸೀಲದಾರ ರಮೇಶ ಪೆದ್ದೆ ಅವರಿಗೆ ಸಲ್ಲಿಸಲಾಯಿತ್ತು.ಮನವಿಯಲ್ಲಿ ಹಿರಿಯ ರಾಜಕಾರಣಿ ಮತ್ತು ಮಾಜಿ ಸಚಿವರಾಗಿ ದಕ್ಷತೆಯಿಂದ ಕಾರ್ಯನಿರ್ವಹಿಸಿದ ಆರ್ ಬಿ ತಿಮ್ಮಾಪೂರ್ ಅವರಿಗೆ ನೂತನ ಸಂಪುಟದಲ್ಲಿ ಸಚಿವ ಸ್ಥಾನ ನೀಡಿ ಸಮಾಜಕ್ಕೆ ರಾಜಕೀಯ ಶಕ್ತಿ ತುಂಬಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಜಿಲ್ಲಾಧ್ಯಕ್ಷ ಹಣಮಂತ ಸೂರ್ಯವಂಶಿ, ಕಾರ್ಯಾಧ್ಯಕ್ಷ ತುಳಸೀರಾಮ ಜಕಾತೆ, ಶಾಮ ಕಾಂಬಳೆ, ಅನೀಲ ಗಾಯಕವಾಡ, ಗೋಪಾಲ ಗಾಯಕವಾಡ ಅನೀಲ ಗಾಯಕವಾಡ, ಆಕಾಶ ಸಿಂಧೆ, ಸಿಕಿಂದರ್ ಗಾಯಕವಾಡ, ದಯಾನಂದ ಮೇತ್ರೆ, ಬಾಬುರಾವ ಮಾನಗೇರೆ ಹಾಗೂ ಇನ್ನಿತರರಿದ್ದರು.

# ಯೋಗ ದೇಹ ಮತ್ತು ಮನಸ್ಸಿನ ಸಮತೋಲನದ ಮಂತ್ರ :ಶಾರದಾ ಘಾನಘಂಟಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಭಾಗ್ಯನಗರದ ಅಡವಿ ಆಂಜನೇಯ ದೇವಸ್ಥಾನದ ಹತ್ತಿರ ಘಾನಘಂಟಿ ಫೌಂಡೇಶನ್ ಮತ್ತು ಮಹಿಳಾ ಧ್ವನಿ ಸಂಸ್ಥೆಯ ವತಿಯಿಂದ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಯೋಗ ಗುರುಗಳಾದ ಡಾ.ಶಂಕ್ರಯ್ಯ ಬುಕ್ತಿಹಿರೇಮಠ ಮಾತನಾಡಿ ಯೋಗವು ಭಾರತೀಯ ಸಂಸ್ಕೃತಿಯ ಅಮೂಲ್ಯ ಕೊಡುಗೆ-ಯಾಗಿದ್ದು, ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಆರೋಗ್ಯವನ್ನು ವೃದ್ಧಿಸುವ ಸಾಧನವಾಗಿದೆ. ಯೋಗ ಕಾರ್ಯಕ್ರಮಗಳ ಮೂಲಕ ಜನರಲ್ಲಿ ಆರೋಗ್ಯದ ಬಗ್ಗೆ ಜಾಗೃತಿ ಮೂಡುತ್ತದೆ. ನಿಯಮಿತ ಯೋಗಾಭ್ಯಾಸದಿಂದ ದೇಹವು ಸದೃಢವಾಗುವುದರ ಜೊತೆಗೆ ಮನಸ್ಸು ಶಾಂತವಾಗಿರುತ್ತದೆ. ಒತ್ತಡ, ಆತಂಕ ಮತ್ತು ಅನೇಕ ಆರೋಗ್ಯ ಸಮಸ್ಯೆಗಳನ್ನು ಕಡಿಮೆ ಮಾಡಲು ಯೋಗ ಸಹಕಾರಿಯಾಗಿದೆ. ಇಂತಹ ಕಾರ್ಯಕ್ರಮಗಳು ಆರೋಗ್ಯಕರ ಜೀವನಶೈಲಿಯನ್ನು ಬೆಳೆಸಲು ಪ್ರೇರಣೆ ನೀಡುವುದರೊಂದಿಗೆ ಸಮಾಜದಲ್ಲಿ ಆರೋಗ್ಯ ಮತ್ತು ಸೌಹಾರ್ದತೆಯನ್ನು ಉತ್ತೇಜಿಸುತ್ತವೆ ಎಂದು ತಿಳಿಸಿದರು

ಘಾನಘಂಟಿ ಫೌಂಡೇಶನ್ ಮುಖ್ಯಸ್ಥರಾದ ಶಾರದಾ ಘಾನಘಂಟಿ ಮಾತನಾಡಿ ಯೋಗ ಕಾರ್ಯಕ್ರಮಗಳು ವ್ಯಕ್ತಿಯ ಸರ್ವತೋಮುಖ ಬೆಳವಣಿಗೆಗೆ ಸಹಕಾರಿಯಾಗುತ್ತವೆ. ಯೋಗದ ಮೂಲಕ ದೇಹದ



ಆರೋಗ್ಯ ಕಾಪಾಡಿಕೊಳ್ಳುವುದರ ಜೊತೆಗೆ ಮನಸ್ಸಿನ ಏಕಾಗ್ರತೆ ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸಬಹುದು. ಇಂತಹ ಕಾರ್ಯಕ್ರಮಗಳು ಯುವಜನರಲ್ಲಿ ಶಿಸ್ತು, ಸಹನೆ ಹಾಗೂ ಸಕಾರಾತ್ಮಕ ಮನೋಭಾವವನ್ನು ಬೆಳೆಸುತ್ತವೆ. ಯೋಗದ ಮಹತ್ವವನ್ನು ಜನರಿಗೆ ತಲುಪಿಸುವುದರೊಂದಿಗೆ ಆರೋಗ್ಯಕರ ಮತ್ತು ಸಂತೋಷದ ಜೀವನ ನಡೆಸಲು ಪ್ರೇರಣೆ ನೀಡುವುದು ಈ ಕಾರ್ಯಕ್ರಮಗಳ ಮುಖ್ಯ ಉದ್ದೇಶವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಪ್ರಿಯದರ್ಶಿನಿ ಮುಂಡರಗಿಮಠ, ನಾಗರತ್ನ, ಬಿ.ಎನ್.ಹೊರಪೇಟಿ, ಬಸವರಾಜ್ ಬೆಲ್ಲದ ಹಾಗೂ ಮತ್ತಿರರು ಉಪಸ್ಥಿತಿ ಇದ್ದು ಸಾಮೂಹಿಕ ಯೋಗ ಮಾಡಿ ಮಾಹಿತಿ ಪಡೆದುಕೊಂಡರು. ಕಾರ್ಯಕ್ರಮದಲ್ಲಿ ವಿದ್ಯಾ ಸರಸ್ವತಿ ಟ್ಯೂಷನ್ ಸೆಂಟರ್ ನ ವಿದ್ಯಾರ್ಥಿಗಳು ಮತ್ತು ಪಾಲಕರು ಮತ್ತಿರರು ಉಪಸ್ಥಿತಿ ಇದ್ದರು.

# ವಿಜಯನಗರ ಕಾಲೋನಿಯಲ್ಲಿ ಮಕ್ಕಳ ಹಕ್ಕುಗಳು, ಕಾನೂನು - ಸುರಕ್ಷತೆಯ ಜಾಗೃತಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಹಯೋಗದೊಂದಿಗೆ ಭಾಗ್ಯನಗರದ ವಿಜಯನಗರ ಕಾಲೋನಿಯಲ್ಲಿ ಮಕ್ಕಳ ಹಕ್ಕುಗಳು, ಕಾನೂನುಗಳು ಮತ್ತು ಮಕ್ಕಳ ಸುರಕ್ಷತೆ ಕುರಿತು ಜಾಗೃತಿ ಕಾರ್ಯಕ್ರಮ ಜರುಗಿತು. ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾನೂನು ಪರೀವಿಕ್ಷಣಾಧಿಕಾರಿಗಳಾದ ಶಿವಲೀಲಾ ವನ್ನೂರು ಅವರು ಮಾತನಾಡಿ, ಮಕ್ಕಳೆಂದರೆ ಹೆಣ್ಣಿರಲಿ ಗಂಡು ಇರಲಿ 18 ವರ್ಷದೊಳಗಿನವರನ್ನು ನಾವು ಮಕ್ಕಳೇಂದು ಕರೆಯುತ್ತೇವೆ. ಮಕ್ಕಳ ನಡುವೆ ಎಂತಹದ್ದೇ ಕಾರಣಕ್ಕೂ ತಾರತಮ್ಯ ಮಾಡದಂತೆ ಹಾಗೂ ಮಕ್ಕಳಲ್ಲಿ ಕೀಳರಿಮೆಯನ್ನು ಉಂಟುಮಾಡದಂತೆ ಎಲ್ಲ ವಯಸ್ಕರು ಎಚ್ಚರವಹಿಸಬೇಕು. ಹುಟ್ಟಿದ ಎಲ್ಲ ಮಕ್ಕಳು ಆರೋಗ್ಯದಿಂದ ಜೀವಿಸುವ ಮತ್ತು ಬೆಳೆಯುವ ಹಕ್ಕನ್ನು ಸ್ವಾಭಾವಿಕವಾಗಿ ಹೊಂದಿದ್ದಾರೆ. ಹಿರಿಯರು ಮಕ್ಕಳ ಅಭಿಪ್ರಾಯಗಳಿಗೆ ಮನ್ನಣೆ ನೀಡಬೇಕು. ಪ್ರತಿಯೊಂದು ಮಗು ಶಾಲೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕು ಎಂದರು.



ಮಕ್ಕಳು ಮತ್ತು ಮಹಿಳೆಯರು ಭಿಕ್ಷಾಟನೆಗೆ ತೆರಳದಂತೆ ಕುಟುಂಬ ಹಾಗೂ ಸ್ಥಳಿಕರು ಸಮುದಾಯದಲ್ಲಿ ಜಾಗೃತಿ ಮೂಡಿಸಬೇಕು. ಸರ್ಕಾರದಿಂದ ಮಹಿಳೆಯರಿಗಾಗಿ ದೊರೆಯುವಂತಹ ಉದ್ಯೋಗಿನಿ ಯೋಜನೆ, ಗೃಹಲಕ್ಷ್ಮೀ ಯೋಜನೆಗಳ ಲಾಭ ಪಡೆದುಕೊಂಡು ವಿವಿಧ ಕೌಶಲ್ಯ ಕಲಿತು ವ್ಯಾಪಾರ ಮಾಡುವ ನಿಟ್ಟಿನಲ್ಲಿ ಸ್ವಾಲಂಬಿ ಬದಕು ಮಾಡಬೇಕು. ಮಕ್ಕಳಿಗೆ ಇರುವಂತಹ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆ-2009ರ ಅಡಿಯಲ್ಲಿ ಪ್ರತಿಯೊಂದು ಮಗು ಶಿಕ್ಷಣದಿಂದ ವಂಚಿತವಾಗಬಾರದು. ತಂದೆ-ತಾಯಿ ತೀರಿದ ಮಗು ಪೋಷಕರೊಂದಿಗೆ ವಾಸವಾಗಿದ್ದು ಶಾಲೆಗೆ ಹೋಗುತ್ತಿದ್ದರೆ ಅಂತಹ ಮಕ್ಕಳಿಗೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದಲ್ಲಿ ಪ್ರಾಯೋಜಿಕತ್ವ ಯೋಜನೆ ಸೌಲಭ್ಯ ಪಡೆದು ಆರ್ಥಿಕವಾಗಿ ಸಂಕಷ್ಟದಿಂದ ದೂರವಾಗುವಂತೆ ಅನುಕೂಲತೆಯನ್ನು ಪಡೆಯಬೇಕು. ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣಾ ಕಾಯಿದೆ-2012 ರಲ್ಲಿ ಜಾರಿಗೆ ಬಂದಿದ್ದು, ಯಾವುದೇ ವ್ಯಕ್ತಿ ಲೈಂಗಿಕ ದೌರ್ಜನ್ಯ ಎಸಗಿದರೆ ಮತ್ತು ಮಕ್ಕಳ ದೇಹದ ಮೇಲೆ ಅಸುರಕ್ಷತ ಸ್ಪರ್ಶ ಮಾಡಿದರೆ ಘಟನೆಯ ಸ್ವರೂಪದ ಆಧಾರದ ಮೇಲೆ 20 ರಿಂದ ಜೀವಾವಧಿ ಮತ್ತು ಗಲ್ಲು ಶಿಕ್ಷೆಯನ್ನು ಸಹ ವಿಧಿಸಬಹುದು ಎಂದರು. ಅಕ್ಕಪಡೆ ಪೊಲೀಸ್ ಅಧಿಕಾರಿ ಸಾವಿತ್ರಿ ಡಿ. ಅವರು ಮಾತನಾಡಿ, ಜಿಲ್ಲೆಯಲ್ಲಿ ರೈಲ್ವೆ ಸ್ಟೇಷನಗಳು, ಬಸ್ಸ್ ನಿಲ್ದಾಣಗಳಲ್ಲಿ, ದೇವಸ್ಥಾನ, ಸಿನಿಮಾ ಟಾಕೀಜ್, ಪ್ರವಾಸಿ ತಾಣಗಳಲ್ಲಿ, ಮಾಲ್‌ಗಳಲ್ಲಿ, ಬೀದಿಗಳಲ್ಲಿ, ಶಾಲಾ ಕಾಲೇಜ್‌ಗಳಲ್ಲಿ ಮತ್ತು ಕುಟುಂಬ ಹಾಗೂ ಸಮುದಾಯಗಳಲ್ಲಿ ಮಹಿಳೆಯರ ಮತ್ತು ಮಕ್ಕಳ ಮೇಲೆ ದೈಹಿಕ, ಲೈಂಗಿಕ, ಮಾನಸಿಕ ಹಿಂಸೆಗಳು ಏನಾದರು ಯಾವುದೇ ವ್ಯಕ್ತಿ ನೀಡಿದಲ್ಲಿ ಅಕ್ಕಪಡೆಯ ಸಂಖ್ಯೆ 181 ಗೆ ಕರೆ ಮಾಹಿತಿ ನೀಡಿದರೆ, ಆ ಸ್ಥಳಕ್ಕೆ ಅಕ್ಕಪಡೆಯ ತಂಡ ರಕ್ಷಣೆಗಾಗಿ ಧಾವಿಸುತ್ತದೆ. ಹಾಗೂ ದಿನದ 24 ಗಂಟೆಗಳ ಕಾಲ ಕಾರ್ಯನಿರ್ವಹಿಸುವ ತುರ್ತು ಪೊಲೀಸ್ ಉಚಿತ ಸಹಾಯವಾಣಿ ಸಂಖ್ಯೆ 112 ಗೂ ಸಹ ಕರೆ ಮಾಡಿ ಮಾಹಿತಿ ನೀಡಬಹುದು ಎಂದರು. ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ಸಹಾಯವಾಣಿ ಸಂಯೋಜಕ ಶರಣಪ್ಪ ಅವರು ಮಾತನಾಡಿ, ಬಾಲ್ಯ ವಿವಾಹ, ಬಾಲಕಾರ್ಮಿಕ, ಮಕ್ಕಳ ಭಿಕ್ಷಾಟನೆ ಲೈಂಗಿಕ ದೌರ್ಜನ್ಯ, ಕಾಣೆಯಾದ ಮಗು, ಮಗುಪತ್ತೆ, ಬಿದಿಯಲ್ಲಿ ಬಿಸಾಕಿದ ಮಗು, ಶಾಲೆಯಿಂದ ಹೊರಗುಳಿದ ಮಕ್ಕಳು ಕಂಡುಬಂದಲ್ಲಿ ದಿನದ 24 ಗಂಟೆಗಳ ಕಾಲ ಚಾಲನೆಯಲ್ಲಿರುವ ಉಚಿತ ದೂರವಾಣಿ ಸಂಖ್ಯೆ ಮಕ್ಕಳ ಸಹಾಯವಾಣಿ 1098 ಕ್ಕೆ ಕರೆ ಮಾಡಿ ಮಾಹಿತಿ ನೀಡಬಹುದು. ಮಾಹಿತಿ ನೀಡಿದವರ ಹೆಸರನ್ನು ಗೌಪ್ಯವಾಗಿ ಇಟ್ಟು ಮಗುವಿನ ರಕ್ಷಣೆ ವಿವಿಧ ಇಲಾಖೆಯ ಸಹಯೋಗದೊಂದಿಗೆ ಮಾಡಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ನಾಗರತ್ನ ಮತ್ತು ಚೈತ್ರ, ಶರಣಪ್ಪ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಪ್ರವೇಶಾತಿಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.23-2026-27ನೇ ಸಾಲಿನ (ಜುಲೈ ಆವೃತ್ತಿಯ) ಪ್ರಥಮ, B.A / B.Com, B.Lib.I.Sc, B.Sc, BBA, BCA ಹಾಗೂ ಪ್ರಥಮ M.A (ಕನ್ನಡ, ಇಂಗ್ಲಿಷ್, ಹಿಂದಿ, ಉರ್ದು, ಇತಿಹಾಸ, ಪ್ರಾಚೀನ ಇತಿಹಾಸ ಹಾಗೂ ಪುರಾತತ್ವ ಅಧ್ಯಯನ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಸಮಾಜಶಾಸ್ತ್ರ, ಸಾರ್ವಜನಿಕ ಆಡಳಿತ, ಸಮೂಹ ಸಂವಹನ &ಪತ್ರಿಕೋದ್ಯಮ,) M.Com., M.B.A., M.Lib.I.Sc., M.Sc., M.S.W., B.S.W., M.C.A., DIPLOMA,. ವಿಷಯಗಳಿಗೆ ಪ್ರವೇಶಾತಿ ಪ್ರಾರಂಭವಾಗಿದೆ ಎಂದು ಕರಾಮುವಿ, ಪ್ರಾದೇಶಿಕ ಕೇಂದ್ರ ಕಲಬುರಗಿಯ ಪ್ರಾದೇಶಿಕ ನಿರ್ದೇಶಕರು ತಿಳಿಸಿದ್ದಾರೆ. ಪ್ರವೇಶ ಬಯಸುವ ಅಭ್ಯರ್ಥಿಗಳು 2026ರ ಸೆಪ್ಟೆಂಬರ್ 15 ರೊಳಗಾಗಿ ದಂಡಶುಲ್ಕವಿಲ್ಲದೆ ಪ್ರವೇಶ ಪಡೆಯಬಹುದು ಹಾಗೂ ಹೆಚ್ಚಿನ ಮಾಹಿತಿಗಾಗಿ ವೆಬ್ ಸೈಟ್ www.ksoumysuru.ac.in <http://www.ksoumysuru.ac.in>, ವೀಕ್ಷಿಸಬಹುದು

ಹಾಗೂ ಪ್ರಾದೇಶಿಕ ನಿರ್ದೇಶಕರಾದ ಹಣಮಂತ. ಆರ್. ಕಾಳನೂರ ಮೊ.ಸಂಖ್ಯೆ.: 9880061361, 7411115857ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಅಧ್ಯಯನ ಕೇಂದ್ರಕ್ಕೆ ಚಾಲನೆ




• **ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ**

ತಾಲೂಕಿನಲ್ಲಿರುವಂತಹ ಎಬಿಎಸ್ ಡ್ರೀಮ್ ಇಂಡಿಯಾ ಪ್ರೈವೇಟ್ ಕಂಪನಿ ಲಿಮಿಟೆಡ್ ವತಿಯಿಂದ ವಿದ್ಯಾರ್ಥಿಗಳಿಗೆ ಉತ್ತಮ ರೀತಿಯಲ್ಲಿ ಶಿಕ್ಷಣ ದೊರೆಯಲೆಂದು ಅಧ್ಯಯನ ಕೇಂದ್ರವನ್ನು ಉದ್ಘಾಟನೆ ಮಾಡುವುದರ ಮೂಲಕ ಅಧ್ಯಯನ ಕೇಂದ್ರಕ್ಕೆ ಶಂಶದ್ ಬೇಗಂ ರವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಎಬಿಎಸ್ ಡ್ರೀಮ್ ಇಂಡಿಯಾ ಕಂಪನಿಯ ಸಂಸ್ಥಾಪಕಿಯಾದ ಶಂಶದ್ ಬೇಗಂ ರವರು ಮಾತನಾಡಿ ತಮ್ಮ ಜೀವನದಲ್ಲಿ ವಿದ್ಯಾಭ್ಯಾಸದಿಂದ ವಂಚಿತವಾದ ಸಂದರ್ಭಗಳನ್ನು ಕುರಿತು ಮಾತನಾಡಿ ನಾನು ಅನುಭವಿಸಿದ ತೊಂದರೆಗಳನ್ನು ಈ ಯುವ ಪೀಳಿಗೆಯ ಮಕ್ಕಳುಗಳು ಅನುಭವಿಸಬಾರದು ಎಂದು ಮನದಲ್ಲಿಟ್ಟುಕೊಂಡು ಶಿಕ್ಷಣ ಕ್ಷೇತ್ರದಲ್ಲಿ ಹೆಜ್ಜೆ ಇಡುವ ಮೂಲಕ ಮಕ್ಕಳಿಗೆ ಅಧ್ಯಯನ ಕೇಂದ್ರವನ್ನು ತೆರೆದಿದ್ದಾರೆ.

ನಮ್ಮ ಅಧ್ಯಯನ ಕೇಂದ್ರದಲ್ಲಿ ಎಲ್ಲಾ ರೀತಿಯ ಪಠ್ಯಪುಸ್ತಕಗಳಿಗೆ ಸಂಬಂಧಪಟ್ಟಂತೆ ಹಾಗೂ ಇತರೆ ಪ್ರಚಲಿತ ಘಟನೆಗಳ ಕುರಿತು ಮಕ್ಕಳಿಗೆ ಉಪಯೋಗ ಆಗುವ ರೀತಿಯಲ್ಲಿ ಪುಸ್ತಕಗಳನ್ನು ತರಿಸಿದ್ದೇವೆ. ಅದರ ಜೊತೆಯಲ್ಲಿಯೇ ಪೊಲೀಸ್ ಕಾನ್ಸ್ಟೇಬಲ್ ಇಂದ ಹಿಡಿದು ಐಎಎಸ್ ಅಧಿಕಾರಿಗಳು ಆಗುವ ತನಕ ಎಲ್ಲಾ ರೀತಿಯ ಪುಸ್ತಕಗಳನ್ನು ವಿದ್ಯಾರ್ಥಿಗಳಿಗೆ ಒದಗಿಸಲಾಗುತ್ತದೆ. ಅದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಈ ದಿನ ಉದ್ಘಾಟನೆ ಮಾಡುವುದರ ಮೂಲಕ ಮಾಧ್ಯಮ ಹಾಗೂ ಪತ್ರಿಕಾಗೋಷ್ಠಿಯಲ್ಲಿ ನಿರ್ದೇಶಕಿಯಾದ ಶಂಶದ್ ಬೇಗಂ ರವರು ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದಂತಹ ಶ್ರೀಮತಿ ಸುಧಾ ಚಿದಾನಂದರವರು ಮಕ್ಕಳು ಅತಿ ಹೆಚ್ಚಿನ ಗಮನವನ್ನು ಪುಸ್ತಕದೆಡೆ ಹರಿಸಬೇಕು ಮೊಬೈಲ್ನನ್ನು ಬದಿಗಿರಿಸಿ ಹೆಚ್ಚಿನ ಪ್ರಮಾಣದಲ್ಲಿ ವಿದ್ಯಾಭ್ಯಾಸದ ಕಡೆ ಗಮನ ಹರಿಸುವುದರಿಂದ ಮಕ್ಕಳ ಜೀವನದಲ್ಲಿ ಹಾಗೂ ಏಳಿಗೆಯಲ್ಲಿಯೂ ಸಹ ಸುಧಾರಣೆ ಕಾಣಬಹುದು ಮತ್ತು ನನ್ನದೊಂದು ಸಹ ಚಿಕ್ಕ ಕೊಡುಗೆ ಇರಲಿ ಎಂದು ವೈಯಕ್ತಿಕವಾಗಿ 20 ಪುಸ್ತಕಗಳನ್ನು ನೀಡುವುದರ ಮೂಲಕ ಮಕ್ಕಳಿಗೆ ಉತ್ತೇಜನ ನೀಡಿದರು.

ಈ ಕಾರ್ಯಕ್ರಮದಲ್ಲಿ ಶ್ರೀಮತಿ ಸುಧಾ ಚಿದಾನಂದ ಹಾಗೂ ಶ್ರೀ ಮತಿ ಸೌಭಾಗ್ಯ ಲಕ್ಷ್ಮಿ, ಶ್ರೀ ಮತಿ ಸರೋಜ ಹುಸ್ಮನ್ ಮತ್ತು ಮಹೇಶ್ ಜೆಟ್ಟಿ, ಬಾಬು, ಮದನ್ ಮತ್ತು ಸಂಸ್ಥೆಯ ಎಲ್ಲಾ ಸಿಬ್ಬಂದಿಗಳ ಸಹಭಾಗಿತ್ವದೊಂದಿಗೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲಾಗಿತು.

# ಹಸಿಮೆಣಸಿನಕಾಯಿ, ದಾಳಿಂಬೆ ಬೆಳೆ ವಿಮೆಗೆ ಅರ್ಜಿ ಆಹ್ವಾನ; ಜು.31 ಕೊನೆಯ ದಿನ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಪ್ರಕೃತಿ ವಿಕೋಪಗಳು ಹಾಗೂ ಹವಾಮಾನ ವೈಪರೀತ್ಯಗಳಾದ ಅತಿವೃಷ್ಟಿ, ಅನಾವೃಷ್ಟಿ, ಬಿರುಗಾಳಿ, ಆಲಿಕಲ್ಲು ಮಳೆ, ಪ್ರವಾಹ ಮತ್ತು ಸಿಡಿಲಿನಿಂದ ಉಂಟಾಗುವ ಅವಘಡಗಳಿಂದ ಬೆಳೆ ನಷ್ಟ ಅನುಭವಿಸುವ ರೈತರ ನೆರವಿಗಾಗಿ ಸರ್ಕಾರವು 'ಮರುವಿನ್ಯಾಸಗೊಳಿಸಿದ ಹವಾಮಾನಾಧಾರಿತ ಬೆಳೆ ವಿಮೆ ಯೋಜನೆ'ಯನ್ನು ಜಾರಿಗೆ ತಂದಿದೆ. ಬಳ್ಳಾರಿ ಜಿಲ್ಲೆಯ ವಿವಿಧ ತಾಲ್ಲೂಕುಗಳ ಹಸಿಮೆಣಸಿನಕಾಯಿ ಹಾಗೂ ದಾಳಿಂಬೆ ಬೆಳೆಗಾರರಿಂದ ವಿಮೆ ನೋಂದಣಿಗೆ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯನ್ನು ಎಸ್‌ಬಿಐ ಜನರಲ್ ಇನ್ಶೂರೆನ್ಸ್ ಕಂಪನಿ ಲಿಮಿಟೆಡ್ ಸಂಸ್ಥೆಯ ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, ಅರ್ಹ ರೈತರು ನಿಗದಿತ ಅವಧಿಯೊಳಗೆ ನೋಂದಾಯಿಸಿಕೊಳ್ಳಲು ಕೋರಲಾಗಿದೆ.

*ವಿಮೆ ವ್ಯಾಪ್ತಿಗೆ ಒಳಪಡುವ ಬೆಳೆಗಳು ಮತ್ತು ಪ್ರದೇಶಗಳು:*

*ಹಸಿಮೆಣಸಿನಕಾಯಿ:* ಬಳ್ಳಾರಿ ಮತ್ತು ಕುರುಗೋಡು ತಾಲ್ಲೂಕುಗಳ ಗ್ರಾಮ ಪಂಚಾಯಿತಿಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳು.

*ದಾಳಿಂಬೆ:* ಕಂಪ್ಲಿ, ಸಂಡೂರು ಮತ್ತು ಸಿರುಗುಪ್ಪ ತಾಲ್ಲೂಕುಗಳ ಗ್ರಾಮ ಪಂಚಾಯಿತಿಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳು.

*ವಿವರಗಳು ಮತ್ತು ಪ್ರೀಮಿಯಂ ಮೊತ್ತ:*

*ಹಸಿಮೆಣಸಿನಕಾಯಿ:* ವಿಮಾ ಮೊತ್ತ ಪ್ರತಿ ಹೆಕ್ಟೇರ್‌ಗೆ (ರೂ.ಗಳಲ್ಲಿ) ರೂ. 71,000/–, ಪ್ರತಿ ಹೆಕ್ಟೇರ್‌ಗೆ ರೈತರು ಪಾವತಿಸಬೇಕಾದ ಪ್ರೀಮಿಯಂ (ರೂ.ಗಳಲ್ಲಿ) ರೂ. 3,550/–, ವಿಮಾ ಮೊತ್ತ ಪಾವತಿಸಲು ಕೊನೆಯ ದಿನಾಂಕ – ಜುಲೈ 31.

*ದಾಳಿಂಬೆ:* ವಿಮಾ ಮೊತ್ತ ಪ್ರತಿ ಹೆಕ್ಟೇರ್‌ಗೆ (ರೂ.ಗಳಲ್ಲಿ) ರೂ. 1,27,000/–, ಪ್ರತಿ ಹೆಕ್ಟೇರ್‌ಗೆ ರೈತರು ಪಾವತಿಸಬೇಕಾದ ಪ್ರೀಮಿಯಂ (ರೂ.ಗಳಲ್ಲಿ) ರೂ. 6,350/–, ವಿಮಾ ಮೊತ್ತ ಪಾವತಿಸಲು ಕೊನೆಯ ದಿನಾಂಕ – ಜುಲೈ 31.

ಬೆಳೆ ವಿಮೆ ಕುರಿತು ಹೆಚ್ಚಿನ ವಿವರಗಳಿಗಾಗಿ ರೈತರು ಆಯಾ ತಾಲ್ಲೂಕಿನ ತೋಟಗಾರಿಕೆ ಇಲಾಖೆ ಅಧಿಕಾರಿಗಳನ್ನು ಅಥವಾ ಕೆಳಗಿನ ಕಚೇರಿ ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳ ಮೂಲಕ ಸಂಪರ್ಕಿಸಬಹುದಾಗಿದೆ. ಬಳ್ಳಾರಿ, ಕುರುಗೋಡು ಮತ್ತು ಕಂಪ್ಲಿ: ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ), ದೂ08392–278177, ಮೊ.9448511649. ಸಂಡೂರು: ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ) ದೂ.08395–260389, ಮೊ.9740934208. ಸಿರುಗುಪ್ಪ: ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ), ದೂ.08396–222066, ಮೊ.9448910277. ಸೂಚನೆ: ರೈತರು ಯಾವುದೇ ಕೊನೆಯ ಕ್ಷಣದ ಗೊಂದಲಗಳನ್ನು ತಪ್ಪಿಸಲು ಜುಲೈ 31 ರೊಳಗಾಗಿ ತಮ್ಮ ಪ್ರೀಮಿಯಂ ಪಾವತಿಸಿ ಯೋಜನೆಯ ಸದ್ಬಳಕೆ ಮಾಡಿಕೊಳ್ಳಬೇಕಾಗಿ ತೋಟಗಾರಿಕೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೋಳೂರು: ಪಿ.ಎಂ. ಕಿಸಾನ್ ಉತ್ಸವ ದಿವಸ್ ಹಾಗೂ ಖೇತ್ ಬಚಾವೋ ಅಭಿಯಾನ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಕುರುಗೋಡು ತಾಲೂಕಿನ ಕೋಳೂರು ಹೋಬಳಿಯಲ್ಲಿ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ 23ನೇ ಕಂತು ಬಿಡುಗಡೆಯಾದ ಪ್ರಯುಕ್ತ 'ಪಿ.ಎಂ. ಕಿಸಾನ್ ಉತ್ಸವ ದಿವಸ್' ಹಾಗೂ 'ಖೇತ್ ಬಚಾವೋ' (ಭೂಮಿ ಉಳಿಸಿ) ಅಭಿಯಾನವನ್ನು ಶನಿವಾರ ಹಮ್ಮಿಕೊಳ್ಳಲಾಗಿತ್ತು. ಪಶ್ಚಿಮ ಬಂಗಾಳದ ಹೂಗ್ಲಿ ಜಿಲ್ಲೆಯ ತಾರಕೇಶ್ವರದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರು 23ನೇ ಕಂತಿನ ಪಿ.ಎಂ. ಕಿಸಾನ್ ಹಣವನ್ನು ದೇಶದ ರೈತರ ಖಾತೆಗಳಿಗೆ ನೇರವಾಗಿ ಬಿಡುಗಡೆ ಮಾಡಿದರು. ಈ ಐತಿಹಾಸಿಕ ಕ್ಷಣವನ್ನು ಹೋಬಳಿ ಮಟ್ಟದ ರೈತರು ನೇರವಾಗಿ ವೀಕ್ಷಿಸಲು ಕೃಷಿ ಇಲಾಖೆಯಿಂದ ವಿಶೇಷ ನೇರಪ್ರಸಾರ ವ್ಯವಸ್ಥೆಯನ್ನು ಕಲ್ಪಿಸಲಾಗಿತ್ತು. ಕೋಳೂರು ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಬಸವರಾಜ್ ಸಿಂಧಿಗೇರಿ ಅವರು ಮಾತನಾಡಿ, ಭೂಮಿ ಹೊಂದಿರುವ ಅರ್ಹ ರೈತರು ಕೃಷಿ ಚಟುವಟಿಕೆಗಳಿಗೆ ಉತ್ತಮ ಪರಿಕರಗಳನ್ನು ಬಳಸಿ, ಬೆಳೆಗಳ ಆರೋಗ್ಯ ನಿರ್ವಹಣೆ ಹಾಗೂ ಹೆಚ್ಚಿನ ಇಳುವರಿ ಪಡೆಯಲು ಕೇಂದ್ರ ಸರ್ಕಾರದಿಂದ ವಾರ್ಷಿಕ 6,000 ರೂ. ಗಳ ಆರ್ಥಿಕ ನೆರವು ನೀಡಲಾಗುತ್ತಿದೆ. ಈ ಅನುದಾನವನ್ನು ಮೂರು ಕಂತುಗಳಲ್ಲಿ (ನಾಲ್ಕು ತಿಂಗಳಿಗೊಮ್ಮೆ) ನೀಡಲಾಗುತ್ತಿದ್ದು, ರೈತರು ಇದನ್ನು ಕೃಷಿ ಉದ್ದೇಶಗಳಿಗೇ ಬಳಸಿ ಯೋಜನೆಯ ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.



ಮಾಜಿ ಮತ್ತು ಹಾಲಿ ಸಾಂವಿಧಾನಿಕ ಹುದ್ದೆಗಳಲ್ಲಿರುವವರು, ಶಾಸಕರು/ಸಂಸದರು/ನಗರಸಭೆ ಅಧ್ಯಕ್ಷರು ಹಾಗೂ ಅವರ ಕುಟುಂಬದ ಸದಸ್ಯರು, ನಿವೃತ್ತ ಸರ್ಕಾರಿ ನೌಕರರು, 10,000 ರೂ. ಗಿಂತ ಹೆಚ್ಚು ಪಿಂಚಣಿ ಪಡೆಯುತ್ತಿರುವ ವಯೋನಿವೃತ್ತ ನೌಕರರು ಮತ್ತು ಆದಾಯ ತೆರಿಗೆ ಪಾವತಿದಾರರು ಈ ಯೋಜನೆಗೆ ಅನರ್ಹರಾಗಿರುತ್ತಾರೆ. ಪಡಿತರ ಚೀಟಿ ಆಧಾರದ ಮೇಲೆ ಕುಟುಂಬದ ಒಬ್ಬ ಅರ್ಹ ಫಲಾನುಭವಿಗೆ ಮಾತ್ರ ಈ ಯೋಜನೆ ಲಭ್ಯವಿರುತ್ತದೆ ಎಂದು ಕೃಷಿ ಅಧಿಕಾರಿ ಸ್ಪಷ್ಟಪಡಿಸಿದರು. ಸಹಾಯಕ ಕೃಷಿ ಅಧಿಕಾರಿ ಡಾ.ಅರುಣ ಅವರು ಮಾತನಾಡಿ, ಈ ಬಾರಿ ಮುಂಗಾರು ಹಂಗಾಮಿನಲ್ಲಿ ಎಲ್ ನೀನೋ ಪ್ರಭಾವದಿಂದಾಗಿ ಮಳೆಯ ಕೊರತೆಯಾಗುವ ಸಾಧ್ಯತೆಯಿದೆ. ಹಾಗಾಗಿ ರೈತರು ದೀರ್ಘಾವಧಿ ಬೆಳೆಗಳ ಮೊರೆ ಹೋಗದೆ, ಅಲ್ಪಾವಧಿ ಬೆಳೆಗಳನ್ನು ಬೆಳೆಯಬೇಕು. ಕೃಷಿ ಹೊಂಡಗಳನ್ನು ನಿರ್ಮಿಸಿಕೊಂಡು ಮಳೆ ನೀರನ್ನು ಸಂಗ್ರಹಿಸುವುದು ಸೂಕ್ತ ಎಂದು ಸಲಹೆ ನೀಡಿದರು.

ಸಾಂಪ್ರದಾಯಿಕವಾಗಿ ನೀರು ನಿಲ್ಲಿಸಿ ಭತ್ತ ಬೆಳೆಯುವ ಬದಲು, ನೀರು ಉಳಿತಾಯ ಮಾಡುವ ಕೂರಿಗೆ ಭತ್ತ ಬಿತ್ತನೆ ಪದ್ಧತಿಯನ್ನು ಅಳವಡಿಸಿಕೊಳ್ಳಿ. ಇದರಿಂದ ಕೀಟ–ರೋಗ ಬಾಧೆ ತಗ್ಗುವುದರ ಜೊತೆಗೆ ಖರ್ಚು ಕಡಿಮೆಯಾಗಿ ಅಧಿಕ ಇಳುವರಿ ಸಿಗುತ್ತದೆ. ಈ ಪದ್ಧತಿಗೆ ಸೂಕ್ತವಾದ ಆರ್.ಎನ್.ಆರ್. ಭತ್ತದ ತಳಿ ಕೃಷಿ ಇಲಾಖೆಯಲ್ಲಿ ಸಹಾಯಧನದಲ್ಲಿ ಲಭ್ಯವಿದೆ ಎಂದರು.

ಜಿಲ್ಲೆಯಲ್ಲಿ ರಾಸಾಯನಿಕ ಗೊಬ್ಬರ ಹಾಗೂ ಕೀಟನಾಶಕಗಳ ಅತಿಯಾದ ಬಳಕೆಯಿಂದ ಮಣ್ಣಿನ ಫಲವತ್ತತೆ ಕುಂಠಿತವಾಗುತ್ತಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, ರೈತರು ಹಸಿರೆಲೆ ಗೊಬ್ಬರಗಳಾದ ಸೆಣಬು ಮತ್ತು ಡಯಂಚಾ ಬೀಜಗಳನ್ನು ಬಿತ್ತಿ ಮಡಿಕೆ ಹೊಡೆದು ಭೂಮಿಗೆ ಸೇರಿಸಬೇಕು. ಎರೆಹುಳು ಗೊಬ್ಬರ, ಕೊಟ್ಟಿಗೆ ಗೊಬ್ಬರ, ಕುರಿ/ಕೋಳಿ ಗೊಬ್ಬರ ಹಾಗೂ ಜೈವಿಕ ಗೊಬ್ಬರಗಳನ್ನು ಹೆಚ್ಚಾಗಿ ಬಳಸುವ ಮೂಲಕ ಮಣ್ಣಿನ ಗುಣಮಟ್ಟ ಕಾಪಾಡಬಹುದು. ಸಾಂಪ್ರದಾಯಿಕ ಗೊಬ್ಬರಗಳ ಜೊತೆಗೆ ನ್ಯಾನೋ ಯೂರಿಯಾ ಹಾಗೂ ನ್ಯಾನೋ ಡಿ.ಎ.ಪಿ ಬಳಸುವುದರಿಂದ ಹೆಚ್ಚಿನ ಲಾಭ ಪಡೆಯಬಹುದು ಎಂದು ತಿಳಿಸಿದರು.

ರೈತ ಸಂಪರ್ಕ ಕೇಂದ್ರದಲ್ಲಿ ಸಹಾಯಧನದಲ್ಲಿ ದೊರೆಯುವ ಬೇವಿನ ಎಣ್ಣೆ, ಟ್ರೈಕೊಡರ್ಮಾ ಶಿಲೀಂಧ್ರನಾಶಕಗಳಂತಹ ಜೈವಿಕ ಪೀಡೆನಾಶಕಗಳನ್ನು ಕೀಟ ನಿಯಂತ್ರಣಕ್ಕೆ ಬಳಸಲು ಅವರು ಕೋರಿದರು.

ಇದೇ ಸಂದರ್ಭದಲ್ಲಿ ಅರ್ಹ ರೈತರಿಗೆ ಮಣ್ಣು ಆರೋಗ್ಯ ಚೀಟಿ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ರೈತ ಸಂಪರ್ಕ ಕೇಂದ್ರದ ಸಿಬ್ಬಂದಿ ಕೆ. ಚಂದ್ರಶೇಖರ್, ಆತ್ಮ ಯೋಜನೆಯ ಸಿಬ್ಬಂದಿ ರೇಣುಕಾರಾಧ್ಯ, ಕೋಳೂರು ಗ್ರಾಮದ ಮುಖಂಡರು ಹಾಗೂ ರೈತರಾದ ವಿರಾನಗೌಡ, ರಾಜಶೇಖರ ಗೌಡ, ಅಂಬರೀಶ, ಜುವಾರಿ ಫಾರ್ಮ್ ಹಬ್‌ನ ಸಿಬ್ಬಂದಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸ್ಲಂ ಜನಾಂದೋಲನ ಕರ್ನಾಟಕ ರಾಜ್ಯ ಸಂಚಾಲಕರಾಗಿ ಎ.ನರಸಿಂಹಮೂರ್ತಿ ಪುನರ್ ಆಯ್ಕೆ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ನಗರದ ಲಯನ್ಸ್ ಕ್ಲಬ್ ನಲ್ಲಿ ಶನಿವಾರ ನಡೆದ ರಾಜ್ಯ ಪ್ರತಿನಿಧಿಗಳ ಸಮ್ಮೇಳನದಲ್ಲಿ ಮುಂದಿನ ಮೂರು ವರ್ಷಗಳ ಅವಧಿಗೆ ಸ್ಲಂ ಜನಾಂದೋಲನ ಕರ್ನಾಟಕ ರಾಜ್ಯ ಸಮಿತಿಗೆ ಪದಾಧಿಕಾರಿಗಳ ಆಯ್ಕೆಯನ್ನು ಮಾಡಲಾಯಿತು. ವಿಶೇಷ ವೀಕ್ಷಕರಾಗಿದ್ದ ಹೈ ಕೋರ್ಟ್ ವಕೀಲರಾದ ಪೂರ್ಣ ರವಿಶಂಕರ್, ಚಿತ್ರದುರ್ಗದ ಹಿರಿಯ ಹೋರಾಟಗಾರರಾದ ರಾಜಣ್ಣ ಕೆ. ಸಹಕಾರಿ ಕ್ಷೇತ್ರದ ತಿರುಮಲಯ್ಯ,ನವರ ಚುನಾವಣಾ ಪ್ರಕ್ರಿಯೆಯನ್ನು ನಡೆಸಿಕೊಟ್ಟರು, ಚುನಾವಣಾ ಪ್ರಕ್ರಿಯೆಯಲ್ಲಿ 18 ಜಿಲ್ಲೆಗಳಿಂದ ಆಯ್ಕೆ ಆದ 96 ರಾಜ್ಯ ಸಮಿತಿ ಪ್ರತಿನಿಧಿಗಳು ಸೇರಿ *ರಾಜ್ಯ ಸಂಚಾಲಕರನ್ನಾಗಿ ಎ.ನರಸಿಂಹಮೂರ್ತಿ ರವರ ಹೆಸರನ್ನು ಬಿಜಾಪುರ ಸ್ಲಂ ಸಮಿತಿಯ ಹಿರಿಯರಾದ ಅಕ್ರಮ್ ಮಾಶಳ್ಕರ್ ಸೂಚಿಸಿದರು*, ಎಲ್ಲರು ಕೈ ಎತ್ತುವ ಮೂಲಕ ಅನುಮೋದನೆ ನೀಡಿದರು.

ರಾಜ್ಯ ಸಂಘಟನಾ ಸಂಚಾಲಕರಾಗಿ ಕಲ್ಯಾಣ ಕರ್ನಾಟಕಕ್ಕೆ ಜನಾರ್ಧನ ಹಳ್ಳಿಬೆಂಚಿ, ಕಿತ್ತೂರು ಕರ್ನಾಟಕಕ್ಕೆ ಇಮ್ತಿಯಾಜ್ ಮಾನ್ವಿ, ಖಜಾಂಚಿಯಾಗಿ ಬೆಂಗಳೂರಿನ ಮಂಜುಬಾಯಿ ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ವಿಭಾಗಿಯ ಸಂಚಾಲಕರಾಗಿ ಬೆಂಗಳೂರು ವಿಭಾಗಕ್ಕೆ ಚಂದ್ರಮ್ಮ, ಬೆಳಗಾವಿ ವಿಭಾಗಕ್ಕೆ ಶೋಭಾ ಕಮತರ್, ಕಲಬುರ್ಗಿ ವಿಭಾಗಕ್ಕೆ ರೇಣುಕಾ ಸೂರ್ಯಕಾಂತ ರವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ರಾಜ್ಯ ಸಮಿತಿಯ ಹಿರಿಯ ಸದಸ್ಯರಾಗಿ ದೀಪಿಕಾ, ಅಕ್ರಮ್ ಮಾಶಾಳ್ಕರ್ , ಕೆ.ರಾಜಣ್ಣರವರನ್ನು ಆಯ್ಕೆ ಮಾಡಲಾಯಿತು,

ಮಾಧ್ಯಮ ವಿಭಾಗದ ಸಂಚಾಲಕರನ್ನಾಗಿ ತೇಜಸ್ ಕುಮಾರ್, ಶಿವಕುಮಾರ್, ಕೃಷ್ಣಮೂರ್ತಿ ರವರುಗಳನ್ನು ಆಯ್ಕೆ ಮಾಡಲಾಯಿತು. ಕಲಾ ಮಂಡಳಿಯ ಸಂಚಾಲಕರನ್ನಾಗಿ ತುಮಕೂರಿನ ಅರುಣ್ ಟಿ.ಜಿ ಹೊಸಪೇಟೆ ವೆಂಕಮ್ಮ ರವರುಗಳನ್ನು ಆಯ್ಕೆ ಮಾಡಲಾಯಿತು. ಬೆಂಗಳೂರು ವಿಶೇಷ ಪ್ರತಿನಿಧಿಗಳನ್ನಾಗಿ ಹನುಮಂತ ಕಟ್ಟಿಮನಿ, ಅಸಂಘಟಿತ ವಿಭಾಗದ ಸಂಚಾಲಕರನ್ನಾಗಿ ಧಾರವಾಡದ ರಸೂಲ್ ನದಾಫ್ ರವರನ್ನು ಆಯ್ಕೆ ಮಾಡಲಾಯಿತು. ಲಿಂಗತ್ವ ಅಲ್ಪಸಂಖ್ಯಾತರ ವಿಭಾಗಕ್ಕೆ ಪುಷ್ಪ ಬಿಜಾಪುರ ರವರನ್ನು ಆಯ್ಕೆ ಮಾಡಲಾಯಿತು. ಜಿಲ್ಲಾ ಸಂಚಾಲಕರಾಗಿ ಯಾದಗಿರಿಯ ಈರಮ್ಮ, ಬಳ್ಳಾರಿಯ ಶೇಖರ್ ಬಾಬು , ದಾವಣಗೆರೆಯ ಪರ್ವೀನ್ ಭಾನು, ಗಂಗಾವತಿಯ ರೇಷ್ಮಾಭಾನು, ಕೊಪ್ಪಳದ ನಾಗರತ್ನ ಅಳವಂಡಿ , ವಿಜಯಪುರದ ಮುತ್ತುಭೋವಿ, ಚಿತ್ರದುರ್ಗದ ಸುಧಾ ಡಿ, ಬೆಳಗಾವಿ ಪಕೀರಪ್ಪ ತಳವಾರ್ ರವರನ್ನು ಜಿಲ್ಲಾ ಸಂಚಾಲಕರನ್ನಾಗಿ ಆಯ್ಕೆ ಮಾಡಲಾಯಿತು ಎಂದು ರಾಜ್ಯ ಸಂಚಾಲಕರಾದ ಶೇಖರ್ ಬಾಬು ತಿಳಿಸಿದ್ದಾರೆ.

# ನಗರ–ಗ್ರಾಮೀಣದ ಪ್ರತಿ ಮಗುವಿಗೂ ತಲುಪಲಿ ಪೋಲಿಯೋ ಲಸಿಕೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಪೋಲಿಯೋ ನಿರ್ಮೂಲನೆಯಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ವಹಿಸುವಂತಿಲ್ಲ. ಗ್ರಾಮೀಣ ಮತ್ತು ನಗರ ಪ್ರದೇಶದ ಪ್ರತಿಯೊಂದು ಮಗುವಿಗೂ ಲಸಿಕೆ ತಲುಪಬೇಕು. ಈ ನಿಟ್ಟಿನಲ್ಲಿ ಎಲ್ಲಾ ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೇರ್ ಅವರು ಹೇಳಿದರು.

ನಗರದ ನೂತನ ಜಿಲ್ಲಾಡಳಿತ ಭವನದ ವಿಡಿಯೋ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಾದ್ಯಂತ ಇರುವ ಹುಟ್ಟಿನಿಂದ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ತಪ್ಪದೇ ಪೋಲಿಯೋ ಲಸಿಕೆ ಹಾಕಬೇಕು. ವಲಸೆ ಕಾರ್ಮಿಕರ ಮಕ್ಕಳು, ಇಟ್ಟಿಗೆ ಭಟ್ಟಿ, ಕಟ್ಟಡ ನಿರ್ಮಾಣ ಪ್ರದೇಶಗಳು ಮತ್ತು ತೋರಣಗಲ್ಲು ಭಾಗದ ಹೈ–ರಿಸ್ಕ್ ಪ್ರದೇಶಗಳಲ್ಲಿನ ಮಕ್ಕಳು ಬಿಟ್ಟುಹೋಗದಂತೆ ನೂರಕ್ಕೆ ನೂರರಷ್ಟು ಪ್ರಗತಿ ಸಾಧಿಸಬೇಕು ಎಂದು ಸೂಚಿಸಿದರು.

ಜೂ.27 ರಂದು ಜಿಲ್ಲೆಯ ಎಲ್ಲಾ ಶಾಲಾ ಮಕ್ಕಳಿಂದ ಲಸಿಕಾ ಕಾರ್ಯಕ್ರಮದ ಕುರಿತಾಗಿ ಅರಿವು ಜಾಥಾ ಹಮ್ಮಿಕೊಳ್ಳಬೇಕು. ಜೂನ್ 28 ರಂದು ನಿಗದಿಪಡಿಸಿದ ಬೂತ್‌ಗಳಲ್ಲಿ ಲಸಿಕೆ ಹಾಕಲಾಗುವುದು ಹಾಗೂ ನಂತರದ ದಿನಗಳಲ್ಲಿ ತಂಡಗಳು ಮನೆ ಮನೆಗೆ ಭೇಟಿ ನೀಡಿ ಮಕ್ಕಳಿಗೆ ಪೋಲಿಯೋ ಹನಿ ಹಾಕಲಿವೆ. ಸಾರ್ವಜನಿಕರು ಹಾಗೂ ಪೋಷಕರು ತಮ್ಮ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಹನಿ ಹಾಕಿಸಿ ಅಭಿಯಾನವನ್ನು ಯಶಸ್ವಿಗೊಳಿಸಬೇಕಾಗಿ ತಿಳಿಸಿದರು.



ರೈಲ್ವೆ ನಿಲ್ದಾಣ, ಬಸ್ ನಿಲ್ದಾಣ, ಹಾಗೂ ಪ್ರಮುಖ ವೃತ್ತಗಳಲ್ಲಿ ಸಂಚಾರಿ ಲಸಿಕಾ ಕೇಂದ್ರಗಳನ್ನು ನಿಯೋಜಿಸಬೇಕು. ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಮೈಕ್ ಪ್ರಚಾರ, ಬ್ಯಾನರ್‌ಗಳು ಮತ್ತು ಕರಪತ್ರಗಳ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು. ಆರೋಗ್ಯ ಇಲಾಖೆಯೊಂದಿಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ನಗರಸಭೆ/ಪುರಸಭೆ ಹಾಗೂ ಸಾರಿಗೆ ಇಲಾಖೆಗಳು ಜಂಟಿಯಾಗಿ ಕೆಲಸ ಮಾಡಲು ಕಟ್ಟುನಿಟ್ಟಿನ ಸೂಚನೆ ನೀಡಿದರು.

*ಜಿಲ್ಲೆಯಲ್ಲಿ 1.99 ಲಕ್ಷ ಮಕ್ಕಳಿಗೆ ಲಸಿಕೆ ಹಾಕುವ ಗುರಿ:*

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ, ರಾಷ್ಟ್ರೀಯ ಲಸಿಕಾ ದಿನದ ಅಂಗವಾಗಿ ಜೂನ್ 28 ರಿಂದ ಜುಲೈ 1, 2026 ರವರೆಗೆ ಜಿಲ್ಲಾದ್ಯಂತ ವ್ಯಾಪಕ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಈ ಬಾರಿಯ ಅಭಿಯಾನದಲ್ಲಿ ಜಿಲ್ಲೆಯಾದ್ಯಂತ ಹುಟ್ಟಿನಿಂದ 5 ವರ್ಷದೊಳಗಿನ ಒಟ್ಟು 1,99,703 ಮಕ್ಕಳಿಗೆ ಪೋಲಿಯೋ ಹನಿಗಳನ್ನು ಹಾಕುವ ಬೃಹತ್ ಗುರಿಯನ್ನು ಹೊಂದಲಾಗಿದೆ ಎಂದು ತಿಳಿಸಿದರು.

*ಒಟ್ಟು ಜನಸಂಖ್ಯೆ ಮತ್ತು ಗುರಿ:*

ಜಿಲ್ಲೆಯ ಒಟ್ಟು 16,74,739 ಜನಸಂಖ್ಯೆಯಲ್ಲಿ, 0–5 ವರ್ಷದೊಳಗಿನ 1,99,703 ಮಕ್ಕಳನ್ನು (ನಗರ ಪ್ರದೇಶದಲ್ಲಿ 76,347 ಮತ್ತು ಗ್ರಾಮೀಣ ಪ್ರದೇಶದಲ್ಲಿ 1,23,356) ಗುರುತಿಸಿ ಲಸಿಕೆ ನೀಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಜಿಲ್ಲಾದ್ಯಂತ ಒಟ್ಟು 977 ಲಸಿಕಾ ಬೂತ್‌ಗಳನ್ನು ಸ್ಥಾಪಿಸಲಾಗುತ್ತಿದ್ದು, ಗ್ರಾಮೀಣ ಭಾಗದಲ್ಲಿ 657 ಹಾಗೂ ನಗರ ಭಾಗದಲ್ಲಿ 320 ಬೂತ್‌ಗಳು ಕಾರ್ಯನಿರ್ವಹಿಸಲಿವೆ ಎಂದರು.

ಅಭಿಯಾನದ ಭಾಗವಾಗಿ ಜಿಲ್ಲೆಯ ಒಟ್ಟು 3,49,381 ಮನೆಗಳಿಗೆ ಸಿಬ್ಬಂದಿ ಭೇಟಿ ನೀಡಲಿದ್ದಾರೆ. ಇದರಲ್ಲಿ ನಗರ ಪ್ರದೇಶದ 1,37,502 ಹಾಗೂ ಗ್ರಾಮೀಣ ಪ್ರದೇಶದ 2,11,879 ಮನೆಗಳು ಸೇರಿವೆ. ಗುರುತಿಸಲಾದ ಒಟ್ಟು 335 ಹೈ–ರಿಸ್ಕ್ ಹಾಗೂ ವಲಸೆ ಕಾರ್ಮಿಕರ ಪ್ರದೇಶಗಳಲ್ಲಿ (ನಗರ–131, ಗ್ರಾಮೀಣ–204) ಲಸಿಕೆಯಿಂದ ಯಾವುದೇ ಮಗು ವಂಚಿತವಾಗದಂತೆ ನೋಡಿಕೊಳ್ಳಲು 236 ವಿಶೇಷ 'ಮನೆ–ಮನೆ ಭೇಟಿ ತಂಡಗಳನ್ನು' ನಿಯೋಜಿಸಲಾಗಿದೆ.

*ಕಾರ್ಯಪಡೆ ಮತ್ತು ಸಾರಿಗೆ ವ್ಯವಸ್ಥೆ:*

ಅಭಿಯಾನವನ್ನು ಯಶಸ್ವಿಗೊಳಿಸಲು ಜಿಲ್ಲಾದ್ಯಂತ ಬೃಹತ್ ಸಿಬ್ಬಂದಿ ವರ್ಗವನ್ನು ನಿಯೋಜಿಸಲಾಗಿದೆ. 615 ಮನೆ–ಮನೆ ತಂಡಗಳು, 50 ಟ್ರಾನ್ಸಿಟ್ ತಂಡಗಳು ಮತ್ತು 15 ಮೊಬೈಲ್ ತಂಡಗಳು ಸೇರಿದಂತೆ ಒಟ್ಟು 680 ತಂಡಗಳು ಕಾರ್ಯನಿರ್ವಹಿಸಲಿವೆ. ಲಸಿಕೆ ಹಾಕಲು 1,954 ಲಸಿಕೆದಾರರು ಹಾಗೂ ಅವರ ಮೇಲ್ವಿಚಾರಣೆಗಾಗಿ 188 ಸೂಪರ್‌ವೈಸರ್‌ಗಳನ್ನು ನಿಯೋಜಿಸಲಾಗಿದೆ. ಇಡೀ ಕಾರ್ಯಕ್ರಮದ ಉಸ್ತುವಾರಿಗೆ 4 ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ಸಭೆಗೆ ತಿಳಿಸಿದರು.

ಇದೇ ವೇಳೆ ಜಾಗೃತಿ ಭಿತ್ತಿ ಪತ್ರಗಳನ್ನು ಬಿಡುಗಡೆಗೊಳಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್. ಬಸರೆಡ್ಡಿ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್ ಸೇರಿದಂತೆ ಜಿಲ್ಲೆಯ ಎಲ್ಲಾ ತಾಲ್ಲೂಕು ಆರೋಗ್ಯ ಅಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಬೆಂಬಲ ಬೆಲೆಯಲ್ಲಿ ಮಾರಾಟಕ್ಕೆ ಆಂಧ್ರದಿಂದ ತಂದ ಜೋಳ ವಶಕ್ಕೆ, ವ್ಯಾಪಾರಿಗಳ ವಿರುದ್ಧ ಪ್ರಕರಣ ದಾಖಲು

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಆಂಧ್ರಪ್ರದೇಶದಲ್ಲಿ ಕಡಿಮೆ ದರಕ್ಕೆ ಖರೀದಿಸಿದ ಜೋಳವನ್ನು ನಗರದ ಎಪಿಎಂಸಿ ಮಾರುಕಟ್ಟೆಗೆ ತಂದು ಕರ್ನಾಟಕದ ರೈತರ ಹೆಸರಲ್ಲಿ ಮಾರಾಟ ಮಾಡಿ ಸರ್ಕಾರದ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ಸೌಲಭ್ಯ ಪಡೆಯಲು ಯತ್ನಿಸಿದ ಆರೋಪದಡಿಯಲ್ಲಿ ಸಹಾಯಕ ಆಯುಕ್ತ ರಾಜೇಶ್ ಎಚ್ಡಿ ಅವರ ನೇತೃತ್ವದಲ್ಲಿ ಅಧಿಕಾರಿಗಳು ದಾಳಿ ನಡೆಸಿ ನೂರಾರು ಚೀಲ ಜೋಳವನ್ನು ವಶಪಡಿಸಿಕೊಂಡಿದ್ದಾರೆ.

ಆಂಧ್ರಪ್ರದೇಶದ ಗುಂಟೂರು ಭಾಗದಲ್ಲಿ ಪ್ರತಿ ಕ್ವಿಂಟಲ್‌ಗೆ ಸಾವಿರ ರೂಪಾಯಿಗಳಿಗೂ ಕಡಿಮೆ ದರದಲ್ಲಿ ಖರೀದಿಸಿದ್ದ ಜೋಳವನ್ನು ಬಳ್ಳಾರಿ ಜಿಲ್ಲೆಯ ರೈತರ ಹೆಸರಲ್ಲಿ ನಗರದ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಮಾರಾಟ ಮಾಡಿ, ರಾಜ್ಯದಲ್ಲಿ ಜಾರಿಯಲ್ಲಿರುವ ರೂಪಾಯಿ 3,700ಕ್ಕೂ ಅಧಿಕ ಎಂಎಸ್‌ಪಿ ದರದ ಲಾಭ ಪಡೆಯಲು ಕೆಲವು ವ್ಯಾಪಾರಿಗಳು ಸಂಚು ರೂಪಿಸಿದ್ದರು ಎಂಬ ಆರೋಪದ ಖಚಿತ ಮಾಹಿತಿಯ ಮೇರೆಗೆ



ಬಳ್ಳಾರಿ ಉಪವಿಭಾಗಾಧಿಕಾರಿ (ಎಸಿ) ರಾಜೇಶ್ ಎಚ್ ಡಿ ಮತ್ತು ಇತರ ಅಧಿಕಾರಿಗಳ ತಂಡ ದಾಳಿ ನಡೆಸಿತು. ದಾಳಿಯ ವೇಳೆ ತಾಲೂಕಿನ ಅಸುಂಡಿ ಗ್ರಾಮದ ಖಾಸಗಿ ಗೋದಾಮಿನಲ್ಲಿ ಅಕ್ರಮವಾಗಿ ಸಂಗ್ರಹಿಸಿಡಲಾಗಿದ್ದ 480 ಚೀಲ ಜೋಳವನ್ನು ಪತ್ತೆ ಹಚ್ಚಿ ವಶಕ್ಕೆ ಪಡೆಯಲಾಗಿದೆ ಎಂದು ತಿಳಿದುಬಂದಿದೆ. ಬಳ್ಳಾರಿ ಎಪಿಎಂಸಿ ವ್ಯಾಪ್ತಿಯ ಗೋದಾಮಿನಲ್ಲಿಯೂ 410 ಚೀಲ ಜೋಳವನ್ನು ದಾಸ್ತಾನು ಮಾಡಿರುವುದು ಬೆಳಕಿಗೆ ಬಂದಿದ್ದು, ಅಧಿಕಾರಿಗಳು ಪರಿಶೀಲನೆ ನಡೆಸಿ ಸಂಬಂಧಿಸಿದ ದಾಖಲೆಗಳನ್ನು ಮತ್ತು ಜೋಳವನ್ನು ವಶಪಡಿಸಿಕೊಂಡಿದ್ದಾರೆ.

ಪ್ರಾಥಮಿಕ ತನಿಖೆಯಲ್ಲಿ ಜೋಳವನ್ನು ಆಂಧ್ರಪ್ರದೇಶದಿಂದ ತರಲಾಗಿದ್ದು, ರಾಜ್ಯದ ರೈತರ ಹೆಸರಲ್ಲಿ ಮಾರಾಟ ಮಾಡಲು ಸಿದ್ಧತೆ ನಡೆಸಲಾಗುತ್ತಿತ್ತು ಎಂಬ ಮಾಹಿತಿ ಲಭ್ಯವಾಗಿದೆ. ಈ ಸಂಬಂಧ ಸಂಬಂಧಿತ ದಾಖಲೆಗಳು, ಸಾಗಣೆ ವಿವರಗಳು ಹಾಗೂ ಖರೀದಿ ಮಾಹಿತಿಯನ್ನು ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಪಿ.ಡಿ. ಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದ್ದು, ಅಕ್ರಮ ದಾಸ್ತಾನು ಹಾಗೂ ಎಂಎಸ್‌ಪಿ ದುರ್ಬಳಕೆ ಯತ್ನದ ಕುರಿತು ತನಿಖೆ ಮುಂದುವರಿದಿದೆ. ಅಧಿಕಾರಿಗಳು ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದಾರೆ.

ಅಧಿಕಾರಿಗಳು ಸಹ ಇಂತಹ ಅಕ್ರಮಗಳಲ್ಲಿ ಭಾಗಿಯಾಗಿದ್ದು ಮೇಲ್ನೋಟಕ್ಕೆ ಕಂಡು ಬಂದಿದೆ ಅವರ ಮೇಲೆಯೂ ಸಹ ಪ್ರಕರಣವನ್ನು ದಾಖಲಿಸಿ ಕ್ರಮ ಕೈಗೊಳ್ಳಬೇಕೆಂದು ರಾಜ್ಯದ ರೈತರು ಎಸಿ ರಾಜೇಶ್ ಅವರಲ್ಲಿ ಮನವಿ ಮಾಡಿದ್ದಾರೆ

# ಸಂಡೂರು ತಾಲ್ಲೂಕಿನಲ್ಲಿ ಅಂಗನವಾಡಿ ಕಂ-ಕ್ರಷ್ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಪ್ರಕಟಣೆ ಹೊರಡಿಸಲಾಗಿದ್ದು, ಇಲ್ಲಿನ ವಿವಿಧ ಕೇಂದ್ರಗಳಲ್ಲಿ ಒಟ್ಟು 6 ಅಂಗನವಾಡಿ ಕಂ–ಕ್ರಷ್ ಕಾರ್ಯಕರ್ತೆ ಹಾಗೂ 6 ಅಂಗನವಾಡಿ ಕಂ–ಕ್ರಷ್ ಸಹಾಯಕಿ ಗೌರವ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಆಫ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹತೆಗಳು: ಅರ್ಜಿ ಸಲ್ಲಿಸುವ ಮಹಿಳಾ ಅಭ್ಯರ್ಥಿಗಳು ಕಡ್ಡಾಯವಾಗಿ ಅದೇ ಗ್ರಾಮದ, ವಾರ್ಡಿನ ಅಥವಾ ಆಯಾ ಸ್ಥಳೀಯ ಅಂಗನವಾಡಿ ಕಂ–ಕ್ರಷ್ ಕೇಂದ್ರದ ಸರ್ವವ್ಯಾಪ್ತಿಯಲ್ಲಿ ವಾಸವಾಗಿರಬೇಕು ಅರ್ಜಿ ಸಲ್ಲಿಸಲು ಜುಲೈ 18 ರಂದು ಕೊನೆಯ ದಿನವಾಗಿದೆ.

# ಸೋಯಾ, ತೊಗರಿ ಬಿತ್ತನೆಗೆ ಅವಕಾಶ; ರೈತರು ಆತಂಕಪಡಬೇಡಿ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಜೂನ್ ತಿಂಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದ್ದರೂ, ರೈತರು ಯಾವುದೇ ರೀತಿಯ ಆತಂಕ ಪಡುವ ಅಗತ್ಯವಿಲ್ಲ. ಜುಲೈ 15ರ ತನಕ ಸೋಯಾಬಿನ್ ಹಾಗೂ ತೊಗರಿ ಬಿತ್ತನೆ ಮಾಡಲು ಅವಕಾಶವಿದೆ ಎಂದು ಕಮಲನಗರ ರೈತ ಸಂಪರ್ಕ ಕೇಂದ್ರದ ಉಪ ವಲಯ ಅಧಿಕಾರಿ ಶತ್ರುಘ್ನ ಅವರು ತಿಳಿಸಿದ್ದಾರೆ.

ತಾಲೂಕಿನ ಕೃಷಿ ಚಟುವಟಿಕೆಗಳು ಹಾಗೂ ಬಿತ್ತನೆ ಕುರಿತು ಕಮಲನಗರ ರೈತ ಸಂಪರ್ಕ ಕೇಂದ್ರದಲ್ಲಿ ಮಲ್ಲಮ್ಮ ನುಡಿ ಪತ್ರಿಕೆ ಜೊತೆ ಮಾತನಾಡಿದ ಅವರು, ರೈತರಿಗೆ ಮಹತ್ವದ ಮಾರ್ಗದರ್ಶನ ಹಾಗೂ ಮಾಹಿತಿ ನೀಡಿದರು.

**ತಾಲ್ಲೂಕಿನ ಒಟ್ಟು ಬಿತ್ತನೆ ಗುರಿ: 20,000 ಹೆಕ್ಟೇರ್:** ಕಮಲನಗರ ತಾಲ್ಲೂಕಿನಲ್ಲಿ ಈ ಬಾರಿ ಒಟ್ಟು 20,000 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ.

ಪ್ರತಿ ವರ್ಷ ಜೂನ್ ತಿಂಗಳು ಕೊನೆಗೊಳ್ಳುವಷ್ಟರಲ್ಲಿ ಹಚ್ಚಹಸಿರಿನಿಂದ ಕಂಗೊಳಿಸಬೇಕಾಗಿದ್ದ ಕೃಷಿ ಭೂಮಿ, ಈ ಬಾರಿ ಕೇವಲ ಕಪ್ಪು ಮಣ್ಣಿನಿಂದ ಕಾಯುತ್ತಿರುವುದು ದೇಶದ ಬೆನ್ನೆಲುಬಾದ ರೈತರಲ್ಲಿ ತೀವ್ರ ಆತಂಕ ಮೂಡಿಸಿದೆ. ದೇಶಕ್ಕೆ ಅನ್ನ ನೀಡುವ ರೈತ ಖುಷಿಯಾಗಿದ್ದರೆ ಮಾತ್ರ



ಇಡೀ ದೇಶ ನೆಮ್ಮದಿಯಿಂದ ಇರಲು ಸಾಧ್ಯ ಎಂಬ ಸತ್ಯದ ನಡುವೆ, ಪ್ರಕೃತಿಯ ಮುನಿಸು ಅನ್ನದಾತನ ನೆಮ್ಮದಿ ಕೆಡಿಸಿದೆ.

ಮುಂಗಾರು ಬಿತ್ತನೆಗಾಗಿ ಭೂಮಿ ಸಿದ್ಧಪಡಿಸಿ, ಸಾಲ-ಸೋಲ ಮಾಡಿ ಅಗತ್ಯ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಖರೀದಿಸಿಟ್ಟುಕೊಂಡು ರೈತರು ಮಳೆಗಾಗಿ ದಿನಗಣನೆ ನಡೆಸುತ್ತಿದ್ದಾರೆ. ಆದರೆ ನಿರೀಕ್ಷಿತ ಮಟ್ಟದಲ್ಲಿ ಮಳೆ ಸುರಿಯದ ಕಾರಣ ಬಿತ್ತನೆ ಕಾರ್ಯ ಸಂಪೂರ್ಣ ಕುಂಠಿತಗೊಂಡಿದೆ.

**ಬೆಳೆ ಇದ್ದರೆ ಮಾತ್ರ ಬದುಕು:** "ಮಳೆ ಇದ್ದರೆ ಬೆಳೆ, ಬೆಳೆ ಇದ್ದರೆ ಮಾತ್ರ ನಾವು ನೀವು ಬದುಕಲು ಸಾಧ್ಯ" ಎನ್ನುವ ಕಹಿ ಸತ್ಯ ಈಗ ಎಲ್ಲರನ್ನೂ ಕಾಡುತ್ತಿದೆ. ಕೃಷಿ ಚಟುವಟಿಕೆಗಳು ಸ್ಥಗಿತಗೊಂಡರೆ ಅದರ ನೇರ ಪರಿಣಾಮ ದೇಶದ ಆಹಾರ ಭದ್ರತೆ ಮತ್ತು ಆರ್ಥಿಕತೆಯ ಮೇಲೆ ಉಂಟಾಗಲಿದೆ.

ಸದ್ಯದ ಮಟ್ಟಿಗೆ ಕೃಷಿ ಹೊಂಡಗಳು, ಬಾವಿಗಳು ಮತ್ತು ನದಿ-ತೊರೆಗಳು ಒಣಗುತ್ತಿದ್ದು, ಬಂಪರ್ ಇಳುವರಿಯ ಕನಸು ಕಾಣುತ್ತಿದ್ದ ರೈತರು ಈಗ ಕೇವಲ ಕಪ್ಪು ಮಣ್ಣಿನ ಭೂಮಿಯನ್ನೇ ದಿಟ್ಟಿಸುತ್ತಾ ವರುಣ ದೇವನ ಕೃಪೆಗೆ ಪ್ರಾರ್ಥಿಸುತ್ತಿದ್ದಾರೆ.

**ನಮ್ಮ ಆಶಯ:** ರೈತರ ನಿರೀಕ್ಷೆಯಂತೆ ಸದ್ಯದಲ್ಲೇ ಉತ್ತಮ ಮಳೆಯಾಗಿ, ಒಣಗುತ್ತಿರುವ ಭೂಮಿ



ಮುಂಗಾರು ಬಿತ್ತನೆ ಕಾರ್ಯ ಚುರುಕುಗೊಳ್ಳಲು ಸುಮಾರು 80 ಮಿ.ಮೀ. ಮಳೆಯಾಗುವ ಅಗತ್ಯವಿದೆ. ರೈತರು ಸೋಯಾಬಿನ್ ಬಿತ್ತನೆ ಮಾಡುವಾಗ ಬೀಜಗಳು 3 ರಿಂದ 5 ಸೆಂ.ಮೀ. ಆಳದಲ್ಲಿ ಬೀಳುವಂತೆ ಜಾಗ್ರತೆ ವಹಿಸಬೇಕು. ಇದರಿಂದ ಮೊಳಕೆ ಒಡೆಯಲು ಅನುಕೂಲವಾಗುತ್ತದೆ.

–ಶತ್ರುಘ್ನ, ಉಪ ವಲಯ ಅಧಿಕಾರಿ ಕಮಲನಗರ

ತಂಪಾಗಲಿ. ಅನ್ನದಾತನ ಶ್ರಮಕ್ಕೆ ತಕ್ಕ ಪ್ರತಿಫಲ ಸಿಗುವಂತಾಗಿ, ಗದ್ದೆ-ಬೆಳೆಗಳು ಮತ್ತೆ ಹಸಿರಿನಿಂದ ನಳನಳಿಸಲಿ ಎಂಬುದೇ ಇಡೀ ನಾಡಿನ ಆಶಯವಾಗಿದೆ.

**ಕಡಿಮೆ ಮಳೆ: ಜೂನ್ ಅಂತ್ಯಕ್ಕೆ ಉತ್ತಮ ನಿರೀಕ್ಷೆ:** ಈ ವರ್ಷ ಜೂನ್ ತಿಂಗಳಿನಲ್ಲಿ ವಾಡಿಕೆಗಿಂತ ಶೇ. 66 ರಷ್ಟು ಮಳೆ ಕೊರತೆಯಾಗಿದೆ. ಆದರೆ, ಹವಾಮಾನ ಮುನ್ಸೂಚನೆಗಳ ಪ್ರಕಾರ ಜೂನ್ ತಿಂಗಳ ಅಂತ್ಯದ ವೇಳೆಗೆ ತಾಲ್ಲೂಕಿನಲ್ಲಿ ಉತ್ತಮ ಮಳೆಯಾಗುವ ಸಾಧ್ಯತೆಯಿದೆ. ಮಳೆ ತಡವಾಗುತ್ತಿದೆ ಎಂದು ರೈತರು ಧೃತಿಗೆಡಬಾರದು, ಜುಲೈ ಮಧ್ಯಭಾಗದವರೆಗೂ ಬಿತ್ತನೆಗೆ ಉತ್ತಮ ಅವಕಾಶವಿದೆ ಎಂದು ಅಧಿಕಾರಿಗಳು ರೈತರಿಗೆ ಧೈರ್ಯ ತುಂಬಿದ್ದಾರೆ.

# ವಿದ್ಯುತ್ ಅವಘಡದಿಂದ ಯುವಕನ ಸಾವು; ಗ್ರಾಮಸ್ಥರ ದೂರು

• ಮಲ್ಲಮ್ಮ ನುಡಿ ವಾರ್ತೆ ಕುಕನೂರ

ಶೆಡ್ ನಿರ್ಮಾಣ ಮಾಡುವ ಉದ್ದೇಶದಿಂದ ಕೆಲಸ ನಿರ್ವಹಿಸುವಾಗ ಕೈಯಲ್ಲಿರುವ ಕಬ್ಬಿಣದ ಪೈಪು ತಮ್ಮ ನಿವೇಶನದ ಮೇಲೆ ಹಾದು ಹೋಗಿರುವ ವಿದ್ಯುತ್ ತಂತಿಗೆ ತಗಲಿ ಯುವಕನೋರ್ವ ಸ್ಥಳದಲ್ಲಿಯೇ ಸಾವಿಗೀಡಾದ ಘಟನೆ ಕುಕನೂರ ತಾಲೂಕಿನ ಇಟಗಿ ಗ್ರಾಮದಲ್ಲಿ ಸಂಭವಿಸಿದ್ದು ಮೃತ ವ್ಯಕ್ತಿಯ ಕುಟುಂಬಸ್ಥರು ಜೆಸ್ಕಾಂ ವಿರುದ್ಧ ದೂರು ದಾಖಲಿಸಿರುತ್ತಾರೆ.

ತಾಲೂಕಿನ ಇಟಗಿ ಗ್ರಾಮದ ತಮ್ಮ ನಿವೇಶನದಲ್ಲಿ ಸೆಡ್ ನಿರ್ಮಾಣ ಮಾಡುವ ವೇಳೆ ತಮ್ಮ ಕೈಯಲ್ಲಿರುವ ಕಬ್ಬಿಣದ ಪೈಪನ್ನು ನಿವೇಶನದ ಮೇಲೆ ಹಾದು ಹೋಗಿರುವ



11kv ವಿದ್ಯುತ್ ಸರಬರಾಜು ತಂತಿಗೆ ತಗಲಿದ ಪರಿಣಾಮ ಯುವಕ ಸ್ಥಳದಲ್ಲೇ ಮೃತಪಟ್ಟಿದ್ದು ಮೃತ ದುರ್ದೈವಿಯನ್ನು ನಾಗರಾಜ ಕುಂಬಾರ (36) ಗುರುತಿಸಲಾಗಿದ್ದು ಕುಟುಂಬಸ್ಥರು ಜೆಸ್ಕಾಂ ಕಂಪನಿಯ ವಿರುದ್ಧ ದೂರು ದಾಖಲಿಸಿರುತ್ತಾರೆ.

ಸಾವಿಗೀಡಾದ ವ್ಯಕ್ತಿಯ ಕುಟುಂಬದವರ ದೂರಿನಲ್ಲಿ ತಮ್ಮ ನಿವೇಶನದ ಮೇಲೆ ಹಾದು ಹೋಗಿರುವ ವಿದ್ಯುತ್ ತಂತಿಯನ್ನು ತೆರವುಗೊಳಿಸಿ ಷಡ್ ನಿರ್ಮಾಣಗೊಳಿಸುವುದಕ್ಕೆ ಅನುವು ಮಾಡಿಕೊಡಬೇಕೆಂದು ಸಾಕಷ್ಟು ಬಾರಿ ಗ್ರಾಮ ಪಂಚಾಯತಿ ಕಾರ್ಯಾಲಯ ಹಾಗೂ ಜೆಸ್ಕಾಂ ಕಾರ್ಯಾಲಯಕ್ಕೆ ಮನವಿ ನೀಡಿದ್ದು ಯಾವುದೇ ಕ್ರಮ ಕೈಗೊಳ್ಳದ ಪರಿಣಾಮ ಇಂದು ಸಾವು ಸಂಭವಿಸಿದ್ದು ಇದಕ್ಕೆ ಅಧಿಕಾರಿಗಳ ನಿರ್ಲಕ್ಷವೆ ನೇರ ಹೊಣೆ ಎಂದು ದೂರು ದಾಖಲಿಸಿರುತ್ತಾರೆ.

ಕುಕನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

# ಸಿದ್ಧಾಂತ ನಿಷ್ಠೆಗೆ ಡಾ.ಮುಖರ್ಜಿ ಪ್ರೇರಣೆ: ವೀರಣ್ಣ ಚರಂತಿಮಠ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ರಾಷ್ಟ್ರಭಕ್ತಿ, ಸಿದ್ಧಾಂತ ನಿಷ್ಠೆ ಹಾಗೂ ಭಾರತದ ಅಖಂಡತೆಯನ್ನು ಕಾಯ್ದುಕೊಳ್ಳಲು ಡಾ. ಶ್ಯಾಮಪ್ರಸಾದ್ ಮುಖರ್ಜಿ ತೋರಿದ ಬದ್ಧತೆ ಮತ್ತು ಆದರ್ಶಗಳು ಪ್ರತಿಯೊಬ್ಬರಿಗೂ ಪ್ರೇರಣೆಯಾಗಿವೆ ಎಂದು ಮಾಜಿ ಶಾಸಕ ಡಾ. ವೀರಣ್ಣ ಚರಂತಿಮಠ ಹೇಳಿದರು.

ನಗರದ ಶಿವಾನಂದ ಜೀನದಲ್ಲಿರುವ ಬಿಜೆಪಿ ಕಾರ್ಯಾಲಯದಲ್ಲಿ ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ಮತಕ್ಷೇತ್ರದ ವತಿಯಿಂದ ಮಂಗಳವಾರ ಆಯೋಜಿಸಿದ್ದ ಭಾರತೀಯ ಜನಸಂಘದ ಸಂಸ್ಥಾಪಕ ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಅವರ ಪುಣ್ಯಸ್ಮರಣೆ ಕಾರ್ಯಕ್ರಮದ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ಸಲ್ಲಿಸಿ ಅವರು ಮಾತನಾಡಿದರು.

ಪ್ರಖರ ರಾಷ್ಟ್ರೀಯವಾದಿಯಾಗಿದ್ದ ಡಾ. ಮುಖರ್ಜಿ ದೇಶದ ಅಖಂಡತೆ ಮತ್ತು ಏಕತೆಗಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟಿದ್ದರು. ಒಂದೇ



ದೇಶದಲ್ಲಿ ಎರಡು ಸಂವಿಧಾನ, ಇಬ್ಬರು ಪ್ರಧಾನಿ ಇರಲು ಸಾಧ್ಯವಿಲ್ಲ ಎಂಬ ದೃಢ ನಿಲುವಿನೊಂದಿಗೆ ಕಾಶ್ಮೀರದ ಸಂಪೂರ್ಣ ವಿಲೀನಕ್ಕಾಗಿ ಹೋರಾಡಿ ತಮ್ಮ ಪ್ರಾಣವನ್ನೇ ಬಲಿದಾನಗೈದ ಅವರ ರಾಷ್ಟ್ರಭಕ್ತಿ ಹಾಗೂ ಸಿದ್ಧಾಂತ ನಿಷ್ಠೆ ಅನನ್ಯವಾಗಿದ್ದು. ಭಾರತದ ಏಕತೆಗಾಗಿ ಅವರು ತೋರಿದ ಬದ್ಧತೆ ಮತ್ತು ಆದರ್ಶಗಳು ಇಂದಿಗೂ ದೇಶದ ಜನತೆಗೆ ಮಾರ್ಗದರ್ಶಿಯಾಗಿವೆ ಎಂದು ಹೇಳಿದರು.

ರಾಜ್ಯಸಭಾ ಸದಸ್ಯ ನಾರಾಯಣಸಾ ಬಾಂಡಗೆ ಮಾತನಾಡಿ, ಡಾ. ಶ್ಯಾಮ ಪ್ರಸಾದ್ ಮುಖರ್ಜಿ 1946ರಲ್ಲಿ ಅಖಿಲ ಭಾರತೀಯ ಹಿಂದೂ ಮಹಾಸಭೆಯ ಅಧ್ಯಕ್ಷರಾಗಿದ್ದರು. ನಂತರದಲ್ಲಿ ಆರ್‌ಎಸ್‌ಎಸ್‌ನ ಗೋಲ್ವಾಲ್ಕರ್ ಗುರೂಜಿಯವರೊಂದಿಗೆ ಸಮಾಲೋಚಿಸಿದ ಬಳಿಕ 1951ರ ಅಕ್ಟೋಬರ್ 21ರಂದು ದೆಹಲಿಯಲ್ಲಿ ಭಾರತೀಯ ಜನಸಂಘವನ್ನು ಸ್ಥಾಪಿಸಿದರು. ಅಂತಹ ಮಹನೀಯರು ಸ್ಥಾಪಿಸಿದ ಪಕ್ಷದಲ್ಲಿ ಕಾರ್ಯನಿರ್ವಹಿಸುವುದು ನಮ್ಮ ಪಾಲಿಗೆ ಹೆಮ್ಮೆಯ ಸಂಗತಿ. ರಾಷ್ಟ್ರ ರಕ್ಷಣೆ ಮತ್ತು ಸರ್ವರ ಕಲ್ಯಾಣವೇ ನಮ್ಮ ಧ್ಯೇಯವಾಗಿದ್ದು, ಸರ್ವೇ ಜನಾಃ ಸುಖಿನೋ ಭವಂತು ಎಂಬ ಆಶಯದೊಂದಿಗೆ ಬಿಜೆಪಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಡಾ. ಎಂ.ಎಸ್.ದಡ್ಡೆನ್ನವರ, ಗುಂಡುರಾವ ಶಿಂಧೆ, ಬಸವರಾಜ ಯಂಕಂಚಿ, ಸತ್ಯನಾರಾಯಣ ಹೇಮಾದ್ರಿ, ಸುರೇಶ ಕೊಣ್ಣೂರ, ಕಲ್ಲಪ್ಪ ಭಗವತಿ, ಮಲ್ಲೇಶ ವಿಜಾಪುರ, ಶ್ರೀಮತಿ ಸವಿತಾ ಲೆಂಕೆನ್ನವರ, ರೇಖಾ ಕಲಬುರಗಿ, ಬಸವರಾಜ ಹುನಗುಂದ, ಉಮೇಶ ಹಂಚಿನಾಳ, ರವಿ ದಾಮಜಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರ ಸಹಭಾಗಿತ್ವ ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಅಂತರರಾಷ್ಟ್ರೀಯ ಮಾದಕ ವಸ್ತು ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರೋಧಿ ದಿನದ ಹಿನ್ನೆಲ್ಲೆಯಲ್ಲಿ ಜಿಲ್ಲೆಯಾದ್ಯಂತ ಒಂದು ವಾರಗಳ ಕಾಲ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜನರಲ್ಲಿ ಅರಿವು ಮೂಡಿಸಲು ಜಾಥಾ, ವಿಚಾರ ಸಂಕಿರಣ ಹಾಗೂ ಜಾಗೃತಿ ಅಭಿಯಾನಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಆನಂದ್ ಕೆ ಹೇಳಿದರು.ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಮಂಗಳವಾರ ಮಾದಕ ದ್ರವ್ಯಗಳ ದುರ್ಬಳಕೆ ಮತ್ತು ಅಕ್ರಮ ಸಾಗಾಣಿಕೆ ವಿರುದ್ಧ ಅಂತರರಾಷ್ಟ್ರೀಯ ದಿನ ಆಚರಣೆಯ ದಿನ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು,ಮಾದಕ ದ್ರವ್ಯಗಳ ವ್ಯಸನವು ಇಂದು ಸಮಾಜ ಎದುರಿಸುತ್ತಿರುವ ಗಂಭೀರ ಸಮಸ್ಯೆಯಾಗಿದ್ದು, ಯುವಜನತೆ ತಮ್ಮ ಭವಿಷ್ಯವನ್ನು ಹಾಳುಮಾಡಿಕೊಳ್ಳುವಂತಹ ದುಷ್ಚಟಗಳಿಂದ ದೂರವಿರಬೇಕು ಎಂದು ಕರೆ ನೀಡಿದರು. ಮಾದಕ ವ್ಯಸನವು ವ್ಯಕ್ತಿಯ ಜೀವನವನ್ನಷ್ಟೇ ಅಲ್ಲ, ಕುಟುಂಬ ಮತ್ತು ಸಮಾಜದ ಮೇಲೆಯೂ ದುಷ್ಪರಿಣಾಮ ಬೀರುತ್ತದೆ. ಇದರಿಂದ ಪ್ರತಿಕೂಲ ಪರಿಣಾಮ ಉಂಟಾಗುತ್ತದೆ ಎಂದು ಹೇಳಿದರು.

ಯುವಕರು ಮಾದಕ ವಸ್ತುಗಳ ಆಕರ್ಷಣೆಗೆ ಒಳಗಾಗದೇ ಶಿಕ್ಷಣ, ಕ್ರೀಡೆ ಹಾಗೂ ಸೃಜನಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಜಿಲ್ಲೆಯಲ್ಲಿ ಆರೋಗ್ಯ ಇಲಾಖೆ, ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಮಾದಕ ದ್ರವ್ಯ ಸೇವನೆಯ ದುಷ್ಪರಿಣಾಮಗಳ ಕುರಿತು ವ್ಯಾಪಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ವ್ಯಸನಿಗಳ



ಗುರುತಿಸುವಿಕೆ, ಆರೋಗ್ಯ ತಪಾಸಣೆ ಹಾಗೂ ಕೌನ್ಸೆಲಿಂಗ್ ಮೂಲಕ ಅವರನ್ನು ಮುಖ್ಯವಾಹಿನಿಗೆ ತರಲು ಕ್ರಮ ಕೈಗೊಳ್ಳಲಾಗುತ್ತಿದೆ. ವ್ಯಸನದಿಂದ ಹೊರಬಂದು,ಸೂಕ್ತ ಚಿಕಿತ್ಸೆ ಮತ್ತು ಸಮಾಲೋಚನೆಯ ಮೂಲಕ ಹೊಸ ಬದುಕು ಆರಂಭಿಸಲು ಸಾಧ್ಯವಿದೆ ಎಂದು ಹೇಳಿದರು. ಟೆಲಿಮನಸ್ಸ ಟೋಲ್-ಫ್ರೀ ಮಾನಸಿಕ ಆರೋಗ್ಯದ ಸಹಾಯವಾಣಿ ಸಂ-ಖ್ಯೆ 14416 ಉಚಿತ ಕರೆಮಾಡುವ ಮೂಲಕ ಕನ್ನಡ ಭಾಷೆಯಲ್ಲಿಯೂ ಸಹಾಯ ಮಾಡುವ ಈ ಸಹಾಯವಾಣಿಗೆ ಕರೆ ಮಾಡಿ ತಮ್ಮ ಎಲ್ಲ ತರಹದ ಮಾನಸಿಕ ಆರೋಗ್ಯ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು, ಇದರ ಪ್ರಯೋಜನ ಪಡೆಯಬೇಕು ಎಂದರು.

**ಪ್ರತಿಜ್ಞಾವಿಧಿಬೋಧನೆ:** ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳು ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸುವ ಹಾಗೂ ಮಾದಕ ದ್ರವ್ಯ ಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸುವ ಪ್ರತಿಜ್ಞಾವಿಧಿಯನ್ನು ಬೋಧಿಸಿದರು. ಮಾದಕ ದ್ರವ್ಯಗಳ ದುರುಪಯೋಗದಿಂದ ಸಮಾಜವನ್ನು ಮುಕ್ತಗೊಳಿಸಲು ಪ್ರತಿಯೊಬ್ಬರೂ ಬದ್ಧರಾಗಬೇಕೆಂದು ಕರೆ ನೀಡಿದರು. ಪೊಲೀಸ್ ಇಲಾಖೆಯಿಂದ ವಾರಪೂರ್ತಿ ಜಾಗೃತಿ ಅಭಿಯಾನ: ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಮಾತನಾಡಿ, ಜಿಲ್ಲೆಯ ಪ್ರತಿಯೊಂದು ಪೊಲೀಸ್ ಠಾಣೆ ವ್ಯಾಪ್ತಿಯಲ್ಲೂ ಮಾದಕ ದ್ರವ್ಯ ವಿರೋಧಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ಈಗಾಗಲೇ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಲ್ಲಿ ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಲಾಗುತ್ತಿದೆ. ಸಾರ್ವಜನಿಕ ಸ್ಥಳಗಳಲ್ಲಿ ಕರಪತ್ರ ವಿತರಣೆ, ಸಾಮಾಜಿಕ ಜಾಲತಾಣಗಳ ಮೂಲಕ ಜಾಗೃತಿ ಅಭಿಯಾನ, ವಿಚಾರ ಸಂಕಿರಣಗಳು ಹಾಗೂ ವಿವಿಧ ಸ್ಪರ್ಧೆಗಳ ಮೂಲಕ ಜನಜಾಗೃತಿ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು. ಜೂನ್ 26ರಂದು ಜಿಲ್ಲೆಯಾದ್ಯಂತ ಕಳೆದ ಒಂದು ವರ್ಷದ ಅವಧಿಯಲ್ಲಿ ವಶಪಡಿಸಿಕೊಂಡಿರುವ ಮಾದಕ ವಸ್ತುಗಳ ನಾಶಗೊಳಿಸುವ ಪ್ರಕ್ರಿಯೆ ಕೈಗೊಳ್ಳಲಾಗುವುದು. ಒಟ್ಟು ಐದು ದಿನಗಳ ಕಾಲ ವಿವಿಧ ಅಭಿಯಾನ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಹೇಳಿದರು. ಮಾದಕ ದ್ರವ್ಯಗಳ ವಿರುದ್ಧದ ಅಭಿಯಾನ ಕೇವಲ ಪೊಲೀಸ್ ಇಲಾಖೆಯ ಜವಾಬ್ದಾರಿಯಲ್ಲ, ಅದು ಸಮಾಜದ ಪ್ರತಿಯೊಬ್ಬರ ಹೋರಾಟವಾಗಬೇಕು ಎಂದು ಹೇಳಿದರು. ಪಲ್ಸ್ ಪೋಲಿಯೊ, ಕ್ಷಯರೋಗ ನಿರ್ಮೂಲನೆ ಸೇರಿದಂತೆ ಹಲವು ಸಾಮಾಜಿಕ ಅಭಿಯಾನಗಳಲ್ಲಿ ಜನರ ಸಹಭಾಗಿತ್ವದಿಂದ ಯಶಸ್ಸು ಸಾಧಿಸಿರುವಂತೆ, ಮಾದಕ ದ್ರವ್ಯ ನಿರ್ಮೂಲನೆಯಲ್ಲಿಯೂ ಸಮಾಜದ ಪಾಲ್ಗೊಳ್ಳುವಿಕೆ ಅತ್ಯಗತ್ಯವಾಗಿದೆ ಎಂದರು. ಮಾದಕ ವ್ಯಸನವು ಯುವಶಕ್ತಿಯ ಮೇಲೆ ಮಾತ್ರವಲ್ಲ,ದೇಶದ ಆರ್ಥಿಕತೆ ಹಾಗೂ ಸಾಮಾಜಿಕ ವ್ಯವಸ್ಥೆಯ ಮೇಲೆಯೂ ದುಷ್ಪರಿಣಾಮ ಬೀರುತ್ತದೆ. ವಿದ್ಯಾರ್ಥಿಗಳು ಮತ್ತು ಯುವಕರು ವ್ಯಸನದ ದಾಸರಾಗದೆ ಆತ್ಮವಿಶ್ವಾಸ, ಉತ್ತಮ ಮೌಲ್ಯಗಳು ಮತ್ತು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಕುಟುಂಬದ ನಿರೀಕ್ಷೆಗಳಿಗೆ ತಕ್ಕಂತೆ ಬದುಕು ಕಟ್ಟಿಕೊಳ್ಳುವ ಮೂಲಕ ಗೌರವಯುತ ಜೀವನ ನಡೆಸಬೇಕು. ಆರೋಗ್ಯವಂತ ಮತ್ತು ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ರಾಮನಗೌಡ ಹಟ್ಟಿ,ಸಿಪಿಐ ಆರೀಫ್ ಮುಷಾಪುರಿ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ.ಎಲ್.ಎಚ್ ಬಿದರಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸೇರಿದಂತೆ ವಿವಿಧ ಶಾಲಾ-ಕಾಲೇಜಿನ ವಿದ್ಯಾರ್ಥಿಗಳು ಸಾರ್ವಜನಿಕರು ಭಾಗವಹಿಸಿದ್ದರು.

**ಜನಜಾಗೃತಿ ಜಾಥಾ ಚಾಲನೆ:** ನಗರದ ಶ್ರೀ ಸಿದ್ಧೇಶ್ವರ ದೇವಾಸ್ಥಾನದ ಆವರಣದಲ್ಲಿ ಮಾದಕ ದ್ರವ್ಯಗಳ ದುರ್ಬಳಕೆ ಮತ್ತು ಅಕ್ರಮ ಸಾಗಾಣಿಕೆ ವಿರುದ್ಧ ಅಂತರರಾಷ್ಟ್ರೀಯ ದಿನ ಆಚರಣೆಯ ಅಂಗವಾಗಿ ನಡೆದ ಜನ ಜಾಗೃತಿ ಜಾಥಾಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಾದ ರಿಷಿ ಆನಂದ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ರಿಷಿ ಆನಂದ ಅವರು ಜಂಟಿಯಾಗಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ರಾಮನಗೌಡ ಹಟ್ಟಿ ಸೇರಿದಂತೆ ಜಿಲ್ಲಾ ಔಷಧ ನಿಯಂತ್ರಣ ಇಲಾಖೆ, ಆರೋಗ್ಯ ಇಲಾಖೆ, ಜಿಲ್ಲಾ ಮನೋವೈದ್ಯಾಧಿಕಾರಿ ಡಾ.ಮಂಜುನಾಥ ಮಸಳಿ, ವಿವಿಧ ಶಾಲಾ ಕಾಲೇಜಿನ ವಿದ್ಯಾರ್ಥಿಗಳು ಜಾಥಾದಲದಲ್ಲಿ ಪಾಲ್ಗೊಂಡಿದ್ದರು.

# ಸಸಿನೆಡಲು ಕಟ್ಟಡ ಕಾರ್ಮಿಕರ ಹಣ ಬಳಕೆ ಬೇಡ: ಆಗ್ರಹ




**ಬಳ್ಳಾರಿ:** ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಹಮ್ಮಿಕೊಂಡಿರುವ ಸಸಿ ನಡೆಸುವ ಯೋಜನೆಗೆ ಕಟ್ಟಡ ಕಾರ್ಮಿಕ ಮಂಡಳಿಯಿಂದ 10 ಕೋಟಿ ಹಣ ಬಳಕೆ ಮಾಡಿಕೊಳ್ಳಲು ಉದ್ದೇಶಿಸಿರುವುದು ಸರಿಯಾದ ಕ್ರಮವಲ್ಲ ಕಾರ್ಮಿಕ ಇಲಾಖೆಯಿಂದ ಹಣವನ್ನು ಪಡೆಯುವುದಕ್ಕೆ ರಾಜ್ಯದ ಕಾರ್ಮಿಕ ಸಂಘಟನೆಗಳು ಮತ್ತು ಸಂಘಟನೆಯ ಮುಖಂಡರುಗಳು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ ಅದೇ ರೀತಿಯಾಗಿ ಕಲ್ಯಾಣ ಕರ್ನಾಟಕ ಕಾರ್ಮಿಕ ಸಂಘಟನೆಯ ಸಂಸ್ಥಾಪಕ ಅಧ್ಯಕ್ಷರಾದ ಎಂ ಮಲ್ಲೇಶ್ ವಿರೋಧವನ್ನು ವ್ಯಕ್ತಪಡಿಸಿ ಕಾರ್ಮಿಕ ಇಲಾಖೆಯ ಹಣ ದುರುಪಯೋಗವನ್ನು ತಕ್ಷಣ ನಿಲ್ಲಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳನ್ನು ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆಯನ್ನು ಬಿಡುಗಡೆ ಮಾಡಿರುವ ಎಂ ಮಲ್ಲೇಶ್, ಜೂನ್ 27 ರಂದು ಒಂದೇ ದಿನದಲ್ಲಿ 15 ಲಕ್ಷ ಸಸಿಗಳನ್ನು ನೆಡುವ ಬೃಹತ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ(BDA) ಕಾರ್ಯಕ್ರಮಕ್ಕೆ ಕಟ್ಟಡ ಕಾರ್ಮಿಕರ ಸೌಲಭ್ಯಗಳಿಗೆ ಮೀಸಲಾದ ಕಲ್ಯಾಣ ಮಂಡಳಿಯ ನಿಧಿ ರೂ 10 ಕೋಟಿಗಳನ್ನು ಬಳಕೆ ಮಾಡುವ ಕ್ರಮವು ಅತ್ಯಂತ ಖಂಡನಾರ್ಹ ಎಂದು ಕರ್ನಾಟಕ ರಾಜ್ಯ ಕಟ್ಟಡ ಹಾಗೂ ಅಸಂಘಟಿತ ಕಾರ್ಮಿಕ ಸರ್ವ ಸಂಘಗಳ ಒಕ್ಕೂಟ ಬೆಂಗಳೂರು ಹಾಗೂ ಕಲ್ಯಾಣ ಕರ್ನಾಟಕ ಕಟ್ಟಡ ಕಾರ್ಮಿಕರ ಸಂಘ ಬಳ್ಳಾರಿ (ನೋ) ವತಿಯಿಂದ. ತೀವ್ರವಾಗಿ ಖಂಡಿಸಿ .ಸಸಿ ನಡೆಸುವ ಸರ್ಕಾರಿ ಕಾರ್ಯಕ್ರಮಕ್ಕೆ ಬಡ ಕಾರ್ಮಿಕರ ನಿಧಿ ಬಳಸುವುದನ್ನು ಕೈಬಿಡಬೇಕೆಂದು ಆಗ್ರಹಿಸುತ್ತದೆ ಎಂದರು.

# ಸಮಾಜದ ಏಳಿಗೆಗೆ ಒಗ್ಗಟ್ಟು ಅಗತ್ಯ



**ಬಾಗಲಕೋಟೆ:** ಯಾವುದೇ ಸಮಾಜ ಅಭಿವೃದ್ಧಿ ಹೊಂದಲು ಒಗ್ಗಟ್ಟು ಅಗತ್ಯವಾಗಿದ್ದು, ಹೂಗಾರ ಸಮಾಜ ಸಹ ಒಗ್ಗೂಡಿ ಸಂಘಟಿತಗೊಳ್ಳಬೇಕಿದೆ ಎಂದು ಬಾಗಲಕೋಟೆ ಜಿಲ್ಲಾ ಹೂಗಾರ, ಗುರುವ, ಪೂಜಾರ, ಜೀರ್, ತಾಂಬೋಳಿ ಸಮಾಜ ಗೌರವಾಧ್ಯಕ್ಷ ಎಂ.ಬಿ.ಹೂಗಾರ ಹೇಳಿದರು.

ತಾಲ್ಲೂಕಿನ ಶಿರೂರ ಪಟ್ಟಣದಲ್ಲಿ ಜರುಗಿದ ಹೂಗಾರ ಸಮಾಜದ ಸಭೆಯಲ್ಲಿ ಮಾತನಾಡಿ, ನಮ್ಮಲ್ಲಿನ ಹೊಂದಾಣಿಕೆಯ ಕೊರತೆಯಿಂದಾಗಿ ಹೂಗಾರ ಸಮಾಜ ಯಾವುದೇ ಸೌಲಭ್ಯಗಳನ್ನು ಪಡೆಯದೇ ಹಿಂದುಳಿದಿದೆ. ಆ ಹಿನ್ನೆಲೆಯಲ್ಲಿ ಎಲ್ಲರೂ ಒಗ್ಗಟ್ಟಾಗಿ ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡಿ ಸಮಾಜದ ಮುಖ್ಯ ವಾಹಿನಿಗೆ ಬರುವುದು ಅಗತ್ಯವಾಗಿದೆ ಎಂದರು. ಸಮಾಜದ ಪ್ರತಿಭಾವಂತ ಮಕ್ಕಳಿಗೆ ಪುರಸ್ಕಾರ ನೀಡುವ ಸಂಬಂಧ ಜಿಲ್ಲಾ ಮಟ್ಟದ ಕಾರ್ಯಕ್ರಮ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ ಎಂದು ಹೂಗಾರ ಹೇಳಿದರು.

ಜಿಲ್ಲಾ ಅಧ್ಯಕ್ಷ ಎಚ್.ಬಿ.ಹೂಗಾರ ಮಾತನಾಡಿ, ಕಳೆದ ಸಾಲಿನ ಪಿಯುಸಿ ಹಾಗೂ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ಸಮಾಜದ ಪ್ರತಿಭಾವಂತ ಮಕ್ಕಳಿಗೆ ಪುರಸ್ಕಾರ ಹಾಗೂ ಹೂಗಾರ ಮಾದಯ್ಯ ಪ್ರಶಸ್ತಿ ನೀಡಲಾಗುತ್ತಿದ್ದು, ಜಿಲ್ಲೆಯ ಎಲ್ಲ ತಾಲ್ಲೂಕು ಅಧ್ಯಕ್ಷರುಗಳು ಸ್ಪಂದಿಸಿದ್ದಾರೆ. ಹೀಗಾಗಿ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳು ತಮ್ಮ ಅಂಕ ಪಟ್ಟಿಯನ್ನು ಆಯಾ ತಾಲ್ಲೂಕು ಅಧ್ಯಕ್ಷರುಗಳಿಗೆ ನೀಡುವಂತೆ ಹೇಳಿದರು.

ಕಾರ್ಯದರ್ಶಿ ಪ್ರವೀಣ ಪೂಜಾರ, ಖಂಜಾಚಿ ಜಗನ್ನಾಥ ಹೂಗಾರ, ಬಾಗಲಕೋಟೆ ತಾಲ್ಲೂಕು ಅಧ್ಯಕ್ಷ ಸಿದ್ದಪ್ಪ ಹೂಗಾರ, ಹಾಗೂ ಹನಮಂತ ಹೂಗಾರ, ಯಮನಪ್ಪ ಹೂಗಾರ, ಶಿವಾನಂದ ಹೂಗಾರ, ಶೇಖರ ಹೂಗಾರ, ಸಿದ್ದಪ್ಪ ಹೂಗಾರ, ನಾಗೇಶ ಹೂಗಾರ, ಪ್ರವೀಣ ಹೂಗಾರ, ಸಂಗಪ್ಪ ಹೂಗಾರ ಸೇರಿದಂತೆ ಮತ್ತಿತರರು ಇದ್ದರು.

# ಹೈ ಅಲರ್ಟ್: ಸಿಸಿ ಕಣ್ಗಾವಲಿನಲ್ಲಿ ಮೊಹರಂ ಆಚರಣೆ



**ಮುದಗಲ್:** ಮೊಹರಂ ಆಚರಣೆಯು ಶಾಂತಿಯುತವಾಗಿ ಹಾಗೂ ಅಹಿತಕರ ಘಟನೆಗಳು ಸಂಭವಿಸದಂತೆ, ಕಾನೂನು ಸು ವ್ಯವವಸ್ಥಿತವಾಗಿ ಮೊಹರಂ ಆಚರಣೆಗೆ ರಾಯಚೂರು ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಅರುಣಾಗ್ಸಗಿರಿ ನೇತೃತ್ವದಲ್ಲಿ, ಆಯಾ ಕಟ್ಟಿನ ಸ್ಥಳಗಳಲ್ಲಿ ಸಿಸಿ ಕ್ಯಾಮರ ಅಳವಡಿಕೆ ಮಾಡಲಾಗಿದೆ.

ಮೊಹರಂ ಹಬ್ಬ ಆಚರಣೆಯಲ್ಲಿ ಭಕ್ತರಿಗೆ ತೊಂದರೆಯಾಗದಂತೆ ಆಕ್ರಮ ಮಧ್ಯ ಮಾರಾಟ ಸೇರಿದಂತೆ ಇನ್ನಿತರ ಚಟುವಟಿಕೆಗಳಿಗೆ ಕಡಿವಾಣ ಹಾಕಲಾಗುತ್ತದೆ. ರಾತ್ರಿ ಸಮಯದಲ್ಲಿ ಲೈಟಿಂಗ ವ್ಯವಸ್ಥೆ ಕಲ್ಪಿಸಲಾಗಿದೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಆಯಾಕಟ್ಟಿನ ಸ್ಥಳಗಳಲ್ಲಿ 30 ಸಿಸಿ ಕ್ಯಾಮರ, 60ಬ್ಯಾರಿಕೆಡ್ ಹಾಗೂ ಹೆಚ್ಚವರಿ ಪೊಲೀಸ್ ಸಿಬ್ಬಂದಿಯನ್ನು ಬಂದೋಬಸ್ತಗೆ ನಿಯೋಜಿಸಲಾಗಿದೆ. 1ಎಸ್ಪಿ, 2ಡಿಎಸ್ಪಿ, 10ಸಿಪಿಐ, 2ಡಿಆರ್ ಪಾರ್ಟಿ, 2 ಕೆಎಸ್‌ಆರ್ಪಿ ಸೇರಿದಂತೆ 220 ಪಿಎಸ್‌ಐ,180ಹೆಡ್ ಕಾನ್ಸಟೇಬಲ್ ಮತ್ತು ಪೊಲೀಸ್ ಸಿಬ್ಬಂದಿ, 200ಗೃಹರಕ್ಷಕದಳ ನಿಯೋಜಿಸಲಾಗಿದೆ.

ಪುರಸಭೆ ಆಡಳಿತಾಧಿಕಾರಿ ಹಾಗೂ ಉಪ ವಿಭಾಗಾಧಿಕಾರಿ ಬಸವಣ್ಣೆಪ್ಪ ನೇತೃತ್ವದಲ್ಲಿ ಮೂಲಭೂತ ಸೌಕರ್ಯಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಪುರಸಭೆಯಿಂದ ಸ್ವಚ್ಚತೆ, ಕುಡಯುವ ನೀರು ಪೊರೈಕೆ ಹಾಗೂ ಗಣ್ಯಾಧಿಗಣ್ಯರ ವೇದಿಕೆ ಸೇರಿದಂತೆ ಇನ್ನಿತರ ಸೌಲಭ್ಯಗಳು ಕಲ್ಪಿಸಲಾಗುತ್ತದೆ.

ಸ್ಥಳೀಯ ಪೊಲೀಸ್ ಠಾಣಾ ಪಿಎಸ್‌ಐ ವೆಂಕಟೇಶ ಮಾಡಗೇರಿ ಹಾಗೂ ಪುರಸಭೆ ಮುಖ್ಯಾಧಿಕಾರಿ ಪ್ರವೀಣಕುಮಾರ ಬೋಗಾರ ಇವರ ಸಹಯೋಗದಲ್ಲಿ ಮೊಹರಂ ಆಚರಣೆಯ ಸುಗಮ ಕಾರ್ಯಕ್ರಮದ ರೂಪರೇಷ ಮಾಡಲಾಗಿದೆ.

# ಮಳೆ ಅಭಾವ: ನೀರು-ನಿರ್ವಹಣೆ ಅಚ್ಚುಕಟ್ಟಾಗಿರಲಿ: ಅಧಿಕಾರಿಗಳಿಗೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಜುಲೈ 2ನೇ ವಾರದಲ್ಲಿ ಮಳೆಯಾಗುವ ಸಾಧ್ಯತೆಯಿದೆ. ಆದಾಗ್ಯೂ ಮಳೆ ಅಭಾವದಿಂದ ಜಿಲ್ಲೆಯಾದ್ಯಂತ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಈ ನಿಟ್ಟಿನಲ್ಲಿ ಜವಾಬ್ದಾರಿ ಅರಿತು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಸಚಿವರಾದ ಡಾ. ಎಂ.ಬಿ. ಪಾಟೀಲ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಾಗಿ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆ ಸೇರಿದಂತೆ ಗ್ರಾಮೀಣ, ನಗರ, ಸ್ಥಳೀಯ ಸಂಸ್ಥೆ ಹಾಗೂ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಆಯಾ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು.

ಜಿಲ್ಲೆಯಲ್ಲಿ ಕುಡಿಯುವ ನೀರು ಪೂರೈಕೆಗೆ ಸಂಬಂಧಿಸಿದಂತೆ ವಿದ್ಯುತ್ ಪರಿವರ್ತಕಗಳ ಸಮಸ್ಯೆಯಿದ್ದಲ್ಲಿ ಸ್ಪೀಡ್ ಅಪ್ ಮಾಡಿ ಕುಡಿಯುವ ನೀರಿಗೆ ತಕ್ಷಣಕ್ಕೆ ವಿದ್ಯುತ್ ಪೂರೈಕೆಯಾಗುವಂತೆ ಹೆಸ್ಕಾಂ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದು ಸೂಚಿಸಿದರು.

**ಖಾಸಗಿ ಬೋರ್ ವೆಲ್ ಗುರುತಿಸಿ**

ಎಲ್ಲೆಲ್ಲಿ ನೀರಿನ ಸಮಸ್ಯೆ ಉಲ್ಬಣವಾಗಬಹುದೋ,



ಮುಂಚಿತವಾಗಿ ಮಾಹಿತಿ ಪಡೆದುಕೊಂಡು ಅಂತಹ ಸ್ಥಳದಲ್ಲಿ ಅಧಿಕಾರಿಗಳು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಅದಕ್ಕೆಂದೇ ಖಾಸಗಿ ಬೋರವೆಲ್‌ಗಳನ್ನು ಗುರುತಿಸಿ, ಅತಿ ಅವಶ್ಯವಿದ್ದಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಸಲು ಕ್ರಮ ವಹಿಸಬೇಕು ಎಂದರು. ಮಳೆ ಬರುವವರೆಗೆ ಮುಂಚಿತವಾಗಿ ಯೋಜನೆ ರೂಪಿಸಿಕೊಂಡು ಕಾರ್ಯನಿರ್ವಹಿಸಬೇಕು ಎಂದರು.

**ನೀರು-ನಿರ್ವಹಣೆ ಅಚ್ಚುಕಟ್ಟಾಗಿರಲಿ**

ಜುಲೈ ಎರಡನೇ ವಾರದಲ್ಲಿ ಮಳೆಯಾಗುವ ಆಶಾಭಾವನೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ವರದಿಯಿದೆ. ಈವರೆಗಿನ ಮಳೆ ಕೊರತೆಯಿಂದಾಗಿ ಯಾವುದೇ ಸಮಸ್ಯೆ ಯಾಗದಂತೆ ಅಚ್ಚು-ಕಟ್ಟಾಗಿ ನೀರು ನಿರ್ವಹಣೆ ಮಾಡಬೇಕು ಎಂದು ಸಚಿವರಾದ ಎಂ.ಬಿ. ಪಾಟೀಲ ತಿಳಿಸಿದರು.

ಗ್ರಾಮೀಣ, ನಗರ, ಸ್ಥಳೀಯ ಸಂಸ್ಥೆ ಹಾಗೂ ಪಾಲಿಕೆ ಸೇರಿದಂತೆ ಜಿಲ್ಲೆಯಾದ್ಯಂತ ಕುಡಿಯುವ ನೀರಿಗೆ ಸಂಬಂಧಿಸಿದಂತೆ ತಾಲೂಕು ಮಟ್ಟದಲ್ಲಿ ಆಗಾಗ ಟಾಸ್ಕ್ ಫೋರ್ಸ್ ಸಭೆ ನಡೆಸಿ ಸಮಸ್ಯೆ ಉಲ್ಬಣಗೊಳ್ಳದಂತೆ ಸ್ಥಳೀಯ ಮಟ್ಟದಲ್ಲಿ ಇತ್ಯರ್ಥಪಡಿಸಿಕೊಳ್ಳಬೇಕು ಎಂದರು.

**ನಿರ್ಲಕ್ಷ್ಯ ವಹಿಸಿದರೆ ಕ್ರಮ**

ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಅಧಿಕಾರಿಗಳು ಸಮನ್ವಯತೆಯಿಂದ ಗಂಭೀರವಾಗಿ ಕಾರ್ಯನಿರ್ವಹಿಸಬೇಕು. ನಿರ್ಲಕ್ಷ್ಯವಹಿಸಿದರೆ ಮುಲಾಜಿಲ್ಲದೇ ಕ್ರಮ ಜರುಗಿಸಲಾಗುವುದು. ಇನ್ನೊಂದೆಡೆ ಅಧಿಕಾರಿಗಳು ಕೇಂದ್ರಸ್ಥಾನದಲ್ಲಿದ್ದು, ಮೊಬೈಲ್ ಆನ್ ಇಟ್ಟುಕೊಂಡೇ ಅತ್ಯಂತ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದರು. ಮಳೆಯಾಗಿ ಒಳಹರಿವು ಹೆಚ್ಚಳವಾಗುವವರೆಗೆ ಜಲಾಶಯದಲ್ಲಿ ಸಾಕಷ್ಟು ಪ್ರಮಾಣದಲ್ಲಿ ಕುಡಿಯುವ ಉದ್ದೇಶಕ್ಕಾಗಿ ನೀರನ್ನು ಕಾಯ್ದಿರಿಸಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದ ಸಚಿವರು ಕುಡಿಯುವ ನೀರಿಗೆ ಆದ್ಯತೆಯಾಗಿಸಿಕೊಂಡು ಅತಿ ಜಾಗೃತೆಯಿಂದ ಕಾರ್ಯ ನಿರ್ವಹಿಸಬೇಕು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ವಾಡಿಕೆಗಿಂತ ಮಳೆ ಕಡಿಮೆಯಾಗಿದೆ. ಆದಾಗ್ಯೂ ಮಳೆಯಾಗುವವರೆಗೆ ಎದುರಾಗುವ ಸಮಸ್ಯೆಗಳಿಗೆ ಅಧಿಕಾರಿಗಳೆಲ್ಲರೂ ಸಜ್ಜಾಗಬೇಕು ಎಂದು ಸಚಿವರು ಹೇಳಿದರು.

ಮಳೆ ಅಭಾವದಿಂದಾಗಿ ಕೃಷಿ ಚಟುವಟಿಕೆಗಳ ಮೇಲೆ ಆಗುವ ಪರಿಣಾಮದ ಬಗ್ಗೆ ಗಂಭೀರವಾಗಿ ಕೆಲಸ ಮಾಡಬೇಕು ಎಂದರು.

ನಾರಾಯಣಪುರ ಹಿನ್ನೀರಿನ ಬಳಕೆ ಯೋಜನೆಯಿಂದ ಯಾವುದೇ ಕುಡಿಯುವ ನೀರಿನ ಸಮಸ್ಯೆ ಇರುವುದಿಲ್ಲ ಧೂಳಖೇಡದಲ್ಲಿ ಖಾಸಗಿ ಬೋರವೆಲ್, ಬಾವಿ ಜಲಮೂಲಗಳನ್ನು ಗುರುತಿಸಿಟ್ಟುಕೊಳ್ಳಬೇಕು. ಧೂಳಖೇಡ ಮತ್ತು ಆರು ಹಳ್ಳಿಗಳಿಗೆ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು ಎಂದರು.

ಇಂಡಿಯಲ್ಲಿ ಅಲ್ಲಿನ ನಗರಸಭೆ ಅಧಿಕಾರಿಗಳು ಸಂದರ್ಭ ಅವಲೋಕಿಸಿ ಯಾವುದೇ ಸಮಸ್ಯೆಯಾಗದಂತೆ ಅಧಿಕಾರಿಗಳು ಸಮನ್ವಯ ಸಾಧಿಸಿ ನಕ್ರಮ ಕೈಗೊಳ್ಳಬೇಕು. ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಕುಡಿಯುವ ನೀರಿನ ಸ್ಥಿತಿಗತಿ ಕುರಿತು ಪರಿಶೀಲನೆ ನಡೆಸಿದರು. ಬಹುಹಳ್ಳಿ ಕುಡಿಯುವ ನೀರಿನ ವ್ಯವಸ್ಥೆ ಜಿಲ್ಲೆಯಲ್ಲಿ ಅನುಷ್ಠಾನಗೊಳ್ಳುತ್ತಿದೆ. ಐಬಿಸಿ 11 ಬಹುಹಳ್ಳಿ ಕುಡಿಯುವ ನೀರಿನ ಯೋಜನೆ ಇದ್ದು, ಹೊರ್ತಿ ಭಾಗದಲ್ಲಿ ಜುಲೈ 15ರವರೆಗೆ ಸಮಸ್ಯೆ ಯಾಗುವುದಿಲ್ಲ.

ನೀರು ಪೋಲಾಗದಂತೆ ನೋಡಿಕೊಳ್ಳಬೇಕು. ಇಂಚಗೇರಿ, ಹೊರ್ತಿ ಭಾಗದಲ್ಲಿ ಬಲು ಎಚ್ಚರಿಕೆಯಿಂದ ನೀರಿನ ಸಮನ್ವಯತೆ ಕಾಯ್ದುಕೊಂಡು ಜುಲೈ 15ರವರೆಗೆ ನೀರು ಸದ್ಬಳಕೆಯಾಗುವ ನಿಟ್ಟಿನಲ್ಲಿ ನೀರು ಕಾಯ್ದುಕೊಳ್ಳುವಂತೆ ನೋಡಿಕೊಳ್ಳಬೇಕು ಎಂದು ಸಚಿವರು ಕಟ್ಟು-ನಿಟ್ಟಿನ ಸೂಚನೆ ನೀಡಿದರು.

ಲೋಣಿ ಕೆಬಿ ಹಾಗೂ ಬಳಗಾನೂರ ಕೆರೆ ತುಂಬಿವೆ. ವಿಜಯಪುರ ನಗರದಲ್ಲಿ ಭೂತನಾಳ ಕೆರೆಯಿಂದ ಐದು ವಾರ್ಡಗೆ ನೀರಿನ ತಾಪತ್ರಯವಿಲ್ಲ. ತಾಜಬಾವಡಿ ಪುನಶ್ಚೇತನಗೊಳಿಸಿದ್ದು ನೀರಿನ ಸದ್ಬಳಕೆಯಾಗಬೇಕು. ತಾಜಬಾವಡಿಗೆ ಯುಜಿಡಿ ನೀರು ಸೇರ್ಪಡೆಯಾಗದಂತೆ ಯೋಜನೆ ಸಿದ್ಧಪಡಿಸಿಕೊಂಡು ಕಾರ್ಯನಿರ್ವಹಿಸಲಾಗುತ್ತಿದೆ ಜಿಲ್ಲಾಧಿಕಾರಿ ಆನಂದ ಕೆ. ಅವರು ಸಚಿವರಿಗೆ ವಿವರಣೆ ನೀಡಿದರು.

**ನಗರದಲ್ಲಿ ಸಮರ್ಪಕ ನೀರು ಪೂರೈಸಿ**

ನಗರದ ಎಲ್ಲ ವಾರ್ಡುಗಳಿಗೆ ಸಮರ್ಪಕ ನೀರು ಒದಗಿಸಬೇಕು. ಈ ನಿಟ್ಟಿನಲ್ಲಿ ತಾಜಬಾವಡಿ ನೀರು ಬಳಸಲು ಅಧಿಕಾರಿಗಳು ಕ್ರಿಯಾಶೀಲತೆಯಿಂದ ಕಾರ್ಯ ನಿರ್ವಹಿಸಬೇಕು. ನಗರದಲ್ಲೂ ಸಹ ಖಾಸಗಿ ಬೋರವೆಲ್ ಗುರುತಿಸಿ ಗರಿಷ್ಠ ನೀರು ಪರೀಕ್ಷಿಸಿ, ಖಾಸಗಿ ಬೋರವೆಲ್ ವಾಟರ್ ಮ್ಯಾನೆಜಮೆಂಟ್ ಕೃಷ್ಣಾ ನದಿಯಿಂದ ಸರಬರಾಜಾಗುವ ನೀರನ್ನು ಕುಡಿಯುವ ನೀರಿಗಾಗಿ ಬಳಸಿ, ಉಳಿದಂತೆ ಬಾವಡಿ ಹಾಗೂ ಖಾಸಗಿ ಬೋರವೆಲ್ ಗುರುತಿಸಿಟ್ಟುಕೊಳ್ಳಬೇಕು ಎಂದರು.

ಬಾವಿ ಮತ್ತು ಖಾಸಗಿ ಬೋರವೆಲ್ ನೀರು ಪರೀಕ್ಷಿಸಿ, ಮನಸ್ಸಿದ್ದಲ್ಲಿ ಮಾರ್ಗ ಎಂಬಂತೆ ಕಾರ್ಯ ನಿರ್ವಹಿಸುವುದರ ಜೊತೆಗೆ ವಾರ್ಡವೈಸ್ ಮೈಕ್ರೊಪ್ಲ್ಯಾನ್ ಮಾಡಿಕೊಂಡು, ಪಾಲಿಕೆ ಹಾಗೂ ಜಲಮಂಡಳಿ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ತಾಕೀತು ಮಾಡಿದರು.



ಭಾಲ್ಕಿಯ ಬಾಲ್‌ಏಸು ಚರ್ಚ್‌ನಲ್ಲಿ ಕೆಯುಡಬ್ಲುಜೆ ನೂತನ ಅಧ್ಯಕ್ಷ ಜೈರಾಜ ಪಾತ್ರೆ,ಪ್ರ.ಕಾರ್ಯದರ್ಶಿ ಸಂತೋಷ ಬಿಜಿ ಪಾಟೀಲ್, ಗೌರವ ಅಧ್ಯಕ್ಷ ಅಶೋಕ ರಾಜೋಳೆ ಅವರಿಗೆ ಚರ್ಚ್ ಫಾದರ್ ಡೇವಿಡ್ ಆಂಟೋನಿ ಸನ್ಮಾನಸಿ ಗೌರವಿಸಿದರು. ಈ ಸಂದರ್ಭದಲ್ಲಿ ಪುರಸಭೆ ಮಾಜಿ ಸದಸ್ಯ ಸುಕನ್ಯೆ ರೇಷ್ಮೆ,ಮತ್ತು ರಾಜೇಶೇರ ರೇಷ್ಮೆ,ಡಾ.ಶ್ರೀನಿವಾಸ ಬೇಂದ್ರೆ ಸೇರಿದಂತೆ ಅನೇಕರಿದ್ದರು.

## ಪೌರ ಕಾರ್ಮಿಕರ ಸೇವೆ ಅನನ್ಯ



**ಚಿಟಗುಪ್ಪ:** ಪಟ್ಟಣದ ಪುರಸಭೆಯ ಮುಖ್ಯಾಧಿಕಾರಿ ಸತೀಶ ಗುಡ್ಡೆ ಹಾಗೂ ಹಿರಿಯ ಆರೋಗ್ಯ ನಿರೀಕ್ಷಕ ರವಿಕುಮಾರ್ ಸ್ವಾಮಿ ಹಾಗೂ ವೈಶಾಲಿ ಇವರ ಮಾರ್ಗದರ್ಶನದಲ್ಲಿ ಪೌರ ಕಾರ್ಮಿಕರು ಪಟ್ಟಣದ ಸ್ವಚ್ಛತೆಗೆ ಹಗಲಿರಳು ಶ್ರಮಿಸುತ್ತಿರುವ ಕಾರ್ಯ ಶ್ಲಾಘನೀಯವಾಗಿದೆ ಎಂದು ಸಾರ್ವಜನಿಕರು ತಿಳಿಸಿದ್ದಾರೆ. ಪಟ್ಟಣದ 22ನೇ ವಾರ್ಡಿನ ರೇವಣಸಿದ್ದೇಶ್ವರ ದೇವಸ್ಥಾನದ ಹತ್ತಿರ ಪೌರ ಕಾರ್ಮಿಕರು ಚರಂಡಿ ಸ್ವಚ್ಛತೆಗೊಳಿಸಿದ್ದಾರೆ. ಇವರ ಕಾರ್ಯಕ್ಕೆ ಕಾಲೋನಿಯ ನಿವಾಸಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

## ಪ್ರಗತಿ ಪರಿಶೀಲನಾ ಸಭೆ



**ಬೀದರ್:** ಜಿಲ್ಲೆಯಲ್ಲಿ ಬಾಕಿ ಇರುವ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಫಲಾನುಭವಿಗಳಿಗೆ ಸೌಲಭ್ಯಗಳನ್ನು 7 ದಿನದೊಳಗೆ ಇತ್ಯರ್ಥಗೊಳಿಸಿ ವರದಿ ನೀಡಲುವಂತೆ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ರಾಜ್ಯ ಅಧ್ಯಕ್ಷರಾದ ರಾಮಪ್ಪ ಎಂ. ಅವರು ಸಂಬಂದಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಅವರು ಮಂಗಳವಾರ ನಗರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಢಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಮತ್ತು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ಮಂಡಳಿ ಇವರ ಸಂಯುಕ್ತಾಶ್ರಯದಲ್ಲಿ ನಡೆದ ಭೋವಿ ನಿಗಮದಿಂದ ಅನುಷ್ಠಾನಗೊಳಿಸಿರುವ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಹಾಗೂ ಸಮುದಾಯ ಮುಖಂಡರುಗಳೊಂದಿಗೆ ಸಮಾಲೋಚನೆ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಈ ಸಮಾಜವು ಅತ್ಯಂತ ಬಡ ಹಾಗೂ ಹಿಂದುಳಿದ ಸಮಾಜವಾಗಿದ್ದು, ಶೈಕ್ಷಣಿಕ ಹಾಗೂ ಅರ್ಥಿಕವಾಗಿ ಬಹಳ ಹಿಂದೆ ಇದೆ, ಆದ್ದರಿಂದ ಸರ್ಕಾರವು 5 ಪಂಚ ಗ್ಯಾರಂಟಿಯೊಂದಿಗೆ ನಿಗಮದಿಂದಲ್ಲೂ ಕೂಡ 8 ಗ್ಯಾರಂಟಿ ಯೋಜನೆಗಳು ಜಾರಿ ಮಾಡಿದೆ. ನಮ್ಮ ಸಮುದಾಯದಲ್ಲಿ ಶಿಕ್ಷಣ ಹಾಗೂ ಮಾಹಿತಿ ಕೋರತೆಯಿಂದ ಈ ಯೋಜನೆಗಳು ತಲುಪುತ್ತಿಲ್ಲ. ಆ ಕಾರಣ ನಮ್ಮ ಸಮುದಾಯದ ಮಕ್ಕಳು ಶಾಲೆಯಿಂದ ಎಷ್ಟು ಮಕ್ಕಳು ಹೋರಗುಳಿದಿದ್ದರೆ, ಶಾಲೆ ಬಿಟ್ಟ ಮಕ್ಕಳ ಸಂಖ್ಯೆಗಳನ್ನು ಕ್ರೂಡಿಕರಿಸಿ ಯಾವುದೇ ಮಗು ಶಿಕ್ಷಣದಿಂದ ವಂಚಿತರಾಗದಂತೆ ಶಿಕ್ಷಣ ಇಲಾಖೆ ಕ್ರಮಕೈಗೊಳ್ಳುವಂತೆ ತಿಳಿಸಿದರು. ನಮ್ಮ ಸಮುದಾಯದವರು ಹೆಚ್ಚಿನದಾಗಿ ಕಲ್ಲು ಮತ್ತು ಮಣ್ಣುಗಳಿಂದ ಕೂಡಿದ ಪ್ರದೇಶಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದು, ಅದನ್ನೆ ನಂಬಿದ ನಮ್ಮ ಸಮುದಾಯದ ಮೇಲೆ ಅರಣ್ಯ, ಪೊಲೀಸ್ ಹಾಗೂ ಭೂ ಮತ್ತು ಗಣಿ ಇಲಾಖೆಗಳು ನಿರಂತರ ಶೋಷಣೆ ಮಡುತ್ತಿರುವುದು ಕಂಡಬಂದಿದೆ. ನಮ್ಮ ಸಮುದಾಯದ ಜನರು ಕಾನೂನು ಮೀರಿ ಕೆಲಸ ಮಾಡಿದ್ದಲ್ಲಿ ಅವರಿಗೆ ಸಮಾಜಾಯಿಸಿ ತಿಳಿ ಹೇಳಬೇಕು. ನಿಮ್ಮ ಇಲಾಖೆಯ ಕರ್ತವ್ಯಗಳ ಕುರಿತು ಅವರಿಗೆ ಮನವರಿಕೆ ಮಾಡಬೇಕು ಎಂದು ಮನವಿ ಮಾಡಿದರು.

## ಹಿಂದೂ ಸಮ್ಮೇಳನ ಯಶಸ್ಸಿಗೆ ಸಿದ್ಧತೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಜೂನ್ 28ರಂದು ಬಸವಕಲ್ಯಾಣದಲ್ಲಿ ಕನೇರಿ ಮಠದ ಪೂಜ್ಯ ಸ್ವಾಮೀಜಿಗಳ ನೇತೃತ್ವದಲ್ಲಿ ನಡೆಯಲಿರುವ ಬಸವಾದಿ ಶಿವಶರಣರ ಬೃಹತ್ ಹಿಂದೂ ಸಮ್ಮೇಳನದ ಹಿನ್ನೆಲೆಯಲ್ಲಿ ಭಾಲ್ಕಿ ನಗರದಲ್ಲಿ ಪ್ರಚಾರ ಚಟುವಟಿಕೆಗಳಿಗೆ ಚಾಲನೆ ನೀಡಲಾಯಿತು.

ನಗರದ ಬಸವೇಶ್ವರ ವೃತ್ತದ ಬಳಿ ಭಿತ್ತಿಪತ್ರ ಬಿಡುಗಡೆ ಮಾಡಿದ ಬಳಿಕ ಮಾತನಾಡಿದ ತಾಲೂಕು ಸಂಯೋಜಕ ಶಿವು ಲೋಖಂಡೆ, ಸಮಾಜದಲ್ಲಿ ಜಾಗೃತಿ, ಸಂಘಟನೆ ಹಾಗೂ ಸಾಂಸ್ಕೃತಿಕ ಮೌಲ್ಯಗಳ ಸಂರಕ್ಷಣೆಯ ಉದ್ದೇಶದಿಂದ ರಾಜ್ಯದ ವಿವಿಧ ಭಾಗಗಳಲ್ಲಿ ಸಮಾವೇಶಗಳು ನಡೆಯುತ್ತಿದ್ದು, ಬಸವಕಲ್ಯಾಣದಲ್ಲಿ ಆಯೋಜಿಸಿರುವ ಸಮ್ಮೇಳನದಲ್ಲೂ ಸಾರ್ವಜನಿಕರು ಹೆಚ್ಚಿನಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಭಾರತೀಯ ಸಂಸ್ಕೃತಿ, ಪರಂಪರೆ ಮತ್ತು ಸನಾತನ ಮೌಲ್ಯಗಳನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬರ



ಜವಾಬ್ದಾರಿಯಾಗಿದೆ. ಈ ಸಮ್ಮೇಳನವು ಯಾವುದೇ ವ್ಯಕ್ತಿ ಅಥವಾ ಸಮುದಾಯದ ವಿರುದ್ಧದ ಕಾರ್ಯಕ್ರಮವಲ್ಲ. ಸಮಾಜದಲ್ಲಿ ಒಗ್ಗಟ್ಟು, ಸಹಬಾಳ್ವೆ ಹಾಗೂ ಸಾಮಾಜಿಕ ಜಾಗೃತಿ ಮೂಡಿಸುವ ಉದ್ದೇಶದಿಂದ ಇದನ್ನು ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದರು.

"ನಾವೆಲ್ಲರೂ ಹಿಂದೂ, ನಾವೆಲ್ಲರೂ ಬಂಧು" ಎಂಬ ಸಂದೇಶ ಸಮಾಜದ ಪ್ರತಿಯೊಬ್ಬರಿಗೂ ತಲುಪಬೇಕು. ಧಾರ್ಮಿಕ ಮುಖಂಡರು ಹಾಗೂ ಸಮಾಜದ ಹಿರಿಯರು ಮೌಲ್ಯಾಧಾರಿತ ಜೀವನ ಮತ್ತು ಸೌಹಾರ್ದತೆಯ ಸಂದೇಶವನ್ನು ನೀಡುವ ಮೂಲಕ ಸಮಾಜದ ಬಲವರ್ಧನೆಗೆ ಕೈಜೋಡಿಸಬೇಕೆಂದು ಅವರು ಹೇಳಿದರು.

## ಹೊಸ ಕಾರ್ಯಕ್ಷೇತ್ರದತ್ತ ಡಾ. ಮಹೇಶ್

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಸಮುದಾಯ ಆರೋಗ್ಯ ಕೇಂದ್ರ ಗುರುಮಠಕಲ್‌ನಲ್ಲಿ ಹಿರಿಯ ದಂತ ವೈದ್ಯಾಧಿಕಾರಿ ಡಾ. ಮಹೇಶ್ ಕುಮಾರ ಸಜ್ಜನ್, ಶುಶ್ರೂಷಾಧಿಕಾರಿ ಶ್ರೀಮತಿ ಜಗದೇವಿ ಹಾಗೂ ಆಸ್ಪತ್ರೆ ಅಟೆಂಡೆಂಟ್ ಗ್ರೇಡ್-1(ಗ್ರೂಪ್-ಡಿ) ಶ್ರೀಮತಿ ಮಂಜು ಅವರಿಗೆ ಮಂಗಳವಾರ ಗೌರವ ಸನ್ಮಾನ ಮತ್ತು ಬೀಳ್ಕೊಡುಗೆ ಸಮಾರಂಭವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದ ದಿವ್ಯಸಾನ್ನಿಧ್ಯವನ್ನು ಖಾಸಾಮಠದ ಶ್ರೀ ಶಾಂತವೀರ ಮಹಾಸ್ವಾಮಿಗಳು ವಹಿಸಿದ್ದರು. ಜಿಲ್ಲಾ ಆರೋಗ್ಯಾಧಿಕಾರಿ ಡಾ. ಮಹೇಶ್ ಬಿರಾದಾರ್, ತಾಲೂಕು ಆರೋಗ್ಯಾಧಿಕಾರಿ ಡಾ. ಹನುಮಂತರೆಡ್ಡಿ, ಡಾ. ನೀಲಾಂಬಿಕಾ, ಡಾ. ವೆಂಕಟಮ್ಮ, ಡಾ. ನಾಜಿಯಾ, ಡಾ. ವಿನಾಯಕ ಸೇರಿದಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಶ್ರೀ ಶಾಂತವೀರ ಮಹಾಸ್ವಾಮಿಗಳು, ಡಾ. ಮಹೇಶ್ ಸಜ್ಜನ್ ಅವರು ಸರಳ ವ್ಯಕ್ತಿತ್ವದ ಜೊತೆಗೆ ಜನಸ್ನೇಹಿ



ವೈದ್ಯರಾಗಿದ್ದು, ಈ ಭಾಗದ ಜನರ ಆರೋಗ್ಯ ರಕ್ಷಣೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಅವರ ಮುಂದಿನ ಸೇವಾ ಪಯಣ ಯಶಸ್ವಿಯಾಗಲಿ ಎಂದು ಹಾರೈಸಿದರು.

ಜಿಲ್ಲಾ ಆರೋಗ್ಯಾಧಿಕಾರಿ ಡಾ. ಮಹೇಶ್ ಬಿರಾದಾರ್ ಮಾತನಾಡಿ, ಸರ್ಕಾರಿ ಸೇವೆಯಲ್ಲಿ ವರ್ಗಾವಣೆ ಮತ್ತು ನಿವೃತ್ತಿ ಅನಿವಾರ್ಯ ಪ್ರಕ್ರಿಯೆಗಳಾಗಿದ್ದು, ತಂತ್ರಜ್ಞಾನ ಎಷ್ಟೇ ಮುಂದುವರಿದರೂ ಮಾನವೀಯ ಮೌಲ್ಯಗಳೊಂದಿಗೆ ಜನಸೇವೆ ಮಾಡುವುದು ಅತ್ಯಂತ ಮುಖ್ಯವಾಗಿದೆ ಎಂದು ಹೇಳಿದರು. ಆರೋಗ್ಯ ಇಲಾಖೆ ಹುಟ್ಟಿನಿಂದ ಸಾವಿನವರೆಗೆ ಸೇವೆ ನೀಡುವ ಏಕೈಕ ಇಲಾಖೆಯಾಗಿದ್ದು, ಸಮಾಜದ ಬದುಕಿನಲ್ಲಿ ವಿಶೇಷ ಸ್ಥಾನ ಹೊಂದಿದೆ ಎಂದು ಹೇಳಿದರು.

## ಕಸಾಪದಿಂದ ಜಾನಪದ ಸಾಹಿತ್ಯ ಗೋಷ್ಠಿ ಆಯೋಜನೆ

• ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ

ಜಾನಪದ ಸಾಹಿತ್ಯದ ಮಾಲಲೀಕರು ಗ್ರಾಮೀಣರು. ಸಮುದಾಯ ಅಂಕು ಡೊಂಕುಗಳನ್ನು ತಿದ್ದುವ ಸಾಮರ್ಥ್ಯ ಜಾನಪದ ಸಾಹಿತ್ಯಕ್ಕೆ ಇದೆ. ಸರಳ ಭಾಷೆಯಿಂದ ಕೂಡಿದ ಸಾಹಿತ್ಯ ಜಾನಪದ ಎಂದು ಆಲಮೇಲ ವಿರಕ್ತಮಠದ ಜಗದೇವ ಮಲ್ಲಿಬೊಮ್ಮಯ್ಯ ಸ್ವಾಮಿಜಿ ಅಭಿಪ್ರಾಯ ವ್ಯಕ್ತಪಡಿಸಿದರು.

ವಚನ ಶಿಲಾಶಾಸನ ಮಂಟಪ ತಾಲೂಕಿನ ಇಂಗಳೇಶ್ವರ ವಿರಕ್ತಮಠದ ಸಿದ್ದಲಿಂಗ ಶಿವಯೋಗಿಗಳ 92ನೇ ಜಾತ್ರಾ ಮಹೋತ್ಸವದಲ್ಲಿ ಜಾನಪದ ಗೋಷ್ಠಿಯನ್ನು ಉದ್ಘಾಟಿಸಿ ಮಾತನಾಡಿ, ನಮ್ಮೆಲ್ಲರ ಹಿರಿಯರು ಜಾನಪದ ಸಂಸ್ಕೃತಿಯ ಮೌಲ್ಯಗಳನ್ನು ಪ್ರತಿಪಾದಿಸಿ ಅದರಂತೆ ನಡೆದು ಸುಂದರ ಸೌಹಾರ್ದತೆಯ ಮೂಲಕ ಜೀವನ ಕಟ್ಟಿಕೊಂಡು ಮಾದರಿಯಾಗಿದ್ದಾರೆ ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ ಜಾನಪದ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಬಾಳನಗೌಡ ಪಾಟೀಲ



ಮಾತನಾಡಿ. ಗ್ರಾಮೀಣರು ಜಾನಪದ ಸಾಹಿತ್ಯ ಬೆಳೆಸಿ ಉಳಿಸಿದವರು. ಮೌಖಿಕ ಪರಂಪರೆಯಿಂದ ಬೆಳೆದು ಬಂದ ಜನಸಾಮಾನ್ಯರ ಸಾಹಿತ್ಯವಾಗಿದೆ. ಜನಪದ ಗೀತೆಗಳು. ಕಥೆಗಳು. ಗಾದೆಗಳು. ಒಗಟುಗಳು ಪ್ರಖ್ಯಾತಗೊಂಡಿವೆ. ರಾಜ್ಯದಲ್ಲಿ ಜಾನಪದ ವಿಶ್ವವಿದ್ಯಾಲಯ ಸ್ಥಾಪನೆಯಾಗಿದ್ದು ಜನಪದರ ಆಸ್ತಿ ಎಂದರು.

ಸಾಹಿತಿ ಹಾಗೂ ಶಿಕ್ಷಕ ಅಶೋಕ ಹಂಚಲಿ ಜಾನಪದ ಸಾಹಿತ್ಯದಲ್ಲಿ ಜೀವನದ ಮೌಲ್ಯಗಳು ಕುರಿತು ವಿಷಯವನ್ನು ಮಾತನಾಡಿ, ಜಾನಪದ ಸಾಹಿತ್ಯ ಸಮಾಜದ ಜೀವನಾಡಿ. ಜಾನಪದ ಹಾಡು ಮತ್ತು ಕಥೆಗಳು ಸಾಂಸ್ಕೃತಿಕ ಪರಂಪರೆಯ ಹಾಗೂ ನೈತಿಕ ಮೌಲ್ಯಗಳು ಹಾಗೂ ಬದುಕಿನ ಅನುಭವಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಮಾಧ್ಯಮವಾಗಿದೆ. ಎಂದು ಹೇಳುತ್ತಾ ಅನೇಕ ಜಾನಪದ ಹಾಡುಗಳನ್ನು ಹಾಡಿ ರೈತರ ಪ್ರಾಮಾಣಿಕ ಜೀವನದ ಮೇಲೆ ಬೆಳಕನ್ನು ಚಲ್ಲಿದರು.

ಸರಕಾರಿ ನೌಕರರ ಸಂಘದ ಅಧ್ಯಕ್ಷ ಶಿವಾನಂದ ಮಂಗಾನವರ. ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಬಸವರಾಜ ಹಾರಿವಾಳ. ಜಾನಪದ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ದೇವೇಂದ್ರ ಗೋನಾಳ. ಜಾನಪದ ಚಿಂತಕ ಬಸವರಾಜ ಸಾರವಾಡ ಜಾನಪದ ಹಾಡುಗಳನ್ನು ಹಾಡಿದರು. ಇದೇ ಸಂದರ್ಭದಲ್ಲಿ ಹೆಬ್ಬಾಳ ಗ್ರಾಮದ ರೈತರ ಹಂತಿ ಪದ ಹಾಡಿ ರಂಜಿಸಿದರು. ಕಸಾಪ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಸಾಪ ತಾಲೂಕ ಅಧ್ಯಕ್ಷ ಶಿವಾನಂದ ಡೋಣೂರ ಸ್ವಾಗತಿಸಿ ಗೌರವಿಸಿದರು. ಶಶಿಕಲಾ ನಾಯ್ಕೋಡಿ ಜಾನಪದ ಗೀತಗಾಯನ ಮಾಡಿದರು. ರೇಖಾ ಕುಂಬಾರ ಪ್ರಾರ್ಥಿಸಿದರು. ಮಮತಾ ಮುಳಸಾವಳಗಿ ನಿರೂಪಿಸಿದರು. ರೂಪಾ ರಜಪೂತ ವಂದಿಸಿದರು.

ವಿವೇಕಾನಂದ ಕಲ್ಯಾಣಶೆಟ್ಟಿ, ಬಾಬುರಾವ ಮಹಾರಾಜ, ನಿಂಗಪ್ಪ ಬೋಮ್ಮನಳ್ಳಿ, ಕಾಶಿನಾಥ ಅವಟಿ, ಎಸ್ ಎಲ್ ಒಂಕಾರ ಯಮನಪ್ಪ ಮಿಣಜಗಿ, ವಿಜಯಲಕ್ಷ್ಮಿ ಹಳಕಟ್ಟಿ, ಈರಣ್ಣ ಬೆಕಿನಾಳ, ಸಿ ಬಿ ಬಿರಾದಾರ ಮುಂತಾದವರು ಉಪಸ್ಥಿತರಿದ್ದರು.

# ಬಾರದ ಒಳಹರಿವು ಮಹಾ ಮಳೆಯತ್ತ ರೈತರ ಚಿತ್ತ

• ಮಲ್ಲಮ್ಮ ನುಡಿ ವಾರ್ತೆ ಆಲಮಟ್ಟಿ

ಜೂನ್ ಸಾತ್ ಬಂದರೂ ರಾಜ್ಯದ ಪ್ರಮುಖ ಜಲಾಶಯಗಳಲ್ಲಿ ಒಂದಾದ ಆಲಮಟ್ಟಿ ಜಲಾಶಯಕ್ಕೆ ನಿರೀಕ್ಷಿತ ಪ್ರಮಾಣದ ಒಳಹರಿವು ಆರಂಭವಾಗದಿರುವುದು ರೈತರಲ್ಲಿ ಆತಂಕಕ್ಕೆ ಕಾರಣವಾಗಿದೆ.

ಸಾಮಾನ್ಯವಾಗಿ ಜೂನ್ ಆರಂಭದ ವೇಳೆಗೆ ಮಹಾರಾಷ್ಟ್ರ ಹಾಗೂ ಉತ್ತರ ಕರ್ನಾಟಕ ಭಾಗಗಳಲ್ಲಿ ಮುಂಗಾರು ಚುರುಕುಗೊಂಡು ಕೃಷ್ಣಾ ನದಿಯಲ್ಲಿ ನೀರಿನ ಹರಿವು ಹೆಚ್ಚಾಗುತ್ತಿತ್ತು. ಈ ಬಾರಿ ಮಳೆಯ ಕೊರತೆಯಿಂದ ಜಲಾಶಯದ ಒಳಹರಿವು ಇನ್ನೂ ಆರಂಭವಾಗಿಲ್ಲ.

ವಿಜಯಪುರ ಸೇರಿದಂತೆ ಉತ್ತರ ಕರ್ನಾಟಕದ ರೈತರು ಮಳೆ ಹಾಗೂ ಜಲಾಶಯದ ನೀರಿನ ಮೇಲೆ ಅವಲಂಬಿತರಾಗಿದ್ದು, ಜೂನ್ ಮೊದಲ ವಾರದಲ್ಲೇ ಮುಂಗಾರು ಮಳೆ ಪ್ರಬಲವಾಗದಿರುವುದು ಕೃಷಿ ಚಟುವಟಿಕೆಗಳ ಮೇಲೂ ಪರಿಣಾಮ ಬೀರಿದೆ. ಹಲವೆಡೆ ರೈತರು ಹೊಲ ಸಿದ್ಧತೆ ಪೂರ್ಣಗೊಳಿಸಿದ್ದರೂ ಮಳೆ ಕೊರತೆಯಿಂದ ಬಿತ್ತನೆ ಕಾರ್ಯ ಆರಂಭಿಸಲು ಹಿಂಜರಿಯುತ್ತಿದ್ದಾರೆ.

ಜೂನ್ ಸಾತ್ ಎಂದರೆ ಉತ್ತರ ಕರ್ನಾಟಕದ ರೈತಾಪಿ ವರ್ಗ ವಿಶಿಷ್ಟವಾಗಿ ಆಚರಿಸುತ್ತಾರೆ. ಬೇಸಿಗೆ ಕಳೆದು ಮುಂಗಾರು ಹಂಗಾಮು ಆರಂಭವಾಗುವ ಈ ಹೊತ್ತಿನಲ್ಲಿ ಪ್ರತಿ ಬಾರಿ ಜಲಾಶಯಕ್ಕೆ ಒಳಹರಿವು ಕಂಡು ಬರುತ್ತಿತ್ತು. ಇದರಿಂದ ಕೃಷ್ಣಾ ಅಚ್ಚುಕಟ್ಟು ಪ್ರದೇಶದ ರೈತರಿಗೆ ಹಿಗ್ಗು ತರುತ್ತಿತ್ತು. ಜುಲೈ ತಿಂಗಳಲ್ಲಿ ಬರುವ ಕಡ್ಲಿಗರ ಹುಣ್ಣಿಮೆ(ಗುರು ಪೂರ್ಣಿಮೆ) ದಿನ ಜಲಾಶಯ ಭರ್ತಿಯತ್ತ ಸಾಗುತ್ತಿತ್ತು. ರೈತರು ಬಾಗಿನ ಅರ್ಪಿಸಿ ಸಂಭ್ರಮಿಸುತ್ತಿದ್ದರು. ಆದರೆ ಈ ಬಾರಿ ಇದುವರೆಗೂ ಒಳಹರಿವು ಕಂಡು ಬಂದಿಲ್ಲ.



### ಆಲಮಟ್ಟಿ ಜಲಾಶಯಕ್ಕೆ ಮಹಾ ಮಳೆ ಆಸರೆ!

**ಆಲಮಟ್ಟಿ ಜಲಾಶಯಕ್ಕೆ ಮಹಾರಾಷ್ಟ್ರದ ಪಶ್ಚಿಮಘಟ್ಟ ಪ್ರದೇಶಗಳಲ್ಲಿ ಸುರಿಯುವ ಮಳೆಯೇ ಪ್ರಮುಖ ಆಸರೆಯಾಗುತ್ತದೆ. ರಾಜ್ಯದಲ್ಲಿ ಮಳೆಯಾಗದಿದ್ದರೂ ಕೃಷ್ಣಾ ನದಿ ಉಗಮ ಸ್ಥಾನ ಮಹಾಬಳೇಶ್ವರ ಸೇರಿದಂತೆ ಕೃಷ್ಣಾ ಜಲಾನಯನ ವ್ಯಾಪ್ತಿಯಲ್ಲಿ ಸುರಿವ ಮಳೆಯಿಂದಾಗಿ ಆಲಮಟ್ಟಿ ಜಲಾಶಯ ಭರ್ತಿಯಾಗುತ್ತಾ ಬಂದಿದೆ. ಅಲ್ಲಿ ಭಾರಿ ಪ್ರಮಾಣದಲ್ಲಿ ಮಳೆಯಾದಾಗ ಕೃಷ್ಣೆಯ ಉಪನದಿಗಳಾದ ಕೊಯ್ನಾ, ದೂದಗಂಗಾ, ವೇದಗಂಗಾ, ಘಟಪ್ರಭಾ ಸೇರಿದಂತೆ ನಾನಾ ನದಿಗಳು ತುಂಬಿ ಹರಿದಾಗ ಆಲಮಟ್ಟಿ ಜಲಾಶಯಕ್ಕೆ ಹೇರಳ ಪ್ರಮಾಣದಲ್ಲಿ ನೀರು ಬರುತ್ತದೆ. ಅಲ್ಲದೇ ಕೆಲ ಬಾರಿ ಪ್ರವಾಹ ಕೂಡ ಉಂಟಾಗಿದೆ. ಆದರೆ ಸದ್ಯ ಪಶ್ಚಿಮ ಘಟ್ಟಗಳಲ್ಲಿ ಮಳೆ ಬಾರದ ಕಾರಣ ಒಳಹರಿವು ಉಂಟಾಗಿಲ್ಲ. ಇದರಿಂದ ಕೃಷ್ಣಾ ನದಿ ತೀರದ ರೈತರು, ವಿಶೇಷವಾಗಿ ನೀರಾವರಿ ಆಧಾರಿತ ಬೆಳೆಗಳನ್ನು ಬೆಳೆಯುವವರು ಚಿಂತೆಗೆ ಒಳಗಾಗಿದ್ದಾರೆ.**

2025ರಲ್ಲಿ ಆಲಮಟ್ಟಿ ಜಲಾಶಯಕ್ಕೆ ಮೇ 19ರಿಂದ ಒಳಹರಿವು ಆರಂಭಗೊಂಡಿತ್ತು. ಮೇ ತಿಂಗಳ ಮೂರನೇ ವಾರಕ್ಕೆ ಒಳಹರಿವು ಕಂಡು ಬಂದಿರುವುದು ಜಲಾಶಯ ಇತಿಹಾಸದಲ್ಲಿಯೇ ಅದು ಮೊದಲ ಬಾರಿಯಾಗಿತ್ತು.

2022ರಲ್ಲಿ ಅಸಾನಿ ಚಂಡಮಾರುತದ ಪರಿಣಾಮ ಸುರಿದ ಮಳೆಯಿಂದಾಗಿ ಮೇ.21ರಿಂದ ಒಳಹರಿವು ಆರಂಭಗೊಂಡಿದ್ದರೆ 2021ರಲ್ಲಿ ತೌತೆ ಚಂಡಮಾರುತದ ಪರಿಣಾಮ ಜಲಾಶಯಕ್ಕೆ ಮೇ.24ರಿಂದ ಒಳಹರಿವು ಕಂಡು ಬಂದಿತ್ತು. 2020ರಲ್ಲಿ ಜೂ.5ರಂದು, 2019ರಲ್ಲಿ ಜು.3ರಂದು ಒಳಹರಿವು ಕಂಡು ಬಂದಿತ್ತು.

**ಕಳೆದಬಾರಿ 55 ಟಿಎಂಸಿ!:** 519.60 ಮೀಟರ್ ಎತ್ತರದಲ್ಲಿ 123.081 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯದ ಆಲಮಟ್ಟಿ ಜಲಾಶಯದಲ್ಲಿ ಶನಿವಾರ ಬೆಳಗ್ಗೆ 508.39 ಮೀಟರ್ ಎತ್ತರದಲ್ಲಿ 22.888 ಟಿಎಂಸಿ ನೀರು ಸಂಗ್ರಹವಿತ್ತು. ಕೆರೆ ತುಂಬಲು ಸೇರಿದಂತೆ ಒಟ್ಟು 1,806 ಕ್ಯುಸೆಕ್ ಹೊರಹರಿವು ಇತ್ತು. 2025ರ ಜೂ.6ರಂದು 514.09 ಮೀಟರ್ ಎತ್ತರದಲ್ಲಿ 55.392 ಟಿಎಂಸಿ ನೀರು ಸಂಗ್ರಹವಿತ್ತು. 5,885 ಕ್ಯುಸೆಕ್ ಒಳಹರಿವು ಇತ್ತು. ಕುಡಿವ ನೀರು ಸೇರಿದಂತೆ ಒಟ್ಟು 2,158 ಕ್ಯುಸೆಕ್ ಹೊರಹರಿವು ಇತ್ತು. 2025ಕ್ಕೆ ಹೋಲಿಸಿದರೆ ಈ ವರ್ಷ 32.504 ಟಿಎಂಸಿ ನೀರು ಕಡಿಮೆ ಇದೆ.

ಸದ್ಯ ಆಲಮಟ್ಟಿ ಜಲಾಶಯದಲ್ಲಿ ಸಂಗ್ರಹಗೊಂಡಿರುವ 22.888 ಟಿಎಂಸಿ ನೀರನಲ್ಲಿ ಡೆಡ್ ಸ್ಟೋರೇಜ್ 17.61 ಟಿಎಂಸಿ ಹೊರತು ಪಡಿಸಿ 5.268 ಟಿಎಂಸಿ ನೀರು ಬಳಸಬಹುದಾಗಿದೆ. ಈ ನೀರನ್ನು ಕೇವಲ ಕುಡಿವ ನೀರಿನ ಉದ್ದೇಶಕ್ಕೆ ಮಾತ್ರ ಬಳಸಲಾಗುತ್ತದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200215

PRGI NO. 120927 (RNINO:KARKAN/2011/48371)